ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 182 ಸಂಚಿಕೆ- 182 | PAGE-8 ಪುಟ-8 | ಭಾನುವಾರ 31.08.2025 | RS.2/- ಬೆಲೆ 2/-

## ಮರ್ಯಾದಾ ಹತ್ಯೆ: ಅನ್ಯಜಾತಿ ಯುವಕನೊಂದಿಗೆ ಪ್ರೀತಿ ಮಗಳನ್ನು ಕೊಂದು ಸುಟ್ಟುಹಾಕಿದ ತಂದೆ







ಘಟನಾ ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಮಲ್ಲಮ್ಮನುಡಿವಾರ್ತೆ ಕಲಬುರಗಿ:ಅ.30: ಅನ್ಯಜಾತಿಯ ಯುವಕನನ್ನು ಪ್ರೀತಿಸುತ್ತಿದ್ದ ಮಗಳನ್ನು ತಂದೆ ಹಾಗೂ ಕುಟುಂಬಸ್ಥರು ಸೇರಿ ಹತ್ಯೆ ಮಾಡಿ, ಸುಟ್ಟು ಹಾಕಿರುವ ಘಟನೆ ಕಲಬುರಗಿಯ ಮೇಳಕುಂದಾ (ಬಿ) ಗ್ರಾಮದಲ್ಲಿ ನಡೆದಿದೆ.

ಕೊಲೆಯಾದ ಯುವತಿಯನ್ನು ಕವಿತಾ ಕೊಳ್ಳೂರ (18) ಎಂದು ಗುರುತಿಸಲಾಗಿದೆ. ಆಕೆಯ ತಂದೆ ಶಂಕರ ಕೊಳ್ಳೂರ ಹಾಗೂ ಸಂಬಂಧಿಗಳಾದ ಶರಣು, ದತ್ತು ಚೋಳಾಭರ್ಧಿ ವಿರುದ್ಧ ಕೊಲೆ ಆರೋಪ ಕೇಳಿಬಂದಿದೆ. ಈ ಸಂಬಂಧ ಫರಹತಾಬಾದ್ ಠಾಣೆ ಪೊಲೀಸರು ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

ಪ್ರಾಥಮಿಕ ಮಾಹಿತಿಯಂತೆ ಕವಿತಾ, ಅದೇ ಗ್ರಾಮದ ಅನ್ಯಜಾತಿಯ ಯುವಕನನ್ನು ಪ್ರೀತಿಸುತ್ತಿದ್ದಳು. ಪಿಯುಸಿ ಓದಲು ಕಲಬುರಗಿಗೆ ಬಂದಿದ್ದ ವೇಳೆ ಇವರಿಬ್ಬರ ನಡುವೆ ಪರಿಚಯವಾಗಿತ್ತು. ಪ್ರೀತಿ ವಿಚಾರ ಮನೆಯವರಿಗೆ ತಿಳಿದಾಗ, ಕಾಲೇಜು ಬಿಡಿಸಿ ಮನೆಗೆ ಕರೆಸಿದ್ದರು. ಆದರೆ ಕವಿತಾ ಮದುವೆ ಮಾಡಲು ಪಟ್ಟು ಹಿಡಿದಿದ್ದಳೆಂದು ಪೊಲೀಸರು ತಿಳಿಸಿದ್ದಾರೆ. ಇದರಿಂದ ಮಧ್ಯರಾತ್ರಿ ಮನೆಯವರು ಸೇರಿ ಕವಿತಾಳ ಕತ್ತು ಹಿಸುಕಿ ಕೊಲೆ ಮಾಡಿದ್ದರು. ನಂತರ ಕೀಟನಾಶಕ ಸುರಿದು ಆತ್ಮಹತ್ಯೆ ರೀತಿ ಬಿಂಬಿಸಲು ಯತ್ನಿಸಿದ್ದರು. ಬೆಳಗ್ಗೆ ಗ್ರಾಮದ ಹೊರವಲಯದ ಜಮೀನಿಗೆ ದೇಹವನ್ನು ಕೊಂಡೊಯ್ದು ಸುಟ್ಟಿದ್ದರು ಎಂದು ತನಿಖೆಯಿಂದ ಗೊತ್ತಾಗಿದೆ. ಪೊಲೀಸರು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಮೂಳೆ ಅವಶೇಷಗಳನ್ನು ಸಂಗ್ರಹಿಸಿ ಕಳುಹಿಸಿದ್ದಾರೆ.

ಗ್ರಾಮದಲ್ಲಿ ಉದ್ವಿಗ್ನತೆ ಉಂಟಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಹೆಚ್ಚುವರಿ ಪೊಲೀಸ್ ಪಡೆ ನಿಯೋಜಿಸಲಾಗಿದೆ.

## ಪೊಲೀಸರ ಸಾಮಾಜಿಕ ಬದ್ಧತೆಯಿಂದ ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ




ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.30: ರಾಜ್ಯದಲ್ಲಿ ಜಾತಿ ವ್ಯವಸ್ಥೆಯಿದ್ದು, ಅನೇಕ ದುರ್ಬಲ ವರ್ಗದವರು ಜಾತಿ ತಾರತಮ್ಯವನ್ನು ಅನುಭವಿಸುತ್ತಿದ್ದಾರೆ. ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ದೌರ್ಜನ್ಯಗಳನ್ನು ತಡೆಗಟ್ಟಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ರಾಜಭವನದಲ್ಲಿ ನಡೆದ ರಾಜ್ಯ ಗೃಹ ಇಲಾಖೆಯಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಅಧಿಕಾರಿಗಳಿಗೆ ರಾಷ್ಟ್ರಪತಿ ಪದಕ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಸ್ಥಾಪಿಸಿದೆ. ನಾನು ಇತ್ತೀಚೆಗೆ ನಡೆಸಿದ ಪರಿಶೀಲನಾ ಸಭೆಯಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಗಳ ಕಾರ್ಯ ಮತ್ತು ಪ್ರಗತಿ ತೃಪ್ತಿದಾಯಕವಿಲ್ಲ ಎಂಬುದನ್ನು ಗಮನಿಸಿದ್ದೇನೆ. ಇದನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ದುರ್ಬಲ ವರ್ಗದವರಿಗೆ ಸುರಕ್ಷತೆ ಒದಗಿಸುವ ಸರ್ಕಾರದ ಉದ್ದೇಶ ಸಫಲವಾಗಬೇಕು. ಇತರೆ ರಾಜ್ಯಗಳಿಗೆ ಹೋಲಿಸಿದರೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ಪ್ರಕರಣಗಳ ವಿರುದ್ಧ ಶಿಕ್ಷೆಯ ಪ್ರಮಾಣ ಬಹಳ ಕಡಿಮೆಯಿದೆ. ಈ ಬಗ್ಗೆ ಪೊಲೀಸರು ಗಮನಹರಿಸಬೇಕು ಎಂದರು. ಈ ಕಾರ್ಯಕ್ರಮದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಪೊಲೀಸರಿಗೆ ನೀಡಿದ ಸೇವಾಪದಕದ ಹಿಂದೆ ಅವರ ಸೇವಾ ಮನೋಭಾವ, ಪ್ರಮಾಣಿಕತೆ ಹಾಗೂ ಪರಿಶ್ರಮವಿರುತ್ತದೆ. ಸಾಮಾಜಿಕ ಕಳಕಳಿಯೊಂದಿಗೆ ಸೇವೆ ಸಲ್ಲಿಸಿದಾಗ ಮಾತ್ರ ಇಂತಹ ಸಾಧನೆ ಸಾಧ್ಯವಾಗುತ್ತದೆ. ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಜೊತೆಗೆ ಜನರ ಆಸ್ತಿಪಾಸ್ತಿ ಸಂರಕ್ಷಿಸುವುದು ಪೊಲೀಸರ ಜವಾಬ್ದಾರಿ. ದೇಶದಲ್ಲಿ ಶಾಂತಿ, ನೆಮ್ಮದಿ ನೆಲೆಸುವಲ್ಲಿ ಪೊಲೀಸರ ಪಾತ್ರ ಅತ್ಯಂತ ಮಹತ್ವವಾದುದು. ಸಮಾಜದಲ್ಲಿ ನಡೆಯುವ ಅಪರಾಧಗಳನ್ನು ತಡೆಗಟ್ಟುವ ಜವಾಬ್ದಾರಿ ಸರ್ಕಾರ ಹಾಗೂ ಪೊಲೀಸರದ್ದಾಗಿದೆ. ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೆ ಬಹಳಷ್ಟು ಅಪರಾಧಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಪೊಲೀಸರಿಗೆ ಸಾಮಾಜಿಕ ಬದ್ಧತೆಯಿದ್ದರೆ, ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ. ಸಮಾಜದಲ್ಲಿನ ಅಸಮಾನತೆಯನ್ನು ತೊಡೆದು ಸಂವಿಧಾನ ನೀಡುವ ರಕ್ಷಣೆಯನ್ನು ಜಾರಿಗೊಳಿಸುವಲ್ಲಿ ಪೊಲೀಸರ ಪಾತ್ರ ಪ್ರಮುಖವಾಗಿದೆ. ಬಲಾಢ್ಯರ ಕೈಯಲ್ಲಿ ಅಧಿಕಾರವಿದ್ದರೆ, ದುರ್ಬಲ ವರ್ಗದವರ ಜೀವನ ದುಸ್ತರವಾಗುತ್ತದೆ ಎಂದು ಡಾ.ಬಿ.ಆರ್. ಅಂಬೇಡ್ಕರ್ ಅವರು ತಿಳಿಸಿದ್ದರು. ದುರ್ಬಲ ವರ್ಗಗಳ ಮೇಲಾಗುವ ದೌರ್ಜನ್ಯಗಳನ್ನು ಪೊಲೀಸರು ತಡೆಗಟ್ಟಬೇಕಿದೆ.

(2ನೇ ಪುಟ ನೋಡಿ)

## ವಿವಿಧ ಪ್ರವಾಹ ಪೀಡಿತ ಪ್ರದೇಶಗಳಿಗೆ ಸಚಿವ ರಹೀಮ್ ಖಾನ್ ಭೇಟಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 30 : ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಮ್ ಖಾನ್ ಅವರು ಇಂದು ಬೀದರ ತಾಲ್ಲೂಕಿನ ಜನವಾಡ, ಹಿಪ್ಪಳಗಾಂವ, ಚಾಂಬೋಳ ಗ್ರಾಮ ಮತ್ತು ಸೇತುವೆ, ಕನಳ್ಳಿ, ಶ್ರೀಮಂಡಲ, ಕಂಗಟಿ, ಬಸಂತಪುರ , ಚಿಮಕೋಡ, ಪತೇಪೂರ,

(2ನೇ ಪುಟ ನೋಡಿ)

## ಕಾಂತರಾಜು ಜನಗಣತಿಯ ವರದಿ ರೆಡ್ಡಿ ಸಮುದಾಯ ಒಪ್ಪುವುದಿಲ್ಲ



ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಅ.30:ರಾಜ್ಯದಲ್ಲಿ ಕಾಂತರಾಜು ಅವರು ನೀಡಿದ ಜಾತಿಜನಗಣತಿಯನ್ನು ರೆಡ್ಡಿ ಸಮಾಜ ಯಾವುದೇ ಕಾರಣಕ್ಕೂ ಒಪ್ಪುವುದಿಲ್ಲ ಎಂದು ರೆಡ್ಡಿ ಸಮಾಜದ ಗುರುಗಳಾದ ಶ್ರೀಶ್ರೀ ವೇಮನಾನಂದಸ್ವಾಮಿಗಳು ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ರಾಜ್ಯದಾದ್ಯಂತ ಬೀದರನಿಂದ ಮುಳಬಾಗಿಲವರೆಗೆ ರೆಡ್ಡಿ ಸಮುದಾಯದವರು ಸುಮಾರು 30 ರಿಂದ 40 ಲಕ್ಷ ಜನರಿದ್ದಾರೆ. ಆದರೆ ಕಾಂತರಾಜು ವರದಿಯಲ್ಲಿ ರೆಡ್ಡಿ ಸಮುದಾಯ ಕೇವಲ 7 ಲಕ್ಷ ಎಂದು ತೋರಿಸಿದ್ದಾರೆ. ರೆಡ್ಡಿ ಸಮುದಾಯದ ವಿವಿಧ ಉಪ ಪಂಗಡಗಳನ್ನು ಕೈಬಿಟ್ಟಿದ್ದಾರೆ. ಮಲ್ಲಮ್ಮ, ವೇಮನ್ ರೆಡ್ಡಿ ಹೀಗೆ ವಿವಿಧ ಪಂಗಡಗಳವರು ರೆಡ್ಡಿ ಸಮುದಾಯಕ್ಕೆ ಸೇರಿದವರಾಗಿದ್ದಾರೆ ಎಂದು ಪ್ರತಿಪಾದಿಸಿದ ಅವರು ರಾಜ್ಯದ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆಯಲ್ಲಿ ಕೇವಲ 2 ಪಂಗಡಗಳನ್ನು ಮಾತ್ರ ಗುರುತಿಸಿದ್ದಾರೆ. ಪ್ರಾಂತ ಪ್ರಾಂತಕ್ಕೆ ಬೇರೆ ಹೆಸರಿನಿಂದ ಸಮಾಜದವರನ್ನು ಗುರುತಿಸಲಾಗುತ್ತದೆ ಎಂದರು.

ಈಗ ರಾಜ್ಯ ಸರ್ಕಾರ ಜಾತಿ ಜನಗಣತಿ ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ಸಹ ಜಾತಿಜನಗಣತಿಯನ್ನು ಮಾಡಲು ಮುಂದಾಗಿರುವುದರಿಂದ ರೆಡ್ಡಿ ಸಮುದಾಯದ ಎಲ್ಲ ಪಂಗಡದವರು ಜಾತಿ ಜನಗಣತಿಗೆ ಬಂದಾಗ ಎಲ್ಲರೂ

(2ನೇ ಪುಟ ನೋಡಿ)

## ಕೋರ್ಟ್‌ಗೆ ಹಾಜರಾಗಲು ಮತ್ತೆ ಸಮಯ ಕೇಳಿದ ಪ್ರಭು ಚೌಹಾಣ್‌ಗೆ 1 ಲಕ್ಷ ದಂಡ ವಿಧಿಸಿದ ಕಲಬುರಗಿ ಪೀಠ

ಮಲ್ಲಮ್ಮನುಡಿವಾರ್ತೆ ಬೀದರ್:ಅ.30: ಕೋರ್ಟ್‌ಗೆ ಹಾಜರಾಗಲು ಪದೇ ಪದೇ ಸಮಯ ಕೇಳುತ್ತಿರುವ ಹಿನ್ನೆಲೆ ಕರ್ನಾಟಕ ಹೈಕೋರ್ಟ್‌ನ ಕಲಬುರಗಿ ಪೀಠ ಔರಾದ್ ಶಾಸಕ ಪ್ರಭು ಚೌಹಾಣ್‌ಗೆ 1 ಲಕ್ಷ ರೂ. ದಂಡ ವಿಧಿಸಿದೆ. ಶಾಸಕ ಪ್ರಭು ಚೌಹಾಣ್ ವಿರುದ್ಧ ಜಾತಿ ವಿವಾದಕ್ಕೆ ಸಂಬಂಧಿಸಿದಂತೆ ಕಲಬುರಗಿ ಪೀಠದಲ್ಲಿ ವ್ಯಕ್ತಿಯೊಬ್ಬರು ದಾವೆ ಹೂಡಿದ್ದರು. ಈ ಸಂಬಂಧ ಕೋರ್ಟ್‌ಗೆ ಹಾಜರಾಗಲು ಚೌಹಾಣ್ ಪರ ವಕೀಲರು ಪದೇ ಪದೇ ಸಮಯ ಕೇಳುತ್ತಿರುವ ಹಿನ್ನೆಲೆ ದಂಡ ವಿಧಿಸಲಾಗಿದೆ. ಕಳೆದ ಬಾರಿಯೂ ಕೋರ್ಟ್‌ಗೆ ಹಾಜರಾಗದೆ ಚೌಹಾಣ್ ಪರ ವಕೀಲರು ಸಮಯ ಕೇಳಿದ್ದರು. ಈ ಬಾರಿಯೂ ಮತ್ತೆ ಸಮಯ ಕೇಳಿದ್ದಕ್ಕೆ 1 ಲಕ್ಷ ದಂಡ ರೂ. ವಿಧಿಸಿ, ಸೆ.8ಕ್ಕೆ ವಿಚಾರಣೆಯನ್ನು ಮುಂದೂಡಿದೆ. ಬೀದರ್‌ನ ಕಮಲ ನಗರ ತಾಲೂಕಿನ ನಿವಾಸಿ ನರಸಿಂಗ್ ಎಂಬುವವರು ಶಾಸಕ ಪ್ರಭು ಚೌಹಾಣ್ ಪರಿಶಿಷ್ಟ ಜಾತಿಯವರಲ್ಲ, ಅವರು ಪರಿಶಿಷ್ಟ ಪಂಗಡದವರು ಎಂದು ಕರ್ನಾಟಕ ಹೈಕೋರ್ಟ್‌ನ ಕಲಬುರಗಿ ಪೀಠದಲ್ಲಿ ದಾವೆ ಹೂಡಿದ್ದರು.

ಚೌಹಾಣ್ ಅವರು ಮೂಲತಃ ಮಹಾರಾಷ್ಟ್ರದಲ್ಲಿ ಜನಿಸಿದ್ದು, ಕರ್ನಾಟಕ ನಿವಾಸಿಯಲ್ಲ. ಅವರು ಮಹಾರಾಷ್ಟ್ರದಲ್ಲಿ ಲಂಬಾಣಿ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿದ್ದಾರೆ. ಹೀಗಾಗಿ ಶಾಸಕ ಚೌಹಾಣ್ ಅವರ ಎಸ್ಸಿ ಜಾತಿ ಪ್ರಮಾಣ ಪತ್ರ ರದ್ದುಗೊಳಿಸಬೇಕು ಎಂದು ಉಲ್ಲೇಖಿಸಿದ್ದರು.

## ಹುಮನಾಬಾದ್ ನಲ್ಲಿ ಕಳ್ಳರ ಹಾವಳಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಕಳೆದ ನಾಲ್ಕು ದಿವಸಗಳ ಹಿಂದೆ ಹುಮನಾಬಾದ್ ನಗರದಲ್ಲಿ 1 ,ದ್ವಿಚಕ್ರ ವಹಾನ ಸೇರಿದಂತೆ ಇತರೆ ಮೂರು ಮನೆಗಳು ಕಳ್ಳತನವಾಗಿವೆ ಎಂಬ ವಿಷಯ ತಡವಾಗಿ ಬೆಳಕಿಗೆ ಬಂದಿದೆ.

ಶನಿವಾರ ಅಮವಾಸ್ಯೆ ಯಂದು ದೇವಾನಂದ ದತ್ತಾತ್ರೆ ಜಂಬೊರೆ, ಸಾ. ಗಾಂಧಿನಗರ ಹಿರೇಮಠ ಲೇಔಟ್ ಇವರ ಮನೆಯೆದುರಿಗೆ ನಿಲ್ಲಿಸಿದ ದ್ವಿಚಕ್ರ ವಹಾನ ಕಳವು ಆಗಿದೆ. ಅದೆ ರೀತಿ ಮೂರು

ಮನೆಗಳು ಕಳವು ಆಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ.

ಘಟನಾ ಸ್ಥಳಕ್ಕೆ ಪಿಎಸ್ ಐ ಹುಮನಾಬಾದ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮಿಟ್ಟಿ ಮಲ್ಕಾಪುರ ಕಲ್ಲು ಗಣಿಗಾರಿಕೆ ಪೀಡಿತ ಇಡೀ ಪ್ರದೇಶದ ಮೇಲೆ ಸುಮೋಟೊ ಕೇಸ್ ರಿಜಿಸ್ಟರ್



ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಆ 30 : ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ ವೀರಪ್ಪ ಅವರಿಂದ ಮೂರನೇ ದಿನವಾದ ಆಗಸ್ಟ್ 30ರಂದು ಅನಿರೀಕ್ಷಿತ ಭೇಟಿಯ ಮಿಂಚಿನ ಕಾರ್ಯಾಚರಣೆ ನಡೆಯಿತು.

ಚಹಾ ವಿರಾಮದ ನಂತರ ಕೃಷಿ ವಿವಿಯಿಂದ ಬೆಳಗ್ಗೆ 7 ಗಂಟೆಗೆ ನಿರ್ಗಮಿಸಿದ ಉಪ ಲೋಕಾಯುಕ್ತರು, ಸಿಟಿ ಹೊರ ವಲಯದ ಮಂತ್ರಾಲಯ ರಸ್ತೆಗೆ ಹೊರಟು ಮಿಟ್ಟಿ ಮಲ್ಕಾಪುರದ ಶ್ರೀ ವೆಂಕಟೇಶ್ವರ ಮಿನಿರಲ್ಸ್ ಸ್ಟೋನ್ ಕ್ರಷರ್ (ಎಂ ಸ್ಯಾಂಡ್ ) ಪ್ರವೇಶ ಮಾಡಿದರು.

ಮೊದಲಿಗೆ ವೆಂಕಟೇಶ್ವರ ಮಿನಿರಲ್ಸ್ ಸ್ಟೋನ್ ಕ್ರಷರ್ ಪ್ರದೇಶದಲ್ಲಿ ಸಂಚರಿಸಿ ಗಣಿಗಾರಿಕೆ ನಂತರ ಹಾಗೆಯೇ ಬಿಟ್ಟ ಕಂದಕದ ವೀಕ್ಷಣೆ ನಡೆಸಿದರು.

ಇದನ್ನು ಸಮತಟ್ಟು ಯಾಕೆ ಮಾಡಿಲ್ಲ? ಗಿಡ ಯಾಕೆ ನೆಟ್ಟಿಲ್ಲ?. ಇದನ್ನು ನೀವು ನೋಡಿಲ್ವಾ? ಲೀಸ್ ಪಡೆದ ಕಂಪನಿಯವರು ಕಾನೂನು ಉಲ್ಲಂಘನೆ ಮಾಡಿದಾರೆ ಅಂತ ಗೊತ್ತಾದಾಗಲೂ ನೀವು ನಿದ್ದೆ ಮಾಡತಿದೀರಾ? ಎಂದು ಗಣಿ ಇಲಾಖೆಯ ಅಧಿಕಾರಿಗಳಿಗೆ ಉಪ ಲೋಕಾಯುಕ್ತರು ತರಾಟೆ ತೆಗೆದು–ಕೊಂಡರು. ಬಳಿಕ ಲೋಕಾಯುಕ್ತರು, ಓಂ ಶಕ್ತಿ ಕಂಪನಿಯ ಮತ್ತೊಂದು ಕಲ್ಲು ಗಣಿಗಾರಿಕೆ ಪ್ರದೇಶಕ್ಕೆ ತೆರಳಿ ಗಣಿಪೀಡಿತ ಪ್ರದೇಶದಲ್ಲಿ ಅಂದಾಜು 100 ಅಡಿ ಆಳವಾಗಿ ಕೊರೆದ ಕಂದಕದ ವೀಕ್ಷಣೆ ನಡೆಸಿದರು.

100 ಅಡಿಯಷ್ಟು ಒಳಗೆ ಕೊರೆದು ಗಣಿಗಾರಿಕೆ ನಡೆಸಲು ನಿಯಮದಲ್ಲಿ ಅವಕಾಶವಿದೆಯಾ? ಸುರಕ್ಷತೆಗಾಗಿ ಸುತ್ತಲು ಜಾಗ ಬಿಡದೇ ಮನಬಂದಂತೆ ಗಣಿಗಾರಿಕೆ ನಡೆಸಿದ್ದನ್ನು ನೀವು ಗಮನಿಸಿದ್ದೀರಾ? ಉಲ್ಲಂಘನೆ ಅಂತ ಗೊತ್ತಾದ ಮೇಲೆ ನೋಟೀಸ್ ನೀಡಿದ್ದೀರಾ? ಎಂದು ಉಪ ಲೋಕಾಯುಕ್ತರು ಪ್ರಶ್ನಿಸಿದರು.

ವಾರ್ಷಿಕ ಅಂದಾಜು 25 ಕೋಟಿ ರೂ ನಷ್ಟು ವಾಹಿವಾಟು ನಡೆಸುವ ನಿಮಗೆ ನಿಮ್ಮ ಗಣಿಯಲ್ಲಿ ಕೆಲಸ

(2ನೇ ಪುಟ ನೋಡಿ)

## 7 ವರ್ಷಗಳ ನಂತರ ಚೀನಾಗೆ ಪ್ರಧಾನಿ ಮೋದಿ ಭೇಟಿ



ಮಲ್ಲಮ್ಮನುಡಿ ವಾರ್ತೆ ಬೀಜಿಂಗ್: ಅ.30:ಜಪಾನ್ ಪ್ರವಾಸದ ಬಳಿಕ ಇದೀಗ ಪ್ರಧಾನಿ ಮೋದಿ ಚೀನಾ ಪ್ರವಾಸ ಕೈಗೊಂಡಿದ್ದು, ಟಿಯಾಂಜಿನ್‌ಗೆ ಬಂದಿಳಿದಿದ್ದಾರೆ.

7 ವರ್ಷಗಳ ನಂತರ ಪ್ರಧಾನಿ ಮೋದಿ ಚೀನಾಗೆ ಭೇಟಿ ನೀಡುತ್ತಿದ್ದು, ಇಂದಿನಿಂದ (ಆ.30) ಸೆ.1ರವರೆಗೆ ಪ್ರವಾಸ ಕೈಗೊಳ್ಳಲಿದ್ದಾರೆ. ಶನಿವಾರ (ಆ.30) ಸಂಜೆ 5ರ ಸುಮಾರಿಗೆ ಟಿಯಾಂಜಿನ್‌ಗೆ ಬಂದಿಳಿದ ಪ್ರಧಾನಿ ಮೋದಿಯನ್ನು ಅಲ್ಲಿನ ಭಾರತೀಯ ಸಮುದಾಯ ಪ್ರೀತಿಯಿಂದ ಬರಮಾಡಿಕೊಂಡಿತು.

ಚೀನಾದ ಅಧ್ಯಕ್ಷ ಕ್ಷಿ ಜಿನ್‌ಪಿಂಗ್ ಅವರ ಆಹ್ವಾನದ ಮೇರೆಗೆ ಶಾಂಘೈ ಸಹಕಾರ ಮಂಡಳಿ ರಾಷ್ಟ್ರಗಳ ಮುಖ್ಯಸ್ಥರ ಮಂಡಳಿಯ 25ನೇ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಆ.31ರಂದು ಸಭೆಯ ಔತಣಕೂಟದಲ್ಲಿ ಭಾಗಿಯಾಗಲಿದ್ದು, ಸೆ.1ರಂದು ಮುಖ್ಯ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಸಮಯದಲ್ಲಿ ಪ್ರಧಾನಿ ಮೋದಿ ಕೆಲವು ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ.

ಇನ್ನೂ ಭಾನುವಾರ (ಆ.31) ಚೀನಾ ಅಧ್ಯಕ್ಷ ಕ್ಷಿ ಜಿನ್‌ಪಿಂಗ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ವೇಳೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಧಿಸಿರುವ ಹೆಚ್ಚುವರಿ ಆಮದು ಸುಂಕದ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಜೊತೆಗೆ ರಷ್ಯಾ ಅಧ್ಯಕ್ಷ ಪುಟಿನ್ ಅವರನ್ನು ಭೇಟಿಯಾಗಲಿದ್ದಾರೆ.

## ಸಿದ್ರಾಮುಲ್ಲಾಖಾನ್' ಎಂದು ಸ್ಟೇಟಸ್ ಹಾಕಿದ ಪಿಡಿಒ ವಿರುದ್ಧ ಎಫ್‌ಐಆರ್ ದಾಖಲು



ಪ್ರವೀಣಕುಮಾರ್ ಅವರು ಆಗಸ್ಟ್ 21ರಂದು 'ಸಿದ್ರಾಮುಲ್ಲಾಖಾನ್' ಎಂಬ ಬರಹದ ಜೊತೆಗೆ ಸಿದ್ದರಾಮಯ್ಯ ಅವರ ತಲೆಗೆ ಮುಸ್ಲಿಮರು ಧರಿಸುವ ಟೊಪ್ಪಿ ಹಾಕಿರುವಂತೆ ಎಡಿಟ್ ಮಾಡಲಾದ ಚಿತ್ರವನ್ನು ಸ್ಟೇಟಸ್ ಇಟ್ಟುಕೊಂಡಿದ್ದನ್ನು ಗಮನಿಸಿದ ಸುಂಟನೂರ ಗ್ರಾಮದ ಮುಖಂಡ ಮಲ್ಲಿಕಾರ್ಜುನ ಡಣ್ಣೂರ ಅವರು ಪಿಡಿಒ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದರು.

ಮಲ್ಲಮ್ಮನುಡಿವಾರ್ತೆ ಕಲಬುರಗಿ:ಅ.30: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಅವಹೇಳನಕಾರಿಯಾಗಿ ವಾಟ್ಸ್ ಆಪ್ ಸ್ಟೇಟಸ್ ಹಾಕಿದ ಆರೋಪದ ಮೇಲೆ ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಸುಂಟನೂರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ಪಿಡಿಒ) ಪ್ರವೀಣಕುಮಾರ್ ಉಡಗಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

'ಸಿದ್ರಾಮುಲ್ಲಾಖಾನ್' ಎಂದು ವಾಟ್ಸ್ ಆಪ್ ಸ್ಟೇಟಸ್ ಹಾಕಿದ್ದ ಪ್ರವೀಣಕುಮಾರ್ ವಿರುದ್ಧ ನಿಂಬರ್ಗಾ ಪೊಲೀಸ್ ಠಾಣೆಯಲ್ಲಿ ಶುಕ್ರವಾರ ಎಫ್‌ಐಆರ್ ದಾಖಲಿಸಲಾಗಿದೆ.

ಪಿಡಿಒ ವಿರುದ್ಧ ಶಿಸ್ತು ಕ್ರಮಕ್ಕೆ ಆಗ್ರಹಿಸಿ ಗ್ರಾಮದ

ಮುಖಂಡರಾದ ಮಹಾಲಿಂಗಪ್ಪ ಹರವಾಳ, ಆಳಂದ ತಾಲೂಕು ಕುರುಬರ ಸಂಘದ ಯುವ ಘಟಕದ ಅಧ್ಯಕ್ಷ ಬೀರಣ್ಣ ಪೂಜಾರಿ ಸೇರಿ ಪಂಚಾಯಿತಿ ಅಧಿಕಾರಿಗಳಿಗೆ ದೂರು ನೀಡಿದ್ದರು. ಈ ಕುರಿತು ನಿಂಬರ್ಗಾ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ಕೊಟ್ಟಿಗೆ ಕುಸಿದು 18 ಮೇಕೆಗಳು ಸಾವು

ಕಲಬುರಗಿ:ಅ.30: ಕಳೆದ ಕೆಲವು ದಿನಗಳಿಂದ ನಿರಂತವಾಗಿ ಸುರಿಯುತ್ತಿರುವ ಮಳೆಗೆ ಚಿತ್ತಾಪೂರ ತಾಲ್ಲೂಕಿನ ಭಂಕಲಗಾ ಗ್ರಾಮದಲ್ಲಿ ಕೊಟ್ಟಿಗೆಯ ಗೊಡೆ ಕುಸಿದು 18 ಮೇಕೆಗಳು ಮೃತಪಟ್ಟಿರುವ ಘಟನೆ ಶುಕ್ರವಾರ ರಾತ್ರಿ ಸಂಭವಿಸಿದೆ.

ಭಂಕಲಗಾ ಗ್ರಾಮದ ಮಾಳಪ್ಪ ಧೂಳಪ್ಪ ಪೂಜಾರಿ ಅವರಿಗೆ ಸೇರಿದ ಮೇಕೆಳಾಗಿವೆ. ಶುಕ್ರವಾರ ಬೆಳಿಗ್ಗೆ ಮೇಕೆಗಳನ್ನು ಮೇಯಿಸಿ ಸಂಜೆ ವೇಳೆ ಕೊಟ್ಟಿಗೆಯೊಳಗೆ ಹಾಕಿದ್ದಾರೆ. ನಿರಂತರವಾಗಿ ಸುರಿಯುತ್ತಿದ್ದ ಮಳೆಗೆ ಕೊಟ್ಟಿಗೆಯ ಗೋಡೆಯು ಶಿಥಿಲಗೊಂಡು ರಾತ್ರಿ 7.30 ಗಂಟೆ ಸುಮಾರಿಗೆ ಕೊಟ್ಟಿಗೆಯ ಗೋಡೆ ಮೇಕೆಗಳ ಮೇಲೆ ಕುಸಿದು ಬಿದ್ದ ಕಾರಣ ಮೇಕೆಗಳು ಸಾವನ್ನಪ್ಪಿದೆ.

ಸ್ಥಳಕ್ಕೆ ತಹಶೀಲ್ದಾರ್ ನಾಗಯ್ಯ ಹಿರೇಮಠ, ಪಶು ಇಲಾಖೆಯ ಸಹಾಯಕ ನಿರ್ದೇಶಕ ಶಂಕರ ಕಣ್ಣಿ, ಪಿಎಸ್‌ಐ ಶ್ರೀಶೈಲ್ ಅಂಬಾಟಿ, ಸಿಬ್ಬಂದಿಗಳಾದ ಯಕ್ಬಾಲ್ ಪಾಶಾ, ಸಿದ್ದು ಭೇಟಿ ನೀಡಿ ಪರಿಶೀಲನೆ ಮಾಡಿದರು. ಈ ಕುರಿತು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ

## ಸಚಿವ ರಹೀಮ್ ಖಾನ್ ಭೇಟಿ ಪರಿಶೀಲನೆ

ಖಾಜಾಪೂರ ಸೇರಿದಂತೆ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಭೇಟಿ ನಂತರ ಮಾತನಾಡಿದ ಸಚಿವರು, ಭಾರೀ ಮಳೆಯಿಂದಾಗಿ ರೈತರ ಹೊಲಗಳಲ್ಲಿ ಬೆಳಯಲಾದ ಹೆಸರು, ಉದ್ದು ಸೋಯಾಬೀನ್, ತೊಗರೆ, ಸಂಪೂರ್ಣವಾಗಿ ನಾಶವಾಗಿವೆ ಮತ್ತು ವಿವಿಧ ಸ್ಥಳಗಳಲ್ಲಿ ಅನೇಕ ಮನೆಗಳು ಕುಸಿದಿವೆ. ಪ್ರತಿಯೊಂದು ವಿಪತ್ತು ಮತ್ತು ಹಾನಿಯ ವರದಿ ಮಾಡಲು ಮತ್ತು ರೈತರಿಗೆ ಸಕಾಲದಲ್ಲಿ ಪರಿಹಾರ ನೀಡಲು ಅಂತರ ಇಲಾಖಾ ಸಮೀಕ್ಷೆಯನ್ನು ಮಾಡಲು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಬೆಳೆ ಹಾನಿ ಮತ್ತು ಮನೆ ಹಾನಿಗೆ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ಅಡಿಯಲ್ಲಿ ತಕ್ಷಣ ಪರಿಹಾರ ನೀಡಲಾಗುವುದು. ಮುಖ್ಯಮಂತ್ರಿಗಳಿಗೆ ಕ್ಷೇತ್ರದ ಪರಿಸ್ಥಿತಿ ಬಗ್ಗೆ ತಿಳಿಸಲಾಗಿದೆ ಮತ್ತು ಹೆಚ್ಚಿನ ಪರಿಹಾರಕ್ಕೆ ಮನವಿ ಮಾಡಲಾಗಿದೆ ಎಂದರು. ಸಾರ್ವಜನಿಕ ನದಿ , ಕೆರೆಗಳಿಂದ ದೂರ ಇರಬೇಕು ಮತ್ತು ಯಾವುದೇ ಅಪಾಯವಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಅನುಷಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಬೀದರ ತಹಸಿಲ್ದಾರ್ ರವೀಂದ್ರ ಧಾಮಾ, ಕೃಷಿ ಇಲಾಖೆ ಉಪ ನಿರ್ದೇಶಕ ಇಕ್ಬಾಲ್ ಅನ್ಸಾರಿ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರೆಡ್ಡಿ ಸಮುದಾಯ ಒಪ್ಪುವುದಿಲ್ಲ

ಸಮೀಕ್ಷೆಯ ಸಂದರ್ಭದಲ್ಲಿ ತಮ್ಮ ಪಂಗಡ ಯಾವುದೇ ಇದ್ದರು ತಮ್ಮನ್ನು 1105 ರೆಡ್ಡಿ ಅಡಿಯಲ್ಲಿ ಸೇರಿಸುವಂತೆ ರಾಜ್ಯದ ಎಲ್ಲಾ ರೆಡ್ಡಿ ಸಮುದಾಯದವರಿಗೆ ಮನವಿ ಮಾಡಿದರು.

ಹೀಗೆ ಮಾಡುವ ಮೂಲಕ ಸಮಾಜದ ಒಗ್ಗಟ್ಟನ್ನು ಪ್ರದರ್ಶಿಸಬೇಕು ಹಾಗೂ ಸಮಾಜದ ನಿಜವಾದ ಅಂಕಿ ಸಂಖ್ಯೆ ನಿಖರವಾಗಿ ದಾಖಲಾಗಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಟಿಯಲ್ಲಿ ರೆಡ್ಡಿ ಜನಸಂಘದ ರಾಜ್ಯಾಧ್ಯಕ್ಷ ಜಯರಾಮರೆಡ್ಡಿ,ಪ್ರಧಾನ ಕಾರ್ಯದರ್ಶಿ ಶೇಖರರೆಡ್ಡಿ, ಕೃಷ್ಣಾರೆಡ್ಡಿ(ಕಿಟ್ಟಿ) ಹಾಗೂ ಇತರರು ಉಪಸ್ಥಿತರಿದ್ದರು.

## ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ

ಸಾಮಾನ್ಯ ಜನರಿಗೆ ನ್ಯಾಯ ದೊರಕಿಸಿಕೊಡಬೇಕು. ಪೊಲೀಸರ ಸಂಖ್ಯೆಯ ಬಗ್ಗೆ ಗಮನಹರಿಸದೇ, ಅವರು ತಡೆಗಟ್ಟಿರುವ ಅಪರಾಧಗಳೆಷ್ಟು ಎಂದು ಪರಿಗಣಿಸಬೇಕಾಗಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಪ್ರಶಸ್ತಿ ವಿಜೇತರ ಸಾಧನೆ ಶ್ಲಾಘನೀಯವಾಗಿದ್ದು, ಇತರರಿಗೆ ಮಾದರಿಯಾಗಬೇಕು. ಸಮಾಜದಲ್ಲಿನ ನ್ಯೂನ್ಯತೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ಪೊಲೀಸ್ ಇಲಾಖೆಯ ಅಧಿಕಾರಿ, ಸಿಬ್ಬಂದಿ ವರ್ಗದವರು ಆತ್ಮವಿಮರ್ಶೆ ಮಾಡಿಕೊಂಡು ಉತ್ತಮ ಸೇವೆ ಸಲ್ಲಿಸಬೇಕು ಎಂದು ಹೇಳಿದರು. ರಾಜ್ಯವನ್ನು ಶಾಂತಿಯಿಂದ ಇಡುವುದರಲ್ಲಿ ಪೊಲೀಸ್ ಇಲಾಖೆಯು ಎಲ್ಲ ರೀತಿಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ವಿಶೇಷವಾಗಿ ಜನಸಮುದಾಯದ ನಿರೀಕ್ಷೆಯಲ್ಲಿ ತನ್ನ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರು ಹೇಳಿದರು.

ಪ್ರಶಸ್ತಿ ಎಂಬುದು ಬರೀ ಪದಕವಲ್ಲ. ಅದರ ಹಿಂದೆ ಶ್ರಮ, ಪ್ರಾಮಾಣಿಕತೆ, ಸಮಾಜದ ಸೇವೆ ಮತ್ತು ಮುಂದಿನ ಪೀಳಿಗೆಗೆ ಆದರ್ಶ ಇದೆ. ಕರ್ನಾಟಕ ಪೊಲೀಸ್ ಇಡೀ ರಾಷ್ಟ್ರದಲ್ಲಿ ಪ್ರಖ್ಯಾತಿಯನ್ನು ಪಡೆದಿದೆ. ಪೊಲೀಸ್ ಇಲಾಖೆಯನ್ನು ನಡೆಸುವುದಕ್ಕೆ ನನಗೆ ಬಹಳ ಹೆಮ್ಮೆಯಿದೆ. ಪೊಲೀಸ್ ಕಾನ್‌ಸ್ಟೇಬಲ್‌ನಿಂದ ಅನುಯಾಯಿಗು ಕೂಡ ಪ್ರಶಸ್ತಿ ಸಿಕ್ಕಿದೆ. ಅನುಯಾಯಿಯಿಂದ ಡಿಜಿಪಿವರೆಗೆ ನಮ್ಮ ಪೊಲೀಸ್ ಇಲಾಖೆ ರಾಜ್ಯವನ್ನು ಶಾಂತಿಯಿಂದ ಇಡುವುದರಲ್ಲಿ ಎಲ್ಲ ರೀತಿಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ವಿಶೇಷವಾಗಿ ಜನಸಮುದಾಯದ ನಿರೀಕ್ಷೆಯಲ್ಲಿ ತನ್ನ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದೆ ಎಂದು ಹೇಳಿದರು.

ರಾಜ್ಯದ ಅಭಿವೃದ್ಧಿಯಾಗಬೇಕಾದರೆ ಸಮಾಜ ಶಾಂತಿಯಿಂದ ಇರಬೇಕಾಗುತ್ತದೆ. ನಾಗರಿಕ ಸಮಾಜ ಶಾಂತಿಯಿಂದ ಇರಬೇಕಾಗುತ್ತದೆ. ಇತ್ತೀಚೆಗೆ ನಾವು ಗಮನಿಸಿದಾಗ, ಗ್ಲೋಬಲ್ ಇನ್‌ವೆಸ್ಟರ್ಸ್ ಮೀಟ್‌ನಲ್ಲಿ 10,500 ಲಕ್ಷ ಕೋಟಿ ರೂ.ಗಿಂತಲೂ ಹೆಚ್ಚು ಬಂಡಾವಾಳ ಹೂಡುತ್ತೇವೆ ಎಂದು ಪ್ರಪಂಚದಾದ್ಯಂತ ನೂರಾರು ಕಂಪನಿಗಳು ಬಂದವು. ಮುಖ್ಯಮಂತ್ರಿಗಳು, ಕೈಗಾರಿಕಾ ಸಚಿವರು ಹಲವು ಒಡಂಬಡಿಕೆಗಳಿಗೆ ಸಹಿ ಹಾಕಿದರು. ಅದಕ್ಕೆ ಮೂಲ ಕಾರಣ, ಯಾವುದೇ ಒಂದು ಕಂಪನಿ ರಾಜ್ಯದಲ್ಲಿ ಅಥವಾ ರಾಷ್ಟ್ರದಲ್ಲಿ ಬಂಡಾವಾಳ ಹೂಡಬೇಕಾದ್ರೆ ಆ ರಾಜ್ಯದ ಸಮಾಜವನ್ನು ನೋಡುತ್ತಾರೆ. ರಾಜಕೀಯ ಇಚ್ಛಾಶಕ್ತಿ, ಆ ಸಮಾಜದಲ್ಲಿ ಶಾಂತಿ ಇದೆಯಾ? ಎಂಬುದನ್ನು ಕಂಪನಿಗಳು ನೋಡುತ್ತವೆ. ಕರ್ನಾಟಕದ ಮಟ್ಟಿಗೆ 10 ಲಕ್ಷ ಕೋಟಿ ರೂ.ಗೂ ಹೆಚ್ಚು ಹೂಡಿಕೆ ಬರುತ್ತದೆ ಅಂದರೆ ಕರ್ನಾಟಕದಲ್ಲಿ ಶಾಂತಿ ಇದೆ. ನೆಮ್ಮದಿ, ತೃಪ್ತಿ ಇದೆ. ಯಾವುದೇ ತೊಂದರೆಗಳು ಆಗುವುದಿಲ್ಲ ಎಂಬುದನ್ನು ಗಮನಿಸಿಯೇ ಬಂಡಾವಾಳ ಹೂಡುತ್ತಾರೆ. ಇದಕ್ಕೆ ನಮ್ಮ ಪೊಲೀಸ್ ಇಲಾಖೆಯೂ ಕಾರಣ ಎಂದು ಶ್ಲಾಘಿಸಿದರು.

ಕರ್ನಾಟಕವನ್ನು ಶಾಂತಿ, ನೆಮ್ಮದಿಯಿಂದ ಇಡಲು ಅನುಯಾಯಿ, ಕಾನ್‌ಸ್ಟೇಬಲ್‌ನಿಂದ ಡಿಜಿಪಿವರೆಗೆ ಶ್ರಮ ಹಾಕುತ್ತಿದ್ದಾರೆ. ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ರಾಜ್ಯ ಪೊಲೀಸ್ ಆಧುನೀಕರಣಗೊಳ್ಳುತ್ತಿದೆ. ಆಧುನೀಕರಣ ಅನೇಕ ಸವಾಲುಗಳನ್ನು ಎದುರಿಸುತ್ತಿದೆ. ರಾಜ್ಯದಲ್ಲಿ ಮತ್ತು ರಾಷ್ಟ್ರದಲ್ಲಿ ಸೈಬರ್ ಅಪರಾಧಗಳು ಬಹಳ ಹೆಚ್ಚಾಗುತ್ತಿವೆ. ಸೈಬರ್ ಅಪರಾಧಗಳನ್ನು ಮಟ್ಟ ಹಾಕದೇ ಹೋದರೆ ಜನರಿಗೆ ಕೋಟ್ಯಂತರ ರೂ. ನಷ್ಟ ಉಂಟಾಗುತ್ತದೆ. ಅದಕ್ಕಾಗಿಯೇ ದೇಶದಲ್ಲೆ ಮೊದಲ ಬಾರಿಗೆ ರಾಜ್ಯದಲ್ಲಿ ಸೈಬರ್ ಪೊಲೀಸ್ ಠಾಣೆಯನ್ನು ಸ್ಥಾಪಿಸಲಾಯಿತು. ಇಂದು ಸೈಬರ್ ಅಪರಾಧಗಳಿಗಾಗಿಯೇ 45ಕ್ಕೂ ಹೆಚ್ಚು ಪೊಲೀಸ್ ಠಾಣೆಗಳನ್ನು ರಾಜ್ಯದಲ್ಲಿ ಸ್ಥಾಪಿಸಲಾಗಿದೆ. ಯಾವುದೇ ಪೊಲೀಸ್ ಠಾಣೆಯಲ್ಲಿಯೂ ಸೈಬರ್ ಅಪರಾಧಕ್ಕೆ ಸಂಬಂಧಿಸಿದ ದೂರುಗಳನ್ನು ದಾಖಲಿಸಬಹುದು ಎಂಬ ಆದೇಶವನ್ನು ಹೊರಡಿಸಲಾಗಿದೆ ಎಂದು ಹೇಳಿದರು.

ಇತ್ತೀಚೆಗೆ ಸಮಾಜವನ್ನು ಕೆಡಿಸುವಂಥ ಅನೇಕ ಪ್ರಯತ್ನಗಳು ನಡೆಯುತ್ತಿವೆ. ಧಾರ್ಮಿಕವಾಗಿ, ರಾಜಕೀಯವಾಗಿ ಬೇರೆ ರೀತಿಯಲ್ಲಿ ಸಮಾಜದ ಶಾಂತಿಯನ್ನು ಕೆಡಿಸುವಂತದ್ದನ್ನು ಗಮನಿಸುತ್ತಿದ್ದೇವೆ. ಕರ್ನಾಟಕ ಪೊಲೀಸ್ ಪ್ರತಿಯೊಂದು ಸಂದರ್ಭದಲ್ಲಿ ಯಶಸ್ವಿಯಾಗುತ್ತಿದೆ. ಯಾವುದೇ ತನಿಖೆ, ಅಪರಾಧ, ಕೊಲೆ ಪ್ರಕರಣಗಳನ್ನು ಪತ್ತೆ ಹಚ್ಚುವುದರಲ್ಲಿ ರಾಜ್ಯ ಪೊಲೀಸ್ ಯಶಸ್ವಿಯಾಗಿದೆ. ಇಂತಹ ಸೂಕ್ಷ್ಮ ಇಲಾಖೆ ಸ್ವಾಭಾವಿಕವಾಗಿ ಹಲವು ಟೀಕೆ ಟಿಪ್ಪಣಿಗಳಿಗೆ ಗುರಿಯಾಗುತ್ತದೆ. ಟೀಕೆಗಳನ್ನು ಮೀರಿ ಇಲಾಖೆಯ ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದಾರೆ. ನಾವು ಯಾವುದೇ ಟೀಕೆಗಳನ್ನು ಲಘುವಾಗಿ ತೆಗೆದುಕೊಳ್ಳುವುದಿಲ್ಲ. ಸಲಹೆಗಳ ರೂಪದಲ್ಲಿ ತೆಗೆದುಕೊಳ್ಳುತ್ತೇವೆ. ಆ ಕೆಲಸಗಳನ್ನು ಮಾಡಲು ಪ್ರಯತ್ನ ಮಾಡುತ್ತೇವೆ ಎಂದರು.

ಪೊಲೀಸ್ ಕಾನ್‌ಸ್ಟೇಬಲ್‌ಗಳ ಪ್ರಾಮಾಣಿಕ ಪ್ರಯತ್ನಗಳು ಆಗದೇ ಹೋದರೆ ನಾವು ಅಪರಾಧಗಳನ್ನು ಮಟ್ಟಹಾಕಲು ಕಷ್ಟವಾದೀತು. ಅವರು ಮಾಡುವ ಸೇವೆಗಳನ್ನು ನಾವು ಗಮನ ಹರಿಸಬೇಕಾಗುತ್ತದೆ. ಎರಡು ವರ್ಷಗಳ ಹಿಂದೆ ಮೈಸೂರು ರಸ್ತೆಯಲ್ಲಿ ರಸ್ತೆ ದಾಟಲು ಸಾಧ್ಯವಾಗದ ಸ್ಥಿತಿಯಲ್ಲಿದ್ದ ತುಂಬು ಗರ್ಭಿಣಿಗೆ ಹೆರಿಗೆ ಮಾಡಿಸಿ, ಸುರಕ್ಷಿತವಾಗಿ ಮನೆಗೆ ತಲುಪಿಸುವ ಕೆಲಸ ಮಾಡುತ್ತಾನೆ. ಒಬ್ಬ ಕಾನ್‌ಸ್ಟೇಬಲ್‌ಗೆ ಎಂತಹ ಮನಸ್ಥಿತಿ ಇರುತ್ತದೆ ಎಂದು ಯೋಚಿಸಬೇಕಿದೆ. ಕರ್ತವ್ಯದ ವೇಳೆ ಎದುರಾಗುವ ಸಮಸ್ಯೆಗಳನ್ನು ನಿಭಾಯಿಸುವ ಕೆಲಸಗಳನ್ನು ಇಲಾಖೆಯ ಸಿಬ್ಬಂದಿ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅನೇಕ ಸಂದರ್ಭಗಳಲ್ಲಿ ಕರ್ತವ್ಯದ ವೇಳೆ ಅಧಿಕಾರಿ ಮತ್ತು ಸಿಬ್ಬಂದಿ ಪ್ರಾಣ ಕಳೆದು ಕೊಂಡಿದ್ದಾರೆ. ಅವರಿಗೆ ಸಾಂತ್ವನ ಹೇಳಬಯಸುತ್ತೇನೆ. ಕರ್ತವ್ಯದ ವೇಳೆ ಅಪರಾಧಿ ಯಾವ ರೀತಿ ಪ್ರತಿಕ್ರಿಯಿಸುತ್ತಾನೆ ಎಂಬುದು ಗೊತ್ತಿರುವುದಿಲ್ಲ. ಪೊಲೀಸರು ಪ್ರಾಣ ಪಣಕ್ಕಿಟ್ಟು ಕೆಲಸ ಮಾಡುವ ಸಂದರ್ಭಗಳನ್ನು ನೋಡಿದ್ದೇವೆ.

ಪೊಲೀಸರ ನಿಸ್ವಾರ್ಥ ಸೇವೆ ಬೇರೆಯವರಿಗೆ ಸ್ಫೂರ್ತಿಯಾಗಲಿ. ಇಂದು ತೆಗೆದುಕೊಂಡಿರುವ ಪದಕಗಳು ಅತ್ಯಂತ ಶ್ಲಾಘನೀಯ. ಮುಂದಿನ ಪೀಳಿಗೆಗೆ ಆದರ್ಶವಾಗಲಿ. ನಿಮ್ಮಂತೆ ಸೇವೆ ಮಾಡಿ ರಾಜ್ಯಕ್ಕೆ ಮತ್ತು ಇಲಾಖೆಗೆ ಕೀರ್ತಿಯನ್ನು ತರಲಿ ಎಂದು ಹೇಳಿದರು.

## ನಾಗನಹಳ್ಳಿ ಪೊಲೀಸ್ ತರಬೇತಿ ಕೇಂದ್ರದ ಬಸಪ್ಪ ಕುಂಬಾರ ಶೆಟ್ಟಿಕೇರಾಗೆ ಕೇಂದ್ರ ಗೃಹ ಸಚಿವರ ಪದಕ ಪ್ರದಾನ



ಕಲಬುರಗಿ:ಅ.30: ಕಲಬುರಗಿ ನಗರದ ನಾಗನಹಳ್ಳಿ ಪೊಲೀಸ್ ತರಬೇತಿಮಹಾವಿದ್ಯಾಲಯದಸಿಬ್ಬಂದಿ ಬಸಪ್ಪ .ಎ. ಕುಂಬಾರ ಶೇಟ್ಟಿಕೆರಾ ರವರಿಗೆ ಪೊಲೀಸ್ ತರಬೇತಿಯಲ್ಲಿ ತೋರಿದ ಪರಿಣಾಮಕಾರಿ ಕರ್ತವ್ಯ ಮತ್ತು ದಕ್ಷತೆಗಾಗಿ ಕೇಂದ್ರ ಗೃಹ ಸಚಿವರ ಪದಕ (ಯೂನಿಯನ್ ಹೋಂ ಮಿನಿಸ್ಟರ್ ಮೇಡಲ್ ಫಾರ್ ಎಕ್ಸಲೆನ್ಸ್ ಇನ್ ಪೊಲೀಸ್ ಟ್ರೇನಿಂಗ್) ಕ್ಕೆ ಪಾತ್ರರಾಗಿದ್ದಾರೆ.ಬೆಂಗಳೂರಿನ ರಾಜಭವನದ ಗಾಜಿನಮನೆಯಲ್ಲಿ ಶನಿವಾರ ನಡೆದ ಕಾರ್ಯಕ್ರಮದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು " ಕೇಂದ್ರ ಗೃಹ ಸಚಿವರ ಪದಕ " ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಇದ್ದರು.

ಬಸಪ್ಪ .ಎ. ಕುಂಬಾರ ಶೆಟ್ಟಿ-ಕೇರಾ ರವರಿಗೆ ಭಾರತ ಸರಕಾರದ ಗೃಹ ಸಚಿವಾಲಯದ ಪೊಲೀಸ್ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದ 2021-2022ನೇ ಸಾಲಿನ "ಕೇಂದ್ರ ಗೃಹ ಸಚಿವರ ಪದಕ" ಲಭಿಸಿರುವುದಕ್ಕೆ ಪೊಲೀಸ್ ತರಬೇತಿ ಮಹಾವಿದ್ಯಾಲಯನಾಗನಹಳ್ಳಿಪೊಲೀಸ್ ಅಧೀಕ್ಷಕರು ಮತ್ತು ಪ್ರಾಂಶುಪಾಲರಾದ ಡೆಕ್ಕಾ ಕಿಶೋರ್ ಬಾಬು, ಡಿಎಸ್ಪಿ ಶಿವಾನಂದ,ಪೊಲೀಸ್ ಇನ್ಸ್‌ಪೆಕ್ಟರ್ ಶಾಂತಿನಾಥ.ಬಿ.ಪಿ,ಆರ್.ಪಿ.ಐಗಳಾದ ಚನ್ನಬಸು,ಪಾರ್ಶ್ವನಾಥ,ಪಿಎಸ್‌ಐಗಳಾದ ಸಂಗೀತಾ, ಯಲ್ಲಮ್ಮ ಹಾಗೂ ಜಯಭೀಮ್, ಹೆಚ್.ಸಿ, ಕಿಷ್ಟಪ್ಪ ಶಾಸಮೋಳ,ರಮೇಶ,ಶಿವಾನಂದ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಸಂತಸ ವ್ಯಕ್ತಪಡಿಸಿದ್ದಾರೆ.

## ಪ್ರದೇಶದ ಮೇಲೆ ಸುಮೋಟೊ ಕೇಸ್ ರಿಜಿಸ್ಟರ್

ಮಾಡುವವರಿಗೆ ವಿಮೆಯನ್ನು ಕಡ್ಡಾಯ ಮಾಡಿಸಬೇಕು ಎಂಬುದು ತಿಳಿಯುವುದಿಲ್ಲವೇ ಎಂದು ಉಪ ಲೋಕಾಯುಕ್ತರು ಕಂಪನಿಯ ಮಾಲೀಕರಿಗೆ ಪ್ರಶ್ನಿಸಿದರು.

ಜಿಲ್ಲೆಯಲ್ಲಿನ ಎಲ್ಲ ಕ್ರಷರ್ ಮಾಲೀಕರಿಗೆ ಕೂಡಲೇ ಪತ್ರ ಕಳುಹಿಸಿ ಅಲ್ಲಿ ಕೆಲಸ ಮಾಡುವ ಎಲ್ಲರಿಗೂ ವಿಮೆ ಮಾಡಿಸಿದ ಬಗ್ಗೆ ವರದಿಯನ್ನು ಕೂಡಲೇ ಉಪ ಲೋಕಾಯುಕ್ತರ ಕಚೇರಿಗೆ ಕಳುಹಿಸಬೇಕು ಎಂದು, ಉಪ ಲೋಕಾಯುಕ್ತರು ಗಣಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅನಧೀಕೃತ ಗಣಿಗಾರಿಕೆ ಬೇಡ: ಬಫರ್ ಝೋನ್ ಉಲ್ಲಂಘಿಸಿ ಗಣಿಗಾರಿಕೆ ನಡೆಸಿದ ಬಗ್ಗೆ ಕಂಪನಿಯವರಿಗೆ ನೋಟೀಸ್ ಜಾರಿ ಮಾಡಬೇಕು. ದಂಢ ವಿದಿಸಬೇಕು ಎಂದು ಗಣಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದ ಉಪ ಲೋಕಾಯುಕ್ತರು, ಜಿಲ್ಲೆಯಲ್ಲಿ ಎಷ್ಟು ಕ್ವಾರಿಗಳಿವೆ ಎಂದು ಕೇಳಿದರು. ರಾಯಚೂರ ಜಿಲ್ಲೆಯಲ್ಲಿ 133 ಕ್ವಾರಿಗಳಿವೆ ಎಂದು ಅಧಿಕಾರಿಗಳು ಪ್ರತಿಕ್ರಿಯಿಸಿದರು. ಜಿಲ್ಲೆಯ ಯಾವುದೇ ಕಡೆಗಳಲ್ಲಿ ಅನಧೀಕೃತವಾಗಿ ಗಣಿಗಾರಿಕೆ ನಡೆಯಕೂಡದು ಎಂದು ಇದೆ ವೇಳೆ ಉಪ ಲೋಕಾಯುಕ್ತರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಾಲೀಕರು ಕಾನೂನುಬದ್ಧವಾಗಿ ಕೆಲಸ ಮಾಡಲಿ: ಆಯಾ ಗಣಿಗಳ ಮಾಲೀಕರು ಕಾನೂನು ಬದ್ಧವಾಗಿ ಕೆಲಸ ಮಾಡಬೇಕು. ಲೀಸ್ ಪಡೆದುಕೊಂಡ ಸ್ಥಳದಲ್ಲಿ ಬೌಂಡ್ರಿಗೆ ನಿಗದಿಪಡಿಸಿದ ಜಾಗ ಕಡ್ಡಾಯ ಬಿಡಬೇಕು. ಲೀಸ್ ಷರತ್ತಿನಲ್ಲಿನ ಎಲ್ಲ ನಿಯಮಗಳ ಪಾಲನೆ ಮಾಡಬೇಕು. ಮಾಲೀಕರು ಮತ್ತು ಎಲ್ಲ ಕೆಲಸಗಾರರು ವಿಮೆ ಮಾಡಿಸಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು.

ತಾಯಿ ಗರ್ಭ ಸೀಳಿದಂತಿದೆ: ಗಣಿಗಾಗಿ ತೆಗೆದ ಕಂದಕವು ಭಯಾನಕವಾಗಿದೆ. ತಾಯಿ ಗರ್ಭವನ್ನು ಸೀಳಿದಂತಿದೆ. ಹೀಗೆ ಭೂಮಿಯಲ್ಲಿನ ಫಲವತ್ತತೆ ಕಿತ್ತ ಮೇಲೆ ಅದನ್ನು ಸರಿ ಮಾಡದಿದ್ದರೆ ಭೂಮಿ ಸಮತೋಲನ ಕಳೆದುಕೊಳ್ಳುತ್ತದೆ. ಭೂಮಿಯನ್ನು ಬರೀ ತಿನ್ನೋದಾ? ಅಗೆಯೋದಾ?

ಮರಳಿ ಹಾಕಲ್ವಾ? ಎಂದು ಪ್ರಶ್ನಿಸಿದ ಉಪ ಲೋಕಾಯುಕ್ತರು, ಗಣಿ ಮಾಲೀಕರಿಗೆ ತೊಂದರೆ ಕೊಡಬೇಕು ಎಂಬುದು ನಮ್ಮ ಉದ್ದೇಶವಲ್ಲ; ಕ್ವಾರಿ ಕ್ಲೋಸರ್ ಪ್ಲಾನದಲ್ಲಿ ಏನು ಇದೆ ಅದನ್ನು ಆಯಾ ಮಾಲೀಕರು ಪೂರ್ಣಗೊಳಿಸಬೇಕು, ಕಂದಕ ಮುಚ್ಚಬೇಕು, ಸಮತಟ್ಟು ಮಾಡಬೇಕು. ಗಿಡ ನೆಡಬೇಕು. ಭೂಮಿ ಕಾಪಾಡಬೇಕು ಎಂದು ತಿಳಿಸುತ್ತಿದ್ದೇವೆ ಎಂದರು.

ಆರ್ ಟಿಓಗೆ ಸೂಚನೆ: ಗಣಿಗಾರಿಕೆಗೆ ಎಷ್ಟು ಗಾಡಿಗಳನ್ನು ಬಳಸಲಾಗುತ್ತದೆ. ಎಲ್ಲ ಗಾಡಿಗಳಿಗೆ ಜಿಪಿಎಸ್ ಫಿಕ್ಸ್ ಮಾಡಿದ್ದನ್ನು ನೋಡಿದ್ದೀರಾ? ಒಂದೇ ನಂಬರ್ ಪ್ಲೇಟನಲ್ಲಿ ಎಷ್ಟು ಗಾಡಿಗಳು ಓಡುತ್ತವೆ? ಎಂದು ಉಪ ಲೋಕಾಯುಕ್ತರು, ಪ್ರಾದೇಶಿಕ ಸಾರಿಗೆ ಅಧಿಕಾರಿಗೆ ಪ್ರಶ್ನಿಸಿ, ವಾಹನಗಳ ಮೇಲ್ವಿಚಾರಣೆ ಸರಿಯಾಗಿ ನಡೆಯುವಂತಾಗಬೇಕು ಎಂದು ಸೂಚನೆ ನೀಡಿದರು.

ಗಾಂಜಾ ಗುಟಕಾ ತಿನಬೇಡಿ: ಆರೋಗ್ಯ ಉಳಿಸಿಕೊಳ್ಳಿ. ಗುಟಕಾ ಸೀಗರೇಟು ಸೇದಬೇಡಿ. ಎಲ್ಲರೂ ಕಡ್ಡಾಯ ವಿಮೆ ಮಾಡಿಸಿ ಎಂದು ಇದೆ ವೇಳೆ ಉಪ ಲೋಕಾಯುಕ್ತರು ಗಣಿಯಲ್ಲಿರುವ ಕೆಲಸದಾರರಿಗೆ ಸಲಹೆ ಮಾಡಿದರು.

ತಪ್ಪಿತಸ್ಥರೆಲ್ಲರ ಮೇಲೂ ಸುಮೊಟೊ ಕೇಸ್: ಗಣಿಗಾರಿಕೆ ಪೀಡಿತ ಇಡೀ ಪ್ರದೇಶದ ಮೇಲೆ ಸ್ಥಳದಲ್ಲೆ ಕೇಸ್ ದಾಖಲಿಸಿದ್ದೇನೆ. ಕಾನೂನುಬದ್ದವಾಗಿ ಪ್ರಕರಣದ ವಿಚಾರಣೆ ನಡೆಸಿ ತಪ್ಪಿತಸ್ಥರು ಎಂದು ಕಂಡುಬಂದರೆ ಗಣಿಗಾರಿಕೆಗೆ ಸಂಬಂಧಿಸಿದ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳ ಮೇಲೂ ಕೇಸ್ ದಾಖಲಿಸಲಾಗುವುದು ಎಂದು ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಸುದ್ದಿಗಾರರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರಿನ ಉಪ ಲೋಕಾಯುಕ್ತ ಕಚೇರಿಯ ಅಪರ ನಿಬಂಧಕರಾದ ನ್ಯಾಯಾಧೀಶರಾದ ರಮಾಕಾಂತ ಚವ್ಹಾಣ್, ಶಿವಾಜಿ ಅನಂತ ನಲವಾಡೆ, ಉಪ ನಿಬಂಧಕರು ಆಗಿರುವ ನ್ಯಾಯಾಧೀಶರಾದ ಅರವಿಂದ, ರಾಯಚೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಬಿ.ಚಿಟುಗುಬ್ಬಿ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ, ಭೂಮಾಪನ ಇಲಾಖೆ, ಪರಿಸರ ಇಲಾಖೆ, ಜೆಸ್ಕಾಂ, ಆರ್ ಟಿಓ, ಕಾರ್ಮಿಕ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ರೈತರಿಗೆ ಸರಕಾರದ ಯೋಜನೆಗಳ ಅರಿವು ಅಗತ್ಯ : ಭಾಂಡಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30-ರೈತರಿಗೆ ಸರ್ಕಾರದ ಯೋಜನೆಗಳ ಮಾಹಿತಿ, ಮಾರುಕಟ್ಟೆ ಹಾಗೂ ಆಹಾರ ಸಂಸ್ಕರಣೆಯಂತಹ ಉದ್ಯಮಗಳ ಜ್ಞಾನ ದೊರೆತಾಗ ಮಾತ್ರ ಆರ್ಥಿಕವಾಗಿ ಸದೃಢರಾಗಲು ಸಾಧ್ಯವಾಗುತ್ತದೆ ಎಂದು ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಗಳು, ಕೆಪೆಕ್ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಶನಿವಾರ ಹಮ್ಮಿಕೊಂಡ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆಯೋಜನೆಯಡಿ ಪಿಎಂಎಫ್‌ಎಂಇ ಯೋಜನೆಯ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೈತರಿಗೆ ಸರಿಯಾದ ಮಾಹಿತಿ ಕೊರತೆಯಿಂದ ಅನೇಕರು ಸಾಲಗಾರರಾಗುತ್ತಿದ್ದಾರೆ. ಇಂದಿನ ಸಮಾಜದಲ್ಲಿ ಕೃಷಿಗೆ ಬೇಕಾದ ಮಹತ್ವ ನೀಡದಿರುವದರಿಂದ ಜನರಲ್ಲಿ ಕೃಷಿಯತ್ತ ಆಸಕ್ತಿ ದಿನೇ ದಿನೇ ಕುಂಟಿತಗೊಳ್ಳುತ್ತಿದೆ. ಇತ್ತೀಚೆಗೆ ಜನಪ್ರಿಯವಾಗುತ್ತಿರುವ ರೆಡಿಮೆಡ್ ಆಹಾರಗಳು ಆರೋಗ್ಯಕ್ಕೆ ಹಾನಿಕಾರಕವಾಗುತ್ತಿವೆ. ಸಾವಯವ ಆಹಾರಗಳ ಬೆಲೆ ಸ್ವಲ್ಪ ಹೆಚ್ಚಾದರೂ ದೀರ್ಘಾವಧಿ ಆರೋಗ್ಯಕ್ಕೆ ಅನುಕೂಲಕರವಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹಾಗೂ ಬಿಡಿಟಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಕಿರು ಆಹಾರ ಮಾರಾಟಕ್ಕಾಗಿ ರೂಪಿಸಲಾದ ಚಾಲುಕ್ಯನಾಡು ವೆಬ್‌ಸೈಟ್ ಬಿಡುಗಡೆಗೊಳಿಸಿ ಮಾತನಾಡಿ, ರೈತರು ಮತ್ತು ಗೃಹಿಣಿಯರು ತಯಾರಿಸುವ ಆಹಾರ ಪದಾರ್ಥಗಳನ್ನು ಮೌಲ್ಯವರ್ಧಕವಾಗಿ ರೂಪಾಂತರಿಸಿ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸರ್ಕಾರದಿಂದ ಅನೇಕ ಸಬ್ಸಿಡಿ ಆಧಾರಿತ ಸಾಲ ಸಹಾಯ ಹಾಗೂ ಯಂತ್ರೋಪಕರಣಗಳ ಒದಗಿಸುವ ಯೋಜನೆಗಳು ಲಭ್ಯವಿವೆ. ಇಂತಹ ಯೋಜನೆಗಳ ಕುರಿತು ಸರಿಯಾದ ಅರಿವು ಮೂಡಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಬಾಗಲಕೋಟೆ ಜಿಲ್ಲೆಯಲ್ಲಿ ನೀರು ಹಾಗೂ ಭೂಮಿ ಕೃಷಿಗೆ ಅನುಕೂಲವಾಗಿದೆ. ತಂತ್ರಜ್ಞಾನ ಬಳಸಿ ಹೆಚ್ಚು ಹೆಚ್ಚು ಆಹಾರ ಉತ್ಪಾದನೆ ಮಾಡಿ ಇತರ ಜಿಲ್ಲೆ ಹಾಗೂ ರಾಜ್ಯಗಳಿಗೆ ರಫ್ತು ಮಾಡುವಂತಾಗಬೇಕು ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಸರ್ಕಾರದ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿ, ಅವರು ಆರ್ಥಿಕವಾಗಿ ಅಭಿವೃದ್ಧಿ ಹೊಂದಿದಾಗ ಮಾತ್ರ ಯೋಜನೆ ಯಶಸ್ವಿಯಾಗುತ್ತದೆ ಎಂದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಜಿಲ್ಲಾ ಕೃಷಿಕ ಸಮಾಜ ಅಧ್ಯಕ್ಷ ಮಹಾಂತೇಶ ಹಟ್ಟಿ, ಬೆಂಗಳೂರು ಕೆಪೆಕ್‌ನ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್.ಶಿವಪ್ರಕಾಶ್, ಕೃಷಿ ವಿಜ್ಞಾನ ಕೇಂದ್ರ ಮುಖ್ಯಸ್ಥ ಗುರುದತ್ ಹೆಗಡೆ, ರೇಷ್ಮೆ ಇಲಾಖೆ ಉಪ ನಿರ್ದೇಶಕ ಎಸ್.ಎಂ.ಕೋರಿ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗಬ್ಬೂರಲ್ಲಿ ನಿವೇಶನಕ್ಕೆ ಹಂಚಿದ ಜಾಗ ಒತ್ತುವರಿ ದೂರು: ಸುಮೊಟೊ ಕೇಸ್ ದಾಖಲಿಸಿದ ಉಪ ಲೋಕಾಯುಕ್ತರು

ರಾಯಚೂರು ಆ 30 : 1991ರಲ್ಲಿ ಹಂಚಿಕೆಮಾಡಿದ ಕರ್ನಾಟಕ ಸರ್ಕಾರದ ಆಶ್ರಯ ಯೋಜನೆಯಡಿಯ ನಿವೇಶನ ಹಕ್ಕುಪತ್ರ ಹಿಡಿದು ರಾಯಚೂರು ಕೃಷಿ ವಿವಿಯ ಆವರಣದ ಸಭಾಂಗಣದಲ್ಲಿ ಉಪ ಲೋಕಾಯುಕ್ತರಿಂದ ನಡೆಯುತ್ತಿದ್ದ ಬಾಕಿ ಪ್ರಕರಣಗಳ ವಿಲೇವಾರಿ ಕಾರ್ಯಕ್ರಮಕ್ಕೆ ಆಗಮಿಸಿದ 66 ಫಲಾನುಭವಿಗಳ ಅಹವಾಲನ್ನು ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಆಗಸ್ಟ್ 30ರಂದು ಆಲಿಸಿದರು.

ಮಧ್ಯಾಹ್ನ ಊಟದ ವಿರಾಮದ ನಂತರ ಉಪ ಲೋಕಾಯುಕ್ತರು, ಕಾರ್ಯಕ್ರಮದ ಸ್ಥಳವಾದ ಜಗಜ್ಯೋತಿ ಬಸವೇಶ್ವರ ಸಭಾಂಗಣಕ್ಕೆ ಆಗಮಿಸಿದಾಗ ಸಭಾಂಗಣದ ಬಾಗಿಲ ಬಳಿಯಲ್ಲಿ, ನಿವೇಶನ ಹಕ್ಕು ಪತ್ರಗಳ ಹಿಡಿದು ನಿಂತಿದ್ದ 20ಕ್ಕು ಹೆಚ್ಚು ಮಹಿಳೆಯರನ್ನು ಕಂಡು ಅವರ ಬಳಿ ತೆರಳಿ ಅವರ ಅಹವಾಲು ಆಲಿಸಿದರು.

ನಮ್ಮದು ದೇವದುರ್ಗ ತಾಲೂಕು. ಗಬ್ಬೂರು ಗ್ರಾಮದ ಸರ್ವೆ ನಂ.1007ರಲ್ಲಿ ರಚಿಸಿರುವ 30*40 ವಿಸ್ತೀರ್ಣಯುಳ್ಳ ನಿವೇಶನಗಳನ್ನು 1991 ನವೆಂಬರನಲ್ಲಿ ಹಂಚಿಕೆ ಮಾಡಿದ್ದಾರೆ. ಆದರೆ ಆ ಜಾಗವನ್ನು ಬೇರೆಯವರು ಒತ್ತುವರಿ ಮಾಡಿದ್ದಾರೆ ಎಂದು ತಮ್ಮ ಅಳಲನ್ನು ತೋಡಿಕೊಂಡರು.

ಇದಕ್ಕೆ ಸ್ಪಂದಿಸಿದ ಉಪಲೋಕಾಯುಕ್ತರು, ಸ್ಥಳಕ್ಕೆ ದೇವದುರ್ಗ ತಹಸೀಲ್ದಾರ ಹಾಗೂ ಗಬ್ಬೂರ ಪಿಡಿಓ ಅವರನ್ನು ಕರೆದು ವಿಚಾರಿಸಿದರು. ಈ ಬಗ್ಗೆ ವಿಚಾರಣೆ ನಡೆಸಲು ಸಂಬಂಧಿಸಿದ ಅಧಿಕಾರಿಗಳ ಮೇಲೆ ಸ್ಥಳದಲ್ಲೇ ಸುಮೊಟೊ ಕೇಸ್ ದಾಖಲಿಸಿದರು.

## ಗಣೇಶ ಹಬ್ಬದ ಪ್ರಯುಕ್ತ ಮದ್ಯ ಮಾರಾಟ ನಿಷೇಧಿಸಿ ಡಿ.ಸಿ. ಆದೇಶ

ಕಲಬುರಗಿ,ಆ.30-ಗಣೇಶ ಹಬ್ಬದ ಆಚರಣೆ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು ಕಲಬುರಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ 2025ರ ಆಗಸ್ಟ್ 31ರ ಬೆಳಿಗ್ಗೆ 6 ಗಂಟೆಯಿಂದ ಸೆಪ್ಟೆಂಬರ್ 1 ಬೆಳಗಿನ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯ ಮಾರಾಟವನ್ನು ನಿಷೇಧಿಸಿ ಅವರು ಶನಿವಾರ ಆದೇಶ ಹೊರಡಿಸಿದ್ದಾರೆ.

ಕಲಬುರಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಎಲ್ಲಾ ತರಹದ ಮಾರಾಟವನ್ನು ನಿಷೇಧಿಸಿ ಹಾಗೂ ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಅವರು ಆದೇಶ ಹೊರಡಿಸಿದ್ದಾರೆ.

ಈ ಹಬ್ಬದ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ಆದೇಶ ಹೊರಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಪ್ರವಾಸೋದ್ಯಮ ಇಲಾಖೆಯಿಂದ ತರಬೇತಿಗೆ ಅರ್ಜಿ ಆಹ್ವಾನ


ರಾಯಚೂರು ಆ30 : ಇಲ್ಲಿನ ಪ್ರವಾಸೋದ್ಯಮ ಇಲಾಖೆಯಿಂದ 2024-25ನೇ ಸಾಲಿನ ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿದ ವಿದ್ಯಾವಂತ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅರ್ಹ ಅಭ್ಯರ್ಥಿಗಳಿಂದ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯಲ್ಲಿ ಆಹಾರ ಮತ್ತು ಪಾನೀಯ ಸೇವಾ ಸ್ಟೀವರ್ಡ್ಗೆ ಕನಿಷ್ಠ 10ನೇ ತರಗತಿ ಪಾಸ್ ಆಗಿರುವ 20 ರಿಂದ 45 ವರ್ಷಗಳೊಗಿರಬೇಕು. 15 ವಾರಗಳ ಕಾಲ ತರಬೇತಿ ನೀಡಲಾಗುವುದು. ಕೊಠಡಿ ಪರಿಚಾರಕ ತರಬೇತಿಗೆ ಕನಿಷ್ಠ 5ನೇ ತರಗತಿ ಪಾಸ್ ಆಗಿರುವ ಪಾಸ್ ಆಗಿರುವ 20 ರಿಂದ 45 ವರ್ಷಗಳೊಗಿರಬೇಕು. 15 ವಾರಗಳ ಕಾಲ ತರಬೇತಿ ನೀಡಲಾಗುವುದು.

ಫ್ರಂಟ್ ಆಫೀಸ್ ಅಸೋಸಿಯೇಟ್ ತರಬೇತಿಗೆ ಕನಿಷ್ಠ 12ನೇ ತರಗತಿ ಪಾಸ್ ಆಗಿರುವ 20 ರಿಂದ 45 ವರ್ಷಗಳೊಗಿರಬೇಕು. 20 ವಾರಗಳ ಕಾಲ ತರಬೇತಿ ನೀಡಲಾಗುವುದು.

ಮಲ್ಟಿ ಕಸಿನ್ ಕುಕ್ ತರಬೇತಿಗೆ 8ನೇ ತರಗತಿ ಪಾಸ್ ಆಗಿರುವ 20 ರಿಂದ 45 ವರ್ಷಗಳೊಗಿರಬೇಕು. 20 ವಾರಗಳ ಕಾಲ ತರಬೇತಿ ನೀಡಲಾಗುವುದು.ಎಸ್.ಸಿ.ಎಸ್.ಪಿ/ಟಿ.ಎಸ್.ಪಿಯೋಜನೆಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿಗೆ ಆಸಕ್ತರು ಸೆ.11ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

## ಕೆಂಭಾವಿ ಪಟ್ಟಣದಲ್ಲಿ ಅದ್ದೂರಿ ಗಣೇಶೋತ್ಸವ: ಭಕ್ತರ ಹುಮ್ಮಸ್ಸು ಮೆರೆದ ಬಜಾರೋಡಿನ "ಗಣೇಶ"



ಮಲ್ಲಮ್ಮ ನುಡಿ ವಾರ್ತೆ ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದ ಬಜಾರೋಡಿನಲ್ಲಿ ಜರುಗಿದ ಗಣೇಶೋತ್ಸವ ಈ ಬಾರಿ ಅದ್ದೂರಿಯಾಗಿ ಭಕ್ತರ ಸೆಳೆತವನ್ನು ಗಳಿಸಿತು. ನಾನಾ ಸಾಂಸ್ಕೃತಿಕ ಕಾರ್ಯಕ್ರಮಗಳು, ದೀಪಾಲಂಕಾರ ಮತ್ತು ಶ್ರದ್ಧಾಭಕ್ತಿಯಿಂದ ಕೂಡಿದ ಪೂಜಾ ಕರ್ಮಗಳು ಈ ಬಾರಿ ವಿಶೇಷ ಆಕರ್ಷಣೆಯಾಗಿದ್ದವು.

ಬಜಾರೋಡಿನಲ್ಲಿ ಪ್ರತಿಷ್ಠಾಪಿಸಲಾದ ಗಣಪತಿ ಮೂರ್ತಿಗೆ ನೂರಾರು ಭಕ್ತರು ನಿತ್ಯ ಬಂದು ದರ್ಶನ ಪಡೆದು, ಪೂಜೆ ಸಲ್ಲಿಸಿದರು. ಗಣೇಶನ ಮಂಟಪವನ್ನು ಸೊಬಗಿನ ಲೈಟಿಂಗ್ ಹಾಗೂ ಹೂವಿನ ಅಲಂಕಾರದಿಂದ ಭವ್ಯವಾಗಿ ಸಜ್ಜುಗೊಳಿಸಲಾಗಿತ್ತು.

ಪ್ರಸಾದ ವ್ಯವಸ್ಥೆ: ಭಕ್ತರ ಮೆಚ್ಚುಗೆಗೆ ಪಾತ್ರ ಗಣೇಶೋತ್ಸವದ ಅಂಗವಾಗಿ ಆಯೋಜಿಸಲಾದ ಪ್ರಸಾದ ವಿತರಣಾ ಕಾರ್ಯಕ್ರಮದಲ್ಲಿ ಶೇಕಡಾ ಸಂಖ್ಯೆಯಲ್ಲಿ ಭಕ್ತಾದಿಗಳು ಭಾಗವಹಿಸಿದರು. ಸಮರ್ಪಕ ವ್ಯವಸ್ಥೆಯೊಂದಿಗೆ ಪ್ರಸಾದ ವಿತರಣೆ ನಡೆದಿದ್ದು, ಎಲ್ಲರಿಗೂ ತೃಪ್ತಿಕರ ಅನುಭವವಾಯಿತು. ಸಾರ್ವಜನಿಕರಿಂದ ಹಾಗೂ ಸ್ವಯಂಸೇವಕರಿಂದ ಉತ್ತಮ ಸಹಕಾರ ದೊರಕಿದ್ದು, ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

ಈ ವರ್ಷದ ಗಣೇಶೋತ್ಸವವು ಭಕ್ತಿ, ಶಿಸ್ತಿನ ಜೊತೆಗೆ ಸಮಾಜದ ಒಗ್ಗಟ್ಟಿನ ನಿದರ್ಶನವಾಗಿದ್ದು, ಗಣೇಶನ ಕೃಪೆಯಿಂದ ಇಡೀ ಕೆಂಭಾವಿ ಪಟ್ಟಣದಲ್ಲಿ ಆನಂದದ ವಾತಾವರಣವಿತ್ತು.!


## ಕಾನೂನು ಪದವಿಧರರಿಗೆ ತರಬೇತಿಗಾಗಿ ಅರ್ಜಿ ಆಹ್ವಾನ

ಬೀದರ,ಅ 30 : ಬೀದರ ಜಿಲ್ಲೆಯಲ್ಲಿ ಕಾನೂನು ಪದವಿ ಪಡೆದಿರುವ ಹಿಂದುಳಿದವರ್ಗಗಳ 10 ಅಭ್ಯರ್ಥಿಗಳಿಗೆ ಸರಕಾರಿ ವಕೀಲರು ಅಥವಾ 20 ವರ್ಷಗಳಿಗಿಂತ ಹೆಚ್ಚಿನ ಅನುಭವವುಳ್ಳ ವಕೀಲರಿಂದ ತರಬೇತಿ ಕೊಡಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಯ ಅವಧಿಯು 4 ವರ್ಷಗಳಿದ್ದು, ತರಬೇತಿ ಅವಧಿಯಲ್ಲಿ ಮಾಸಿಕ 4000 ರೂ. ತರಬೇತಿ ಭತ್ಯೆ ನೀಡಲಾಗುತ್ತದೆ. ಅಭ್ಯರ್ಥಿಗಳು ಹಿಂದುಳಿದ ವರ್ಗಗಳ ಪ್ರವರ್ಗ-1,2ಎ,3ಎ,3ಬಿಗೆ ಸೇರಿದವರಾಗಿರಬೇಕು, ಬೀದರ ಜಿಲ್ಲೆಯ ನಿವಾಸಿಯಾಗಿರಬೇಕು, ಪ್ರವರ್ಗ-1 ರಡಿಯಲ್ಲಿ ಬರುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಕುಟುಂಬ ವಾರ್ಷಿಕ ಆದಾಯ 3.50 ಲಕ್ಷ ರೂ. ಮತ್ತು ಪ್ರವರ್ಗ-2ಎ, 3ಎ ಮತ್ತು 3ಬಿ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಕುಟುಂಬ ವಾರ್ಷಿಕ ಆದಾಯ 2.50 ಲಕ್ಷ ಮಿತಿ ಮೀರಿರಬಾರದು. ಅಭ್ಯರ್ಥಿಯು ಬಾರ ಕೌನ್ಸಿಲ್‌ನಲ್ಲಿ ಹೆಸರನ್ನು ನೊಂದಾಯಿಸಿರಬೇಕು. ತರಬೇತಿಗೆ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಕ್ಕೆ ಹಿಂದು 02 ವರ್ಷದೊಳಗಾಗಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕಡೆಯ ದಿನಾಂಕಕ್ಕೆ ಪ್ರವರ್ಗ 2ಎ, 3ಎ, ಮತ್ತು 3ಬಿಯ ಅಭ್ಯರ್ಥಿಯ ವಯಸ್ಸು 38ಕ್ಕೆ ಹಾಗೂ ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳ ವಯಸ್ಸು 40ಕ್ಕೆ ಮಿರಿರಬಾರದು. ಮತ್ತು ಅರ್ಜಿ ಸ್ವೀಕರಿಸಲು ನಿಗಡಿಪಡಿಸಿರುವ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯು 3 ವರ್ಷಗಳ ಅವಧಿಯೊಳಗೆ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

ದಾಖಲಾತಿಗಳು: ಎಸ್.ಎಸ್.ಎಲ್.ಸಿ.ದೃಢೀಕೃತ ಅಂಕಪಟ್ಟಿ, ಕಾನೂನು ಪದವಿ ಪರೀಕ್ಷೆಯ ಎಲ್ಲಾ ವರ್ಷಗಳ ದೃಢೀಕೃತ ಅಂಕಪಟ್ಟಿ, ತಹಸೀಲ್ದಾರರಿಂದ ನೀಡಲ್ಪಟ್ಟ ಜಾತಿ/ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಬಾರ ಕೌನ್ಸಿಲ್‌ನಲ್ಲಿ ನೋಂದಾಯಿಸಿದ ಪ್ರಮಾಣ ಪತ್ರ.

ಅರ್ಹ ಅಭ್ಯಥಿರ್ಗಳು ಅರ್ಜಿ ನಮೂನೆಗಳನ್ನು ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ನಾವದಗೇರಿ ಬೀದರ ಇಲ್ಲಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 08-09-2025 ರಂದು ಸಂಜೆ 05:00 ಗಂಟೆಯೊಳಗೆ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಾವದಗೇರಿ ಬೀದರ ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಮಟ್ಟದ ಹಿಂದುಳಿದ ವರ್ಗಗಳ ಕಾನೂನು ಪದವೀಧರರ ಆಯ್ಕೆ ಸಮಿತಿ ಹಾಗೂ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೀದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :– ತಾಲೂಕಿನ ಆಲಗೂಡ ಗ್ರಾಮದ ಶ್ರೀನಾಥ ಸಾರ್ವಜನಿಕ ಗಣೇಶ ಮಂಡಳ ವತಿಯಿಂದ ಗಣೇಶನ ಮೂರ್ತಿ ಪ್ರತಿಷ್ಠಾಪಿಸಲಾಯಿತು. ಚಿತ್ರದಲ್ಲಿ ಪ್ರಮುಖರಾದ ಅನಂತ ಸೋಮವಂಶಿ. ಗಣೇಶ ಬಿರಾದಾರ. ಶುಭಂ ಉಕ್ಕಾವಾಲೆ. ಬಬಲು ಸೋಮವಂಶಿ. ಕ್ರಷ್ಣಾ ಪರಾಂಡೆ. ಸುನಿಲ ಇಸಾಜಿ. ವಿಠ್ಠಲ ಪರಾಂಡೆ. ಪ್ರಮೋದ ಪಾಟೀಲ್. ಯೋಗೇಶ ಬಿರಾದಾರ್. ಕರಣ ಭೋಪಲೆ. ಸಂದಿಪ ಇಸಾಜಿ. ಸಂದೀಪ ಬಿರಾದಾರ ಸೇರಿದಂತೆ ಇನ್ನಿತರರು ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ.)

## ಸಹಕಾರ ಬೆಳವಣಿಗೆಯಲ್ಲಿ ಯುವಕರ ಪಾತ್ರ ಮಹತ್ವದ್ದು : ಶಾಸಕ ಶರಣು ಸಲಗರ್



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಸಹಕಾರ ಬೆಳವಣಿಗೆಯಲ್ಲಿ ಇಂದು ಯುವಕರ ಪಾತ್ರ ಅತ್ಯಂತ ಮಹತ್ವದಾಗಿದೆ ಎಂದು ಶಾಸಕರಾದ ಶರಣು ಸಲಗರ್ ಅಭಿಪ್ರಾಯ ವ್ಯಕ್ತಪಡಿಸಿದರು.

ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಬೆಂಗಳೂರು ಹಾಗೂ ಬೀದರ್ ಜಿಲ್ಲಾ ಸೌಹಾರ್ದ ಒಕ್ಕೂಟ ನಿಯಮಿತಿ ಬೀದರ್ ಹಾಗೂ ಬಸವಕಲ್ಯಾಣ ತಾಲೂಕಿನ ಸೌಹಾರ್ದ ಸಹಕಾರಿಗಳ ಆಶ್ರಯದಲ್ಲಿ ಜರುಗಿದ ಸೌಹಾರ್ದ ಕಾಯ್ದೆ ರಜಿತ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡ ಯುವಕರು ಮತ್ತು ಸಹಕಾರ ಕುರಿತದ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ದೇಶದ ಬಹುದೊಡ್ಡ ಕ್ಷೇತ್ರವಾಗಿದ್ದ ಸಹಕಾರ ಕ್ಷೇತ್ರದಲ್ಲಿ ಇಂದು ಯುವ ಸಮುದಾಯ ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದು ಅವಶ್ಯಕವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಯುಕ್ತ ಸಹಕಾರಿಯ ನಿರ್ದೇಶಕರಾದ ಗುರುನಾಥ್ ಜಾಂತಿಕರ್ ಮಾತನಾಡಿ ದೇಶದ 120 ವರ್ಷದ ಇತಿಹಾಸ ಹೊಂದಿರುವ ಸಹಕಾರ ಚಳುವಳಿಯಲ್ಲಿ ಹಲವು ಏರಿಳಿತವನ್ನು ಕಂಡರೂ ಸಹ ಜನಸಾಮಾನ್ಯರ ನಿರೀಕ್ಷೆಯಂತೆ ಸಹಕಾರ ಕ್ಷೇತ್ರ ಬಲವರ್ಧನೆ ಹೊಂದಿರುವುದಿಲ್ಲ ಆದರೆ ಈ ಸಹಕಾರ ಕ್ಷೇತ್ರದ ಕೆಲ ನ್ಯೂನತೆಗಳನ್ನು ಅಂಶಗಳನ್ನು ಸರಿಪಡಿಸಿಕೊಂಡು ಕಳೆದ 25 ವರ್ಷದ ಹಿಂದೆ ಜಾರಿಗೆ ಬಂದ ಸೌಹಾರ್ದ ಸಹಕಾರಿ ಕಾಯ್ದೆ ಇಂದಿಗೆ ರಜತ ಮಹೋತ್ಸವ ಆಚರಿಸುತ್ತಿದೆ. ಈ ಕಾಯ್ದೆಯಿಂದ ಜನಸಾಮಾನ್ಯರಿಗೆ ವಿಶೇಷವಾಗಿ ಯುವ ಸಮುದಾಯ ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಅನುಕೂಲಕರವಾಗಿದೆ ಆದರೆ ಈ ಬೃಹತ್ ಆದಂತ ಸಹಕಾರ ಕ್ಷೇತ್ರಕ್ಕೆ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಯುವ ಸಮುದಾಯ ಪಾಲ್ಗೋಳ್ಳುವಿಕೆ ಅವಶ್ಯಕತೆ ಇದೆ ಯುವ ಸಮುದಾಯ ಆಗಮನದಿಂದಾಗಿ ಹೊಸ ಹೊಸ ಆಲೋಚನೆಗಳು ಹೊಸ ಹೊಸ ಸಹಕಾರಿ ಸಂಸ್ಥೆಗಳು ಪ್ರಾರಂಭಿಸಲು ಅನುಕೂಲಕರವಾಗುತ್ತದೆ ಆ ನಿಟ್ಟಿನಲ್ಲಿ ಸಂಯುಕ್ತ ಸಹಕಾರಿಯು ಈ ವರ್ಷ ರಾಜ್ಯದಂತ ಯುವ ಸಮುದಾಯಗಳಲ್ಲಿ ಸಹಕಾರ ಚಳುವಳಿ ಕುರಿತು ಜಾಗೃತಿ ಮಾಡುವ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಅದೇ ರೀತಿಯಾಗಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ಸಹಕಾರ ಬೆಳವಣಿಗೆಗೆ ಪ್ರೋತ್ಸಾಹ ನೀಡಿ ಹಲವು ಯೋಜನೆಗಳನ್ನು ಹಾಗೂ ಕ್ರಮಗಳನ್ನು ಅನುಸರಿಸುತ್ತಿದೆ ಆದ್ದ–ರಿಂದ ಭಾರತದ ಭವಿಷ್ಯ ಸಹಕಾರ ಕ್ಷೇತ್ರದ ಮೇಲೆ ಹೊಂದಿದೆ ಆ ಹಿನ್ನೆಲೆಯಲ್ಲಿ ಯುವ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವುದರ ಮುಖಾಂತರ ಇದರ ಲಾಭವನ್ನು ಪಡೆದುಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಸವರಾಜ ಕೊರಕೆ. ಕೋಶಾಧ್ಯಕ್ಷರಾದ ರಾಜಕುಮಾರ್ ಹೋಳಕುಂದೆ. ಕಾರ್ಯದರ್ಶಿ ವಿವೇಕಾನಂದ ಹೊದಲೂರೆ. ಒಕ್ಕೂಟದ ನಿರ್ದೇಶಕರಾದ ಶಿವಬಸಪ್ಪ ಚನ್ನಮಲ್ಲೆ, ಸಂಜಿ ಕುಮಾರ್ ಸಜ್ಜನ್,ಪ್ರಾಂತೀಯ ಅಧಿಕಾರಿ ಸೂರ್ಯಕಾಂತ್ ರಾಕಲೆ. ಕಾಲೇಜಿನ ಪ್ರಾಚಾರ್ಯರು ಹಾಗೂ ವಿಧ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಗಂಗಾಧರ ಸಾಲಿಮಠ ಪ್ರಾರ್ಥನೆ ಗೀತೆ ಹಾಡಿದರು. ಸ್ವಾಗತವನ್ನು ಕಾಲೇಜಿನ ಪ್ರಾಚಾರ್ಯರರಾದ ಶಿವಕುಮಾರ್ ಬಿರಾದಾರ ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿ ಸೂರ್ಯಕಾಂತ್ ರಾಕಲೆ. ಬಸವರಾಜ ಖಂಡಾಳೆ ನಿರೂಪಿಸಿದರು.

## ಪ್ರವಾಹ: ಸಹಜ ಸ್ಥಿತಿಗೆ ಮರಳಿದ ಜನಜೀವನ



ಮಲ್ಲಮ್ಮ ನುಡಿ ವಾರ್ತೆ

ವಾಡಿ: ಪ್ರವಾಹಕ್ಕೆ ತುತ್ತಾಗಿ ನಲುಗಿ ಹೋಗಿದ್ದ ಚಿತ್ತಾಪುರ ತಾಲೂಕಿನ ಬಳವಡಗಿ ಗ್ರಾಮ ಶುಕ್ರವಾರ ಮಧ್ಯಾಹ್ನದ ಹೊತ್ತಿಗೆ ನೀರೆಲ್ಲಾ ಬಯಲಾಗಿ ಜನ ಜೀವನ ಸಹಜಸ್ಥೀತಿಗೆ ಮರಳಿದ್ದು ಸಾರ್ವಜನಿಕರು ನಿಟ್ಟುಸಿರು ಬಿಟ್ಟಿದ್ದಾರೆ.

ಬುಧವಾರ ರಾತ್ರಿ ಸುರಿದ ಮಳೆಗೆ ಭೀಮಾ, ಕಾಗಣಾ ನದಿಗಳು ಭೋರ್ಗರೆದು ಕೆರೆ, ಕೊಡಿಗಳು ಉಕ್ಕಿ ಪ್ರವಾಹ ಉಂಟಾಗಿ ನದಿಪಾತ್ರದ ಗ್ರಾಮಗಳಿಗೆ ಭಾರಿ ಪ್ರಮಾಣದ ನೀರು ನುಗ್ಗಿ ಆತಂಕ ಸೃಷ್ಟಿಸಿತ್ತು.

ಮನೆಯ ಎಲ್ಲಾ ಗೃಹ ಬಳಕೆ ವಸ್ತುಗಳು, ದವಸಧಾನ್ಯಗಳು, ನೀರಿಗಾಹುತಿಯಾಗಿ ಗ್ರಾಮಸ್ಥರು ಉಟ್ಟ ಬಟ್ಟೆಯಲ್ಲಿ ಮನೆ ತೊರೆದು ಎತ್ತರದ ಪ್ರದೇಶಕ್ಕೆ ಮಕ್ಕಳು, ವೃದ್ಧರು, ಮಹಿಳೆಯರು ಹೋದರೆ ಕೆಲವರು, ಮನೆಬಿಟ್ಟು ಹೋಗದೆ ಈಡಿ ರಾತ್ರಿ ಮೈ ಕೊರೆಯುವ ಛಳಿಯಲ್ಲಿ ಮನೆಯ ಮಾಳಿಗೆ ಮೇಲೆ ಕುಳಿತು ರಾತ್ರಿಗಳೆದರು.

ಬೆಳಗಾಗುತ್ತಿದ್ದಂತೆ ನಿಧಾನಕ್ಕೆ ನೀರು ಕಡಿಮೆಯಾಗುತ್ತಾ ಬಂದು ಮಧ್ಯಾಹ್ನದ ಹೋತ್ತಿಗೆ ಸಂಪೂರ್ಣ ನೀರು ಖಾಲಿಯಾಗಿ ಜನರು ಮಳೆ ನೀರಿನಿಂದ ನಿರಾಳತೆ ಕಂಡಿತು.

ಗುರುವಾರ ಬೆಳಗ್ಗೆ ಪ್ರವಾಹಕ್ಕೆ ತುತ್ತಾಗಿ ನಲುಗಿ ಹೋಗಿದ್ದ ಬಳವಡಗಿ ಗ್ರಾಮಕ್ಕೆ ತಹಶೀಲ್ದಾರ ನಾಗಯ್ಯ ಹಿರೇಮಠ, ಸೇಡಂ ಸಹಾಯಕ ಆಯುಕ್ತ ಪ್ರಭು ರೇಡ್ಡಿ, ತಾಪಂ ಇ.ಓ ಅಕ್ರಮ ಪಾಷಾ, ಉಪ ತಹಶೀಲ್ದಾರ ಮುತ್ತಪ್ಪ ಬಂಡಾರಿ, ಕಂದಾಯ ನಿರೀಕ್ಷಿಕ ಪ್ರಶಾಂತ ರಾಠೋಡ, ವಾಡಿ ಪಿಎಸ್ಐ ತಿರುಮಲೇಶ. ಕೆ, ಪಿಡಿಓ ಸೇರಿದಂತೆ ಹಲವಾರು ಅಧಿಕಾರಿಗಳು ನೇರೆಪೀಡಿತ ಸಂತ್ರಸ್ತರಿಗೆ ಕೋಂಚೂರಿನ ಹನುಮಾನ ದೇವಸ್ಥಾನದ ಆವರಣದಲ್ಲಿ ರಾತ್ರಿ ಊಟ, ವಸತಿ ವ್ಯವಸ್ಥೆ ಕಲ್ಪಿಸಿ ರಾತ್ರಿ ಎಲ್ಲಾ ಪರಿಸ್ಥಿತಿ ಅವಲೋಕಿಸಿದರು.

ಕಂದಾಯ ಅಧಿಕಾರಿಗಳು ಬೆಳಿಗ್ಗೆ ಮನೆ ಮನೆಗೆ ತೆ–ೞರಳಿ ಮಳೆ ನೀರಿನಿಂದ ಹಾನಿಗೋಳಗಾದ ಮನೆಗಳ ಸಂತ್ರಸ್ಥ ಕುಟುಂಬಗಳ ಸಮಿಕ್ಷೇ ಕೈಗೊಳ್ಳಲಾಗಿದೆ ಎಂದು ಕಂದಾಯ ಅಧಿಕಾರಿಗಳು ತಿಳಿಸಿದ್ದಾರೆ.

## ಅಪರೂಪದ ಕಲಾರಾಧಕ ಕರಬಸಯ್ಯ ಸ್ವಾಮಿಗಳು – ಹಾರಕೂಡ ಶ್ರೀ.





(ವರದಿ. ಡಿ. ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 30 ಕಲೆ ಮತ್ತು ಧರ್ಮಸೇವೆಯನ್ನು ಮೌಲ್ಯವಾಗಿ ಸ್ವೀಕರಿಸಿಕೊಂಡು ಇಡೀ ಬದುಕಿನುದ್ದಕ್ಕೂ ವೃತದ ರೂಪದಲ್ಲಿ ಅನುಸರಿಸಿಕೊಂಡು ಬಂದಿರುವ ಅಪರೂಪದ ಕಲಾರಾಧಕ ಹಾರಕೂಡ ಪೂಜ್ಯ ಕರಬಸಯ್ಯ ಸ್ವಾಮಿಗಳು ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ರೇವಣಸಿದ್ದ ಹೂಗಾರ ರವರ ಅಧ್ಯಕ್ಷತೆಯಲ್ಲಿ ಸ್ಥಾಪಿಸಲಾದ ಪೂಜ್ಯಶ್ರೀ ಹಾರಕೂಡ ಕರಬಸಯ್ಯ ಸ್ವಾಮಿ ಸಾಂಸ್ಕೃತಿಕ ಕಲಾ ಸಂಸ್ಥೆ (ರಿ) ಕಲಬುರ್ಗಿ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಕಲೆ ಮತ್ತು ಗುರು ಸೇವೆ ಪೂಜ್ಯ ಕರಬಸಯ್ಯನವರ ಎರಡು ಕಣ್ಣುಗಳಾಗಿದ್ದವು.

ಸಂಗೀತ ಮತ್ತು ಹಾರಕೂಡ ಶ್ರೀ ಮಠದ ಉನ್ನತಿಗಾಗಿ ತಮ್ಮ ಇಡಿ ಬದುಕನ್ನೇ ಭಕ್ತಿಯಿಂದ ಸಮರ್ಪಿಸಿದ ಶತಾಯುಷಿ ಕರಬಸಯ್ಯನವರು.

ಕರ, ಉರ, ಶಿರವನ್ನು ಒಂದಾಗಿಸಿಕೊಂಡು ದಣಿವರಿಯದೆ ದುಡಿದ ಮಾಹಾನುಭಾವರು, ತಮ್ಮ ಕಲಾ ಪ್ರತಿಭೆಯಿಂದ ಅಪಾರ ಶಿಷ್ಯ ಬಳಗ ಹೊಂದಿರುವ ಕರಬಸಯ್ಯ ಸ್ವಾಮಿಗಳು ತಮ್ಮ ಜೀವನದಲ್ಲಿ ಮೂವರು ಯತಿಗಳ ಸೇವೆ ಮಾಡಿ, ಶಿವಾನುಗ್ರಹಕ್ಕೆ ಪಾತ್ರರಾಗಿ ಸಾರ್ಥಕ ಬದುಕಿನ ಸಿರಿಕಂಡವರು.

ಕಲೆ ಮತ್ತು ಸೇವೆ ಒಂದಾಗಿಸಿಕೊಂಡು ಬಾಳಿದರೆ ದಿವ್ಯಾನುಭವದ ರಸಧಾರೆ ಸವಿಯಲು ಸಾಧ್ಯ ಎನ್ನುವುದಕ್ಕೆ ಪೂಜ್ಯ ಕರಬಸಯ್ಯ ಸ್ವಾಮಿಗಳವರು ದೊಡ್ಡ ಉದಾಹರಣೆಯಾಗಿ ನಿಲ್ಲುತ್ತಾರೆ.

ಇಂತಹವರ ಹೆಸರಲ್ಲಿ ಕಲಾ ಮತ್ತು ಸಾಂಸ್ಕೃತಿಕ ಸಂಸ್ಥೆ ಕಟ್ಟಿರುವ ರೇವಣಸಿದ್ದ ಹೂಗಾರ ರವರಿಗೆ ಹಾರಕೂಡ ಧೀಶ ಹೇರಳವಾದ ಶಕ್ತಿ ಸಾಮರ್ಥ್ಯ ಕರುಣಿಸಲಿ ಹಾಗೂ ಸರ್ವರಿಗೂ ಶುಭ ಪ್ರಾಪ್ತವಾಗಲಿ ಎಂದು ಹಾರೈಸಿದರು.

ಎಚ್.ಕೆ.ಇ. ಸೊಸೈಟಿಯ ನಿರ್ದೇಶಕರಾದ ಅರುಣ್ ಕುಮಾರ ಎಂ ಪಾಟೀಲ ಮಾತನಾಡಿದರು.

ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ. ಸಿದ್ರಾಮಪ್ಪ ಗುದಗೆ. ಶಂಕರರಾವ ಮಾಣಿಕೆ, ಧರ್ಮರಾಜ ಹೇರೂರ, ಆನಂದರಾವ ಝುಳಕೆ, ಪಂಡಿತರಾವ ದೇಗಾಂವ, ವಿಜಯಕುಮಾರ ಸಂಗೋಳಗಿ, ನಾಗೇಂದ್ರ ಪಾಟೀಲ, ಪ್ರಭು ಪಸರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಈ ವೇಳೆ

ಕಲ್ಯಾಣ ಕರ್ನಾಟಕದ ಹೆಸರಾಂತ ಸಂಗೀತಕಲಾವಿದರಾದ ಮಲ್ಲಿಕಾರ್ಜುನ ಮಣ್ಣೂರ, ಜಗದೀಶ ನಗರನೂರ, ಸಂಗಮೇಶ ನೀಲಾ, ಸಿದ್ದಣ್ಣ ಹೂಗಾರ, ಅಂಬರೀಶ ಹೂಗಾರ, ಕಲ್ಮೇಶ್ ಹೂಗಾರ, ಜಗದೀಶ ಹೂಗಾರ, ರಾಜಶ್ರೀ ದಿಲೀಪಕುಮಾರ ಸ್ವಾಮಿ, ಮನೋಹರ ವಿಶ್ವಕಮರ ಸಂಗೀತ ಸೇವೆ ಸಲ್ಲಿಸಿದರು. ಸಂಸ್ಥೆಯ ಅಧ್ಯಕ್ಷರಾದ ರೇವಣಸಿದ್ದ ಹೂಗಾರ ಸ್ವಾಗತಿಸಿದರು.

ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಉದಯಕುಮಾರ ಶಾಸ್ತ್ರಿಗಳು ಭೀಮಳ್ಳಿ ನಿರೂಪಿಸಿದರು.

### ಬಿಜೆಪಿ ಓಬಿಸಿ ಮೋರ್ಚಾದ ವತಿಯಿಂದ ಜರುಗಿದ ಗಣೇಶನ ವಿಶೇಷ ಪೂಜೆ

## ಸರಿ ದಾರಿಯಲ್ಲಿ ನಡೆಯುವುದೇ ಧರ್ಮ:ಸೋಮನಾಥ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ



ಬೀದರ: ಭಾರತೀಯ ಜನತಾ ಪಕ್ಷದ ಕಛೇರಿಯಲ್ಲಿ ಬಿಜೆಪಿ ಓಬಿಸಿ ಮೋರ್ಚಾದ ವತಿಯಿಂದ ಏರ್ಪಡಿಸಿದ ಪ್ರತಿಷ್ಠಾಪಿಸಿದ ಗಣಪತಿ ಮೂರ್ತಿಯ ಬೆಳ್ಳಂಬೆಳಗ್ಗೆ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲರವರು ಹಾಗೂ ಕಾರ್ಯಕರ್ತರು ಗಣೇಶನಿಗೆ ಮೋದಕ, ಕಡಬು ತೆ–ೞರಿ ಪೂಜೆ ನೈವೇದ್ಯ ನೆರವೇರಿಸಿ ನಂತರ ಪ್ರಾರ್ಥನೆ ಸಲ್ಲಿಸಿದರು. ಹಾಗೂ ಸೋಮನಾಥ ಪಾಟೀಲ ಮುಂದುವರೆದು ಮಾತನಾಡಿ, ಧರ್ಮಗಳು ಮಾನವನಿಗೆ ಶಾಂತಿ ನೆಮ್ಮದಿಯಿಂದ ಬದುಕಲು ಕಲಿಸಿಕೊಡುವುದರ ಜೊತೆಗೆ ಸಂಸ್ಕೃತಿ, ಸಂಪ್ರದಾಯದಿಂದ ಮುಕ್ತಿ ಮಾರ್ಗ ತೋರಿಸಿಕೊಡುತ್ತವೆ.

ಹಣ ಕೊಟ್ಟು ನೆಮ್ಮದಿಯನ್ನು ಪಡೆಯಲು ಸಾಧ್ಯವಿಲ್ಲ. ಅಧ್ಯಾತ್ಮದಲ್ಲಿ ತೊಡಗಿಸಿಕೊಳ್ಳುವುದರಿಂದ ನೆಮ್ಮದಿ ಕಾಣಬಹುದಾಗಿದ್ದು, ಪ್ರತಿಯೊಬ್ಬರು ಧಾರ್ಮಿಕ ಕಾರ್ಯಗಳತ್ತ ಹೆಚ್ಚು ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು ನುಡಿದರು. ಈ ನಿಟ್ಟಿನಲ್ಲಿ ಧರ್ಮದಿಂದ ನಮ್ಮ ಬದುಕನ್ನು ನಾವು ಹಸನುಗೊಳಿಸಿಕೊಳ್ಳಬೇಕು ಎಂದರು. ದೇವರನ್ನು ನಂಬಿದರೆ ಎಂದೂ ಕೆಡಕಾಗುವುದಿಲ್ಲ.

ಸರಿ ದಾರಿಯಲ್ಲಿ ನಡೆಯುವುದೇ ಧರ್ಮ. ದೇವರ ಮೇಲೆ ನಂಬಿಕೆ ಇದ್ದರೆ ಸತ್ಯದ ಹಾದಿಯಲ್ಲೇ ನಡೆಯಲು ಸಾಧ್ಯವಾಗುತ್ತದೆ ಎಂದರು. ಈ ಸಂದರ್ಭದಲ್ಲಿ ರಾಜಶೇಖರ ನಾಗಮೂರ್ತಿ, ರಾಜಕುಮಾರ ಪಾಟೀಲ್, ಓಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ಅರವಿಂದ್ ಮುತ್ಯಾ, ಓಬಿಸಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಪಂಚಾಳ, ನೀಲೇಶ್ ರಕ್ಷಾಳ್, ಜಿಲ್ಲಾ ಉಪಾಧ್ಯಕ್ಷರು ದಯಾನಂದ ಮೇತ್ರಿ, ರೇವಣಪ್ಪ ಹೂಗಾರ್, ಸಂಗಮೇಶ್ ರೆಡ್ಡಿ, ಶ್ರೀನಿವಾಸ್ ಹೂಗಾರ್, ಶಿವಕುಮಾರ್ ಸಜ್ಜನ್, ಸಂತೋಷ್ ಜಗದಾಳೆ, ಶರಣಪ್ಪ ಚಂದನಹಳ್ಳಿ , ಸೂರಜ್ ಸಿಂಗ್ ಠಾಕೂರ್, ಸಚಿನ್ ಮಡಿವಾಳ, ರವಿ ಪಾಂಚಳ , ರವಿ ಜೈಭೀಮ್ ಬಿಂದು, ಹಾಗೂ ಜಿಲ್ಲಾ ಎಲ್ಲಾ ಪದಾಧಿಕಾರಿಗಳು ಕಾರ್ಯಕರ್ತರು ಇದ್ದರು,

### ಹೋಬಳಿ ಮಟ್ಟದ ಶಾಲಾ ಕ್ರೀಡಾಕೂಟಕ್ಕೆ ಚಾಲನೆ

## ವಿದ್ಯಾರ್ಥಿಗಳು ಕ್ರೀಡಾಸಕ್ತಿ ಬೆಳೆಸಿಕೊಳ್ಳಬೇಕು:– ರಾಜಪ್ಪ ಜಮಾದರ್





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಪಟ್ಟಣದ ಮಿಲಾಗ್ರಿಸ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ ಇಟಗಾ ರೋಡ್ ಇವರ ಸಯುಂಕ್ತಾಶ್ರಯದಲ್ಲಿ 2025–26ನೇ ಸಾಲಿನ ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಗಣ್ಯರು ಚಾಲನೆ ನೀಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ರಾಜಪ್ಪ ಜಮಾದರ್ ಮಾತನಾಡಿ. ಯಾವುದೇ ಒಬ್ಬ ವಿದ್ಯಾರ್ಥಿಯು ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಾದರೆ ಪ್ರಾಥಮಿಕ ಶಾಲಾ ಮಟ್ಟದ ಕ್ರೀಡೆ ಬಹು ಮುಖ್ಯ. ಮುಖ್ಯವಾಗಿ ಕ್ರೀಡಾಸಕ್ತಿ ಬೆಳೆಸಿಕೊಳ್ಳಬೇಕು, ಕ್ರೀಡೆಯಲ್ಲಿ ರಾಜ್ಯ ಮಟ್ಟದಲ್ಲಿ ಸಾಧನೆ ಮಾಡುವ ಮೂಲಕ ತಮ್ಮ ಶಾಲೆಯ ಮತ್ತು ತಾಲೂಕಿನ ಕೀರ್ತಿ ಹೆಚ್ಚಿಸಬೇಕು ಎಂದು ತಿಳಿಸಿದರು. ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ಮಾತನಾಡಿ, ಮಕ್ಕಳು ಕ್ರೀಡಾಕೂಟಗಳಲ್ಲಿ ತೊಡಗಿಸಿಕೊಳ್ಳುವುದರಿಂದ ದೇಹವನ್ನು ಸದೃಢವಾಗಿ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು. ಮಿಲಾಗ್ರಿಸ್ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿ ಸಿಸ್ಟರ್ ಅನಿಷಾ ಪಿಂಟು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕ್ರೀಡೆ–ಯು ದೈಹಿಕ, ಮಾನಸಿಕ ಆರೋಗ್ಯ ವೃದ್ಧಿಗೆ ಪೂರಕವಾಗಿದೆ. ನಮ್ಮ ದೇಶ ಕ್ರೀಡೆಯಲ್ಲಿ ಅತ್ಯುನ್ನತ ಸಾಧನೆಯನ್ನು ಮಾಡಬೇಕು ಎಂದರೆ ನಾವು ಪ್ರಾಥಮಿಕ ಶಾಲಾ ಹಂತದಿಂದಲೇ ಮಕ್ಕಳನ್ನು ಉತ್ತೇಜಿಸಬೇಕು. ಆಗ ಮಾತ್ರ ವಿಶ್ವ ಮಟ್ಟದಲ್ಲಿ ಅನೇಕ ಪದಕಗಳನ್ನು ಗೆಲ್ಲಲು ಸಾಧ್ಯವಾಗಲಿದೆ ಎಂದರು. ಕ್ರೀಡಾಕೂಟಗಳು ಅತ್ಯುತ್ತಮ ವೇದಿಕೆಯಾಗಬಲ್ಲವು. ಇದನ್ನು ಮಕ್ಕಳು ಸೂಕ್ತವಾಗಿ ಬಳಸಿಕೊಳ್ಳಬೇಕೆಂದು ಅವರು ಸಲಹೆ ನೀಡಿದರು. ವಲಯ ಮುಖ್ಯಸ್ಥರ ಸಂತೋಷ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ದೈಹಿಕ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಕಾಶಪ್ಪ ಅಮಗೊಂಡ್, ಪ್ರೌಢ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಅಶೋಕಕುಮಾರ್ ಮಹಿಂದ್ರಕ್ಕರ್, ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ,ಎಸ್.ಸಿ. ಎಸ್.ಟಿ. ನೌಕರರ ಸಂಘದ ತಾಲೂಕಾಧ್ಯಕ್ಷ ಪಂಡಿತ ಕಲ್ಯಾಣಿ, ಬಿ.ಆರ್. ಪಿ ರಾಮಲು, ಸಿ. ಆರ್. ಪಿ. ರಾಮಚಂದ್ರ, ಸಂತೋಷ ತಾಂಡುರ್, ಕಸ್ತೂರಿಬಾಯಿ, ಮಂಜುಳಾ, ಇಮಾನವೇಲ್, ಗಣಪತಿ, ಸತ್ಯನಾರಾಯಣ ಮಾಳಗೆ, ಸುಶೀಲಾ, ಅಂಬಿಕಾ ಮಾಳಗೆ, ಮಾಣಿಕ ಪವಾರ ಸೇರಿದಂತೆ ವಿವಿಧ ಶಾಲೆಯ ದೈಹಿಕ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಕಾವೇರಿ ಹೊಸಳ್ಳಿ ನಿರೂಪಿಸಿ ವಂದಿಸಿದರು.

## ಎಸಿಪಿ ಸೇರಿ ಐವರು ಪೊಲೀಸರು ಲೋಕಾಯುಕ್ತ ಬಲೆಗೆ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಆ.30–ಪ್ರಕರಣವೊಂದರ ತನಿಖೆ ಮುಗಿಸುವ ಕಾರಣಕ್ಕಾಗಿ 40 ಲಕ್ಷ ರೂ. ಲಂಚಕ್ಕೆ ಬೇಡಿಕೆಯಿಟ್ಟು ಹಣ ಪಡೆಯುತ್ತಿರುವಾಗಲೇ ನಗರ ಪೊಲೀಸ್ ಆಯುಕ್ತಾಲಯದ ದಕ್ಷಿಣ ಉಪ ವಿಭಾಗದ ಎಸಿಪಿ ಸೇರಿದಂತೆ ಐವರು ರೆಡ್ ಹ್ಯಾಂಡ್ ಆಗಿ ಸಿಕ್ಕಿ ಬಿದ್ದಿರುವ ಘಟನೆ ಶುಕ್ರವಾರ ನಡೆದಿದೆ.

ಇಲ್ಲಿನ ನಗರ ಪೊಲೀಸ್ ಆಯುಕ್ತಾಲಯದ ದಕ್ಷಿಣ ಉಪ ವಿಭಾಗದ ಎಸಿಪಿ ಆಗಿರುವ ಶರಣಬಸಪ್ಪ ಸುಬೇದಾರ್, ರೈಟರ್ ಚಂದ್ರಕಾಂತ್, ಕಾನ್ಸ್‌ಸ್ಟೇಬಲ್ ರಾಘವೇಂದ್ರ ಸೇರಿ ಒಟ್ಟು ಐವರು ಲೋಕಾಯುಕ್ತ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದಾರೆ ಎಂದು ತಿಳಿದು ಬಂದಿದೆ.

ಐವರು ಸಹ ಪ್ರಕರಣವೊಂದರ ತನಿಖೆ ಮುಗಿಸುವ ಸಂಬಂಧ ರೇವಣಸಿದ್ದಪ್ಪ ಎಂಬುವರ ಬಳಿ 40 ಲಕ್ಷ ರೂ. ಹಣಕ್ಕೆ ಬೇಡಿಕೆ ಇಟ್ಟು ಹಣ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಪೊಲೀಸರಿಗೆ ಸಿಕ್ಕಿ ಬಿದ್ದಿದ್ದಾರೆ ಎಂದು ತಿಳಿದು ಬಂದಿದೆ.

ಎಸ್ಪಿ ಬಿ.ಕೆ.ಉಮೇಶ್ ನೇತೃತ್ವದಲ್ಲಿ ಐವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿದುಬಂದಿದೆ.

# ಬೋಂತಿ ತಾಂಡಾ ಕೆರೆ ಪುನಶ್ಚೇತನಕ್ಕೆ 1.50 ಕೋಟಿ ಅನುಮೋದನೆ

## ಎಲ್ಲ ಕೆರೆಗಳ ದುರಸ್ತಿಗೆ ಅನುದಾನ ನೀಡಲು ಶಾಸಕ ಪ್ರಭು ಚವ್ಹಾಣ ಒತ್ತಾಯ

ಔರಾದ(ಬಿ):ಅ.30:ವಿಧಾನಸಭಾ ಕ್ಷೇತ್ರದಲ್ಲಿ ಸುರಿದ ಧಾರಾಕಾರ ಮಳೆಗೆ ಹಲವು ಕೆರೆ-ಕಟ್ಟೆಗಳು ಹಾಳಾಗಿದ್ದು, ಬೋಂತಿ ತಾಂಡಾ ವ್ಯಾಪ್ತಿಯಲ್ಲಿ ಒಡೆದ ಇಂಗು ಕೆರೆಯ ಪುನಶ್ಚೇತನಕ್ಕಾಗಿ ಸರ್ಕಾರ 1.50 ಕೋಟಿ ಮೊತ್ತಕ್ಕೆ ಅನುಮೋದನೆ ನೀಡಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಸಣ್ಣನೀರಾವರಿ ಇಲಾಖೆ ಸಚಿವರಾದ ಎನ್.ಎಸ್ ಬೋಸರಾಜು ಹಾಗೂ ಸಂಬಂಧಿಸಿದ ಅಧಿಕಾರಿಗಳನ್ನು ಖುದ್ದಾಗಿ ಭೇಟಿಯಾಗಿ ಕ್ಷೇತ್ರದಲ್ಲಿ ಮಳೆಯಿಂದ ಉಂಟಾಗಿರುವ ಹಾನಿಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೆ. ನನ್ನ ಮನವಿಗೆ ಸ್ಪಂದಿಸಿ ಸಂಪೂರ್ಣವಾಗಿ ಒಡೆದಿರುವ ಕೆರೆಯ ಪುನರ್ ನಿರ್ಮಾಣಕ್ಕಾಗಿ ಬೋಂತಿ ತಾಂಡಾ ಕೆರೆಗೆ ಅನುದಾನ ನೀಡಿದ ಮುಖ್ಯಮಂತ್ರಿಗಳು ಮತ್ತು ಸಣ್ಣ ನೀರಾವರಿ ಇಲಾಖೆ ಸಚಿವರಿಗೆ ಕ್ಷೇತ್ರದ ಮಹಾಜನತೆಯ ಪರವಾಗಿ ಧನ್ಯವಾದಸಲ್ಲಿಸುತ್ತೇನೆಎಂದಿದ್ದಾರೆ.ಆ.17 ಮತ್ತು 18 ರಂದು ಸುರಿದ ಧಾರಾ-ಕಾರ ಮಳೆಗೆ ಬೋಂತಿ ತಾಂಡಾ, ಬಾವಲಗಾಂವ, ಅಕನಾಪೂರ, ನಂದಿ ಬಿಜಲಗಾಂವ, ಮುತಖೇಡ, ಕಾಳಾಪಟ್ಟಿ ತಾಂಡಾ, ಚಿಕ್ಲಿ(ಯು), ನಂದಿನಾಗೂರ, ಭಂಡಾರಕುಮಟಾ, ಕರಂಜಿ(ಬಿ), ದಾಬಕಾ, ಖೇರ್ಡಾ, ಚೊಂಡಿಮುಖೇಡ, ಖೇಮಾ ನಾಯಕ್ ತಾಂಡಾ, ಹೊಳಸಮುದ್ರ ಸೇರಿದಂತೆ ಎಲ್ಲ ಕೆರೆ, ಸೇತುವೆ, ಬಂದಾರಾಗಳಿಗೆ ಹಾನಿಯಾಗಿದೆ. ಹಾಗಾಗಿ ಕ್ಷೇತ್ರದಲ್ಲಿ ಈ ಬಾರಿ ಸಾಕಷ್ಟು ಮಳೆಯಾದರೂಕೂಡ ಮುಂದಿನ ದಿನಗಳಲ್ಲಿ ನೀರಿನ ಅಭಾವ ಎದುರಾಗುವ ಭೀತಿ ಎದುರಾಗಿದೆ.ಸರ್ಕಾರಒಂದು ಕೆರೆಯ ಪುನಶ್ಚೇತನಕ್ಕೆ ಅನುದಾನ ನೀಡಿದ್ದು, ಉಳಿದ ಎಲ್ಲ ಕೆರೆ, ಸೇತುವೆ, ಬಂದಾರಗಳ ದುರಸ್ತಿ ಮತ್ತು ಪುನಶ್ಚೇತನ ಕೆಲಸ ಆರಂಭಿಸುವುದುಅತ್ಯಂತಅವಶ್ಯಕವಾಗಿದೆ. ಇಲಾಖೆಯಿಂದಲೂ ಕೂಡ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಇನ್ನೂ ಕನಿಷ್ಟ 20 ಕೋಟಿಗೂ ಹೆಚ್ಚಿನ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕೆಂದು ಶಾಸಕರು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.ಕೆರೆಗಳ ಮೇಲೆ ನಿಗಾ ವಹಿಸಿ: ಮಳೆಯಿಂದಾಗಿ ಈಗಾಗಲೇ ಹಲವು ಕೆರೆಗಳು ಹಾನಿಯಾಗಿ ಅಪಾರ ಪ್ರಮಾಣದ ನಷ್ಟವಾಗಿದೆ. ಅಧಿಕಾರಿಗಳು ಇರುವ ಕೆರೆಗಳನ್ನು ಸಂರಕ್ಷಿಸಲು ಆದ್ಯತೆ ಕೊಡಬೇಕು. ಇಲಾಖೆಯಿಂದ ಎಲ್ಲ ಕೆರೆಗಳ ಮೇಲೆ ತೀವ್ರನಿಗಾ ವಹಿಸಬೇಕೆಂದು ಶಾಸಕರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

# ಮಹಿಳೆಯರ ರಕ್ಷಣೆಗಾಗಿ ಅಕ್ಕಾ ಪಡೆ:ಸಿಪಿಐ ಬಿ.ಅಂಬರೀಶ



ಮಲ್ಲಮ್ಮನುಡಿ ವಾರ್ತೆ ಭಾಲ್ಕಿ:ಅ.30: ಮಕ್ಕಳ,ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯ ತಡೆಗಟ್ಟಿ ಅವರ ರಕ್ಷಣೆಗಾಗಿ ಅಕ್ಕಾ ಪಡೆ ರಚಿಸಲಾಗಿದೆ ಎಂದು ನಗರ ಪೋಲಿಸ್ ಠಾಣೆಯ ಸಿಪಿಐ ಬಿ.ಅಂಬರೀಶ ಹೇಳಿದರು.ಪಟ್ಟಣದ ನಗರಪೋಲಿಸ್ ಠಾಣೆಯ ಆವರಣದಲ್ಲಿ ಡಿ.ವಾಯ್.ಎಸ್.ಪಿ.ಮಾರ್ಗದರ್ಶನದಲ್ಲಿ ರಚಿಸಿದ 'ಅಕ್ಕಾ ಪಡೆ'ಗೆ ಚಾಲನೆ ನೀಡಿ ಮಾತನಾಡಿದರು.ಶಾಲಾ-ಕಾಲೇಜುಗಳ ವಿದ್ಯಾರ್ಥಿನಿಯರು ಸೇರಿದಂತೆ ಯುವತಿಯರ,ಮಹಿಳ 'ಯರಸುರಕ್ಷತೆ ದೃಷ್ಟಿಯಿಂದ ಅಕ್ಕಾ ಪಡೆಕಾರ್ಯನಿರ್ವಹಿಸುತ್ತಿದೆ.ಪಟ್ಟಣದಮುಖ್ಯರಸ್ತೆಯಲ್ಲಿ ,ಉದ್ಯಾನವನ,ಗುಡಿಗುಂಡಾರಗಳ ಆವರಣದಲ್ಲಿ ,ಜನ ನಿಬಿಡ ಪ್ರದೇಶಗಳಲ್ಲಿ ತಿರುಗಾಡುತ್ತಿರುವ ಮಹಿಳೆಯರಿಗೆ ಪುಂಡ ಪೋಕರಿ ಹುಡುಗರು ಚುಡಾಯಿಸಿ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ.ಅಂತಹವರನ್ನು ಪತ್ತೆ ಹಚ್ಚಿ ತಕ್ಕ ಶಿಕ್ಷೆ ನೀಡಲಾಗುತ್ತಿದೆ. ಮಹಿಳೆ ಮತ್ತು ಮಕ್ಕಳ ದೌರ್ಜನ್ಯ ಕಾಯ್ದೆಗಳಿಗೆ ಸಂಬಂಧಿಸಿದಂತೆ 'ಅಕ್ಕಾ ಪಡೆ' ವಿವಿಧ ಪ್ರದೇಶಗಳಲ್ಲಿರುವ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡುತ್ತದೆ. ಯಾರಾದರೂ ಯಾವುದೇ ಸಮಸ್ಯೆಯಲ್ಲಿ ಸಿಲುಕಿದಾಗ 112 ಕಾಲ್ ಮಾಡಬೇಕು .ಅಕ್ಕಾಪಡೆಯವರು ಎಲ್ಲ ಸ್ಥಳಗಳಲ್ಲಿ ಅತ್ಯಂತ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಯಾರು ಆತಂಕ ಪಡುವ ಅಗತ್ಯವಿಲ್ಲ. ಅಕ್ಕಾ ಪಡೆಗೆ ಮಾಹಿತಿ ನೀಡಲು ಸಾರ್ವಜನಿಕರ ಸಹಕಾರ ಅಗತ್ಯ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಅಕ್ಕಾ ಪಡೆ ಸಿಬ್ಬಂದಿ ಉಪಸ್ಥಿತರಿದ್ದರು.

# ಬೀದರ್ ಜಿಲ್ಲೆಗೆ ಭೇಟಿ ನೀಡಿ ವಿಶೇಷ ಪ್ಯಾಕೇಜ್ ಘೋಷಿಸಿ:ಸಿಎಂಗೆ ಮನವಿ

ಬೀದರ.ಆ.30:ಅತಿವೃಷ್ಟಿಯಿಂದಾಗಿ ತೀವ್ರಹಾನಿಗೊಳಗಾದ ಬೀದರ್ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಜಂಟಿ ಸಂಯೋಜಕ ಜಾನಸನ್ ಘೋಡೆ ಮನವಿ ಮಾಡಿದ್ದಾರೆ.

ಈ ಕುರಿತು ಅವರು ಬೆಂಗಳೂರಿನಲ್ಲಿ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದ್ದಾರೆ. ಜಿಲ್ಲೆಯಲ್ಲಿ



ಔರಾದ್ ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ಅತಿ ಹೆಚ್ಚು ನಷ್ಟವಾಗಿದೆ. ರೈತರ ಬೆಳೆ, ರಸ್ತೆ, ಸೇತುವೆಗಳು ಸಂಪೂರ್ಣ ಹಾಳಾಗಿವೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ರೈತರು, ಕೃಷಿ ಕೂಲಿ ಕಾರ್ಮಿಕರು ಹಾಗೂ ಬಡವರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದ್ದಾರೆ.

ಖುದ್ದು ಬೀದರ್ ಜಿಲ್ಲೆಗೆ ಭೇಟಿ ನೀಡಿ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಈ ಮೂಲಕ ಜಿಲ್ಲೆಯ ಜನರಿಗೆ ನೆರವಾಗಬೇಕು ಎಂದು ಕೋರಿದ್ದಾರೆ.

# ಗಣೇಶ ವಿಸರ್ಜನೆ: ವಾಹನ ಸವಾರರು ಪರ್ಯಾಯ ರಸ್ತೆಗಳ ಮೂಲಕ ಸಂಚರಿಸಿ

ಬೀದರ, ಅ 30: ಬೀದರ ನಗರದಲ್ಲಿ ಆಗಸ್ಟ್.31 ರಂದು ಗಣೇಶ ಮೂರ್ತಿಗಳ ವಿಸರ್ಜನೆ ಮೆರವಣಿಗೆಗಳು ಮಧ್ಯಾಹ್ನ 2 ಗಂಟೆಯಿಂದ ಪ್ರಾರಂಭವಾಗುತ್ತದೆ. ಗಣೇಶ ಮೂರ್ತಿಗಳ ವಿಸರ್ಜನೆ ಕಾಲಕ್ಕೆ ಸಂಚಾರ ಸುವ್ಯವಸ್ಥೆಯನ್ನು ಕಾಪಾಡಲು ಬೀದರ ಜಿಲ್ಲೆಯಲ್ಲಿ ಆಗಸ್ಟ್.31 ರಂದು ಮಧ್ಯಾಹ್ನ 2 ಗಂಟೆಯಿಂದ ಸೆಪ್ಟೆಂಬರ್.1 ರ ಬೆಳಿಗ್ಗೆ 4 ಗಂಟೆಯವರೆಗೆ ನಗರದ ಈ ರಸ್ತೆಗಳಲ್ಲಿ ಸಂಚಾರ ನಿರ್ಬಂಧಿಸಲಾಗಿದೆ. ಸಂಚಾರಿ ಮಾರ್ಗಗಳನ್ನು ಬದಲಾಯಿಸಿ ಪರ್ಯಾಯ ರಸ್ತೆಗಳ ವ್ಯವಸ್ಥೆಯನ್ನು ಮಾಡಲಾಗಿದೆ.

ಪರ್ಯಾಯ ರಸ್ತೆಗಳ ವಿವರ: ಹೈದರಾಬಾದನಿಂದ ಬೀದರ ಬಸ್ ನಿಲ್ದಾಣಕ್ಕೆ ಬರುವ ಮತ್ತು ಹೋಗುವ ವಾಹನಗಳು--ಗುಂಪಾ ರಿಂಗ್ ರೋಡ್, ಚಿದ್ರಿ ರಿಂಗ ರೋಡ್, ಓಲ್ಡ್ ಆರ್.ಟಿ.ಓ.ಕಛೇರಿ ಮೂಲಕ ಬೀದರ್ ಬಸ್ ಸ್ಟ್ಯಾಂಡಿಗೆ ಬರುವುದು ಮತ್ತು ಹೋಗುವುದು.

ಬೀದರ ನಗರದಲ್ಲಿ ಸಂಚಾರ ಮಾಡುವ ಸಿಟಿ ಬಸ್‌ಗಳು ಮತ್ತು ಸಾರ್ವಜನಿಕ ವಾಹನಗಳು--ಹೊಸ ಬಸ್ ನಿಲ್ದಾಣದಿಂದ ಖಂಡ್ರೆ ಪೆಟ್ರೋಲ್ ಪಂಪ್, ಕನ್ನಡಾಂಬೆ ವೃತ್ತದಿಂದ ಸಿಟಿ ಬಸ್ ಸ್ಟ್ಯಾಂಡಿಗೆ ಬರುವಂತೆ ಮಾಡುವುದು.

ಭಾಲ್ಕಿಯಿಂದ ಹೈದರಾಬಾದಗೆ ಹೋಗುವ ಬಸ್‌ಗಳು/ವಾಹನಗಳು -- ಓಲ್ಡ್ ಆರ್.ಟಿ.ಓ. ಕಛೇರಿ, ಚಿದ್ರಿ ರಿಂಗ್ ರೋಡ್, ಗುಂಪಾ ರಿಂಗ್ ರೋಡ್ ಮೂಲಕವಾಗಿ ಬಸ್ ಸ್ಟ್ಯಾಂಡಿಗೆ ಬರುವಂತೆ ಮತ್ತು ಹೋಗುವಂತೆ ಸೂಚಿಸಲಾಗಿದೆ.

ಈ ಆದೇಶದಂತೆ ಜಿಲ್ಲಾ ಸಂಚಾರಿ ಪೊಲೀಸರು ವಾಹನಗಳನ್ನು ನಿಗದಿಪಡಿಸಿದ ಮಾರ್ಗದಲ್ಲಿ ಸಂಚರಿಸುವಂತೆ ಕ್ರಮ ವಹಿಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಆದೇಶಿಸಿದ್ದಾರೆ.

# ಜಿಲ್ಲಾ ಬಿ.ಜೆ.ಪಿ.ಯಿಂದ ಧರ್ಮಸ್ಥಳ ಚಲೋ : ಸೋಮನಾಥ ಪಾಟೀಲ

ಬೀದರ. ಆ. 30 : ಧರ್ಮಸ್ಥಳ ಸೇರಿದಂತೆ ಹಿಂದು ದೇವಾಲಯಗಳ ವಿರುದ್ಧ ಷಡ್ಯಂತ್ರ ರಚಿಸಿ ಅಪಪ್ರಚಾರ ಮಾಡುತ್ತಿರುವವರು ಹಾಗೂ ಅವರ ಬೆನ್ನಿಗೆ ನಿಂತಿರುವ ಕಾಂಗ್ರೇಸ ಹಾಗೂ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಹೋರಾಟ ಮಾಡಲು ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರರವರು ಸೆಪ್ಟೆಂಬರ 1 ರಂದು ಧರ್ಮಸ್ಥಳ ಚಲೋ ಕರೆ ನಿಡಿದ್ದು ಆದರನ್ವಯ 31 ರಂದು ಬೀದರ ಜಿಲ್ಲೆಯಿಂದ ಸಾವಿರಾರು ಕಾರ್ಯಕರ್ತರು ಬಸ್ ಮತ್ತು ಕಾರುಗಳ ಮುಖಾಂತರ ಧರ್ಮಸ್ಥಳಕ್ಕೆ ತೆರಳುತ್ತಿದ್ದಾರೆ. ಧಾರ್ಮಿಕ ಸ್ಥಳಗಳ ಅಪಪ್ರಚಾರವೆಷ್ಟೆ ಅಲ್ಲ ನಾಡ ಹಬ್ಬ ದಸರಾ ಉತ್ಸವವನ್ನು ಕರ್ನಾಟಕ ಮಾತೆ ತಾಯಿ



ಭುವನೇಶ್ವರಿಯನ್ನೆ ಒಪ್ಪದ ಹಾಗೂ ಮೂರ್ತಿಪೂಜೆಯನ್ನು ವಿರೋಧಿಸುವ ಸಂಪ್ರದಾಯದ ಸಾಹಿತಿ ಭಾನು ಮುಶ್ತಾಕ ಅವರಿಂದ ಉದ್ಘಾಟನೆ ಮಾಡುಸುತ್ತಿರುವುದನ್ನು ತೀವ್ರವಾಗಿ ಖಂಡಿಸುತ್ತೇವೆ ಕೂಡಲೆ ಉದ್ಘಾಟಕರನ್ನು ಬದಲಾಯಿಸಬೇಕೆಂದು ಒತ್ತಾಯಿಸುತ್ತೇವೆ. ಶಿವನ ತಾಣ ಕಪಾಲಿ ಬೆಟ್ಟವನ್ನೆ ಎಸೊ ಬೆಟ್ಟವನ್ನಾಗಿಸಿದ ಉಪ ಮುಖ್ಯಮಂತ್ರಿ ಡಿ.ಕೆ. ಶಿವುಕುಮಾರ ಅವರು ರಾಹುಲ್ ಗಾಂಧಿ ಹಾಗೂ ಅವರ ಹೈಕಾಮಾಂಡನ್ನು ಮೆಚ್ಚಿಸಲು ಚಾಮುಂಡಿ ಬೆಟ್ಟವನ್ನು ಹಿಂದುಗಳ ಅಸ್ತಿಯೇ ಎಂದು ಪ್ರಶ್ನಿಸಿರುವುದನ್ನು ನೋಡಿದರೆ ಮುಂದೊಂದುದಿನ ಚಾಮುಂಡಿ ಬೆಟ್ಟದಲ್ಲಿ ಮಸೀದಿ ಮಾಡಿದರು ಆಶ್ಚರ್ಯ ಪಡುವಂತಿಲ್ಲ. ಇಂತಹ ಕಾಂಗ್ರೇಸರಿಗೆ ಬರುವ ದಿನಗಳಲ್ಲಿ ಜನರೇ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಬುರಗಿ ಪಿಡಬ್ಲ್ಯೂಡಿ ಸುಪರಿಂಟೆಂಡೆಂಟ್ ಇಂಜಿನಿಯರ್‌ರಾಗಿ ಅಮೀನ್ ಮುಕ್ತಾರ್ ಅಹ್ಮದ್ ಅಧಿಕಾರ ಸ್ವೀಕಾರ

ಕಲಬುರಗಿ,ಆ.30-ಅಮೀನ್ ಮುಕ್ತಾರ್ ಅಹ್ಮದ್ ಅವರು ಶುಕ್ರವಾರ ಸಂಜೆ ಕಲಬುರಗಿ ವೃತ್ತದ ಲೋಕೋಪಯೋಗಿ ಇಲಾಖೆಯ ಸುಪರಿಂಟೆಂಡೆಂಟ್ ಇಂಜಿನಿಯರ್ ಹುದ್ದೆಯ ಅಧಿಕಾರವನ್ನು ಸ್ವೀಕರಿಸಿದರು.

ಇದಕ್ಕೂ ಮುನ್ನ ಅವರು ಬಳ್ಳಾರಿ ವೃತ್ತದ ಲೋಕೋಪಯೋಗಿ ಇಲಾಖೆ ಎಸ್‌ಇ ಆಗಿದ್ದರು. ಈಗ ವರ್ಗಾವಣೆಯಾಗಿ ಕಲಬುರಗಿಗೆ ಬಂದಿದ್ದಾರೆ. ಬೀದರ ಪಿಡಬ್ಲ್ಯೂಡಿ ಇಲಾಖೆಯ ಕಾರ್ಯನಿರ್ವಾಹಕ



ಇಂಜಿನಿಯರ್,ಕಲಬುರಗಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಆಗಿಯೂ ಶ್ರೀಯುತರು ಸೇವೆ ಸಲ್ಲಿಸಿದ್ದಾರೆ.ನಂತರ ಕಲಬುರಗಿ ನೀರಾವರಿ ಯೋಜನಾ ವಲಯದ (ಐಪಿಝೆಡ್)ಸುಪರಿಂಟೆಂಡೆಂಟ್ ಇಂಜಿನಿಯರ್ ಹುದ್ದೆಗೆ ಬಡ್ತಿ ಪಡೆದು ಕಾರ್ಯ ನಿರ್ವಹಿಸಿದ್ದರು. ಕೆಲ ಕಾಲ ಸೇವೆಯ ನಂತರ ಬಳ್ಳಾರಿ ವೃತ್ತದ ಪಿಡಬ್ಲ್ಯೂಡಿ ಇಲಾಖೆಗೆ ವರ್ಗಾವಣೆ ಆಗಿತ್ತು. ಇವರು ಮೂಲತಃ ಬೀದರ ಜಿಲ್ಲೆಯ ಬಸವಕಲ್ಯಾಣದವರು.

# ಬಸವ ಸಂಸ್ಕೃತಿ ಅಭಿಯಾನಕ್ಕೆ ಭರದ ಸಿದ್ಧತೆ



ಬೀದರ. ಆ. 30 : ನಗರದಲ್ಲಿ ಸೆ. 3 ರಂದು ನಡೆಯಲಿರುವ ಬಸವ ಸಂಸ್ಕೃತಿ ಅಭಿಯಾನಕ್ಕೆ ಭರದ ಸಿದ್ಧತೆ ನಡೆದಿದೆ.

ಅಭಿಯಾನ ಅಂಗವಾಗಿ ಅಂದು ಸಂಜೆ 6ಕ್ಕೆ ಜರುಗಲಿರುವ ವೇದಿಕೆ ಸಮಾರಂಭಕ್ಕೆ ಬಿ.ವಿ. ಭೂಮರಡ್ಡಿ ಕಾಲೇಜಿನಲ್ಲಿ ಬೃಹತ್ ವೇದಿಕೆ ನಿರ್ಮಿಸಲಾಗುತ್ತಿದೆ.

ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವಪಟ್ಟದ್ದೇವರು, ಬೀದರ್ ಬಸವ ಸಂಸ್ಕೃತಿ ಅಭಿಯಾನ ಸಮಿತಿಯ ಅಧ್ಯಕ್ಷ ಬಸವರಾಜ ಧನ್ನೂರ ಹಾಗೂ ಇತರರು ಶನಿವಾರ ಬಿ.ವಿ. ಭೂಮರಡ್ಡಿ ಕಾಲೇಜಿಗೆ ಭೇಟಿ ನೀಡಿ ಸಿದ್ಧತಾ ಕಾರ್ಯಗಳನ್ನು ಪರಿಶೀಲಿಸಿದರು. ಇದೇ ವೇಳೆ ಭಕ್ತರ ಪ್ರಸಾದ ವ್ಯವಸ್ಥೆಗೆ ಸಂಬಂಧಿಸಿದಂತೆ ಪ್ರಸಾದ ಸಮಿತಿಯ ಸಭೆಯನ್ನೂ ನಡೆಸಿದರು.

ಬಸವ ಸಂಸ್ಕೃತಿ ಅಭಿಯಾನಕ್ಕೆ ಒಂದು ತಿಂಗಳಿಂದ ತಯಾರಿ ಜರುಗುತ್ತಿದೆ. ಅಭಿಯಾನದಲ್ಲಿ ನಾಡಿನ 50 ಮಠಾಧೀಶರು ಭಾಗವಹಿಸಲಿದ್ದಾರೆ. ಜಿಲ್ಲೆಯ ವಿವಿಧೆಡೆಯಿಂದ 50 ಸಾವಿರ ಜನ ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ಬಸವರಾಜ ಧನ್ನೂರ ತಿಳಿಸಿದರು.

ಅಭಿಯಾನದಲ್ಲಿ ಪಾಲ್ಗೊಳ್ಳುವವರಿಗೆ ಆಸನ, ಭೋಜನ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತಿದೆ. ಭೋಜನದಲ್ಲಿ ಹುಗ್ಗಿ, ಅಂಬಲಿ, ಅನ್ನ, ಸಾಂಬಾರು ಇರಲಿವೆ ಎಂದು ಹೇಳಿದರು. ಸಮಿತಿಯ ಪದಾಧಿಕಾರಿಗಳು ಅಭಿಯಾನ ಯಶಸ್ವಿಗೊಳಿಸಲು ಟೊಂಕ ಕಟ್ಟಿ ನಿಂತಿದ್ದಾರೆ. ಸಿದ್ಧತಾ ಕಾರ್ಯಗಳಲ್ಲಿ ಸ್ವಯಂಪ್ರೇರಣೆಯಿಂದ ತೊಡಗಿಸಿಕೊಂಡಿದ್ದಾರೆ ಎಂದು ತಿಳಿಸಿದರು. ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ರಾಜೇಂದ್ರಕುಮಾರ ಗಂದಗೆ, ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ, ಅಭಿಯಾನದ ಹಣಕಾಸು ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ, ಪ್ರಸಾದ ಸಮಿತಿಯ ಅಧ್ಯಕ್ಷ ಸಿದ್ದಯ್ಯ ಕಾವಡಿಮಠ, ಉಪಾಧ್ಯಕ್ಷ ನಾಗಶೆಟ್ಟೆಪ್ಪ ದಾಡಗೆ, ಕಾರ್ಯದರ್ಶಿ ರಾಜಕುಮಾರ ಹಜ್ಜರಗಿ, ಅಮೃತಪ್ಪ, ಬಸವರಾಜ ಲಾಧಾ, ಶರಣಪ್ಪ ಬಿರಾದಾರ, ಸುರೇಶ ಪುರವಂತ, ಬಂಡೆಪ್ಪ ಗಡ್ಡೆ, ನಾಗಶೆಟ್ಟೆಪ್ಪ ಕಾರಾಮುಂಗಿ, ಯಶವಂತರಾವ್ ಪಾಟೀಲ ಜಹೀರಾಬಾದ್, ಮಲ್ಲಿಕಾರ್ಜುನ ಪಂಚಾಕ್ಷರಿ, ಉಮೇಶ ಪಾಟೀಲ, ಶೇಷಪ್ಪ ಬಿರಾದಾರ ಮತ್ತಿತರರು ಇದ್ದರು.

# ಪ್ರಾಥಮಿಕ ಆರೋಗ್ಯ ಕೇಂದ್ರ ಮೇಲ್ದರ್ಜೆಗೇರಿಸಿ



ಬೀದರ. ಆ. 30 : ಬೀದರ್ ಮಹಾನಗರಪಾಲಿಕೆಯ ವಾರ್ಡ್ ಸಂಖ್ಯೆ 16ರ ವ್ಯಾಪ್ತಿಯ ನೌಬಾದ್‌ನಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೆ ಏರಿಸಬೇಕು ಎಂದು ನಗರಸಭೆ ಸದಸ್ಯ ಸೂರ್ಯಕಾಂತ ಸಾಧುರೆ ಒತ್ತಾಯಿಸಿದ್ದಾರೆ.

ನಗರದಲ್ಲಿ ಶನಿವಾರ ಈ ಕುರಿತು ಪೌರಾಡಳಿತ ಸಚಿವ ರಹೀಂಖಾನ್ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ನೌಬಾದ್, ಅಲಿಯಾಬಾದ್, ಚೌಳಿ, ಚೊಂಡಿ, ಕೊಳಾರ ಸೇರಿದಂತೆ ವಿವಿಧೆಡೆಯ ರೋಗಿಗಳು ಪ್ರಾಥಮಿಕ ಕೇಂದ್ರಕ್ಕೆ ಬರುತ್ತಾರೆ. ಆದರೆ, ಕೇಂದ್ರದಲ್ಲಿ ವಿವಿಧ ತುರ್ತು ಚಿಕಿತ್ಸಾ ಸೌಲಭ್ಯ ಇಲ್ಲದ ಕಾರಣ ತೊಂದರೆ ಅನುಭವಿಸುತ್ತಿದ್ದಾರೆ. ಅನಿವಾರ್ಯವಾಗಿ ಬ್ರಿಮ್ಸ್ ಆಸ್ಪತ್ರೆಗೆ ತೆರಳುತ್ತಿದ್ದಾರೆ ಎಂದು ಗಮನ ಸೆಳೆದರು.

ರೋಗಿಗಳ ಹಿತದೃಷ್ಟಿಯಿಂದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸುವ ಅಗತ್ಯವಿದೆ ಎಂದು ಮನವರಿಕೆ ಮಾಡಿದರು.

# "ಯು-ವಿನ್" ಉಚಿತ ಲಸಿಕೆ ಕಾರ್ಯಕ್ರಮ: ಆರೋಗ್ಯಕರ ಭವಿಷ್ಯದತ್ತ ಒಂದು ಹೆಜ್ಜೆ



ಬೀದರ. ಆ. 30 : ಆರೋಗ್ಯ ಮತ್ತು ಉಜ್ವಲ ಭವಿಷ್ಯದ ಅಡಿಪಾಯ ಹಾಕಲಾಗುವುದು ಎಂದು ಹೇಳಿದ್ದಾರೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಹೊಸ ಪೀಳಿಗೆಯ ಯೋಗಕ್ಷೇಮದ ಕಡೆಗೆ ನಮ್ಮ ಸಾಮಾಜಿಕ ಜವಾಬ್ದಾರಿಯನ್ನು ನಾವು ಪುನರುಚ್ಚರಿಸುತ್ತೇವೆ ಮತ್ತು ಅವರನ್ನು ಆರೋಗ್ಯವಂತ ಮತ್ತು ಸಮರ್ಥ ವ್ಯಕ್ತಿಗಳಾಗಿ ಬೆಳೆಸುವುದಕ್ಕೆ ನಾವು ಬದ್ಧರಾಗಿದ್ದೆವೆ. ವಿಸ್ಡಮ್ ಶಾಲೆಯಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಆರೋಗ್ಯವನ್ನು ಕಾಪಾಡುವ ಮತ್ತು ಗುಣಪಡಿಸುವಂತಹ ರೋಗಗಳಿಂದ ಅವರನ್ನು ರಕ್ಷಿಸುವ ಗುರಿಯನ್ನು ಹೊಂದಿದೆ. ಸರ್ಕಾರವು ಪ್ರಾರಂಭಿಸಿದ "ಯು-ವಿನ್" ಉಚಿತ ಲಸಿಕೆ ಕಾರ್ಯಕ್ರಮದಲ್ಲಿ ವಿಸ್ಡಮ್ ಪ್ರೌಢ ಶಾಲೆಯ ಅರ್ಹ 5 ಮತ್ತು 6 ವರ್ಷದ ಮಕ್ಕಳು ಹಾಗೂ 15 ಮತ್ತು 16 ವರ್ಷದ ವಿದ್ಯಾರ್ಥಿಗಳು ಭಾಗವಹಿಸಿ ಲಸಿಕೆಯನ್ನು ಪಡೆದಿರುತ್ತಾರೆಂದು ನಿಮಗೆ ತಿಳಿಸಲು ಸಂತೋಷಪಡುತ್ತೇವೆ ಒಟ್ಟು 350ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಈ ಲಸಿಕೆಯನ್ನು ಪಡೆದಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸರ್ಕಾರಿ ಸಾರ್ವಜನಿಕ ತಾಯಿ ಮಕ್ಕಳ ಆರೈಕೆ ಆಸ್ಪತ್ರೆ ಬೀದರನ ವೈದ್ಯಕಿಯ ಅಧಿಕಾರಿಯಾದ ಮುಹಮ್ಮದ ಸೊಹೆಲ್ ಹುಸೈನ್ ಇವರ ಸಹಯೋಗದಿಂದ ವಿಸ್ಡಮ್ ಪ್ರೌಢ ಶಾಲೆಯ ಮಕ್ಕಳಿಗೆ ಲಸಿಕೆ ಮತ್ತು ಅದರ ಮಹತ್ವದ ಬಗ್ಗೆ ವಿವರವಾಗಿ ಮಕ್ಕಳಿಗೆ ತಿಳಿಸಲಾಯಿತು ಹಾಗೂ ವೈದ್ಯರು ಮಕ್ಕಳಿಗೆ ನಿವೇಲ್ಲರು ಒಂದು ಒಳ್ಳೆಯ ಶಾಲೆಯಲ್ಲಿ ಅಭ್ಯಾಸ ಮಾಡುತ್ತಿದ್ದಿರಿ. ಈ ಶಾಲೆ ಇಂತಹ ಕಾರ್ಯಕ್ರಮಗಳಲ್ಲಿ ಯಾವಾಗಲು ಮುಂಚುಣಿಯಲ್ಲಿ ಇರುತ್ತದೆ ಎಂದು ವೈದ್ಯರು ಈ ಕಾರ್ಯಕ್ರಮದ ಬಗ್ಗೆ ಪ್ರಶಂಸೆ ಮಾಡಿದ್ದಾರೆ.

ಈ ಕಾರ್ಯಕ್ರಮ ಕಳೆದ ವಾರದಲ್ಲಿ ಜರುಗಿರುತ್ತದೆ.

ಈ ಕಾರ್ಯಕ್ರಮವನ್ನು ವಿಸ್ಡಮ್ ಶಾಲೆಯ ಸಿಬಂದ್ಧಿಗಳಾದ ಶ್ರೀಮತಿ ಆಯಿಶಾ ರಿಜ್ವಾನಾ, ಶ್ರೀಮತಿ ರೂಪಾ ರಾಣಿ, ಮತ್ತು ಶ್ರೀ ಅರುಣ ಪಾಟೀಲ್ ನಡೆಸಿಕೊಟ್ಟರು ಹಾಗು ಆರೋಗ್ಯ ಇಲಾಖೆಯ ಸಂಯೋಜಕರಾದ ಶ್ರೀಮತಿ ರೇಚಲ್ ರಾಣಿ ಮತ್ತು ಅಂಗನವಾಡಿ ಕಾರ್ಯಕರ್ತರು ಉಪಸ್ಥೀತರಿದ್ದರು. ವಿಸ್ಡಮ್ ಪ್ರೌಢ ಶಾಲೆಯ ಮುಖ್ಯಗುರುಗಳಾದ ಶ್ರೀ ಸಲೀಂ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ನಾಳೆ ನಗರಸಭೆಗೆ ಮುತ್ತಿಗೆ : ಉಮೇಶಕುಮಾರ ಸ್ವಾರಳ್ಳಿಕರ್

ಬೀದರ.ಆ. 30 : ಬೀದರ ನಗರಸಭೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ, ಅಕ್ರಮ ನೇಮಕಾತಿ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ನಡೆಯುತ್ತಿರುವ ಕಾರ್ಯಗಳನ್ನು ಖಂಡಿಸಿ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ನೇತೃತ್ವದಲ್ಲಿ ಸೆಪ್ಟೆಂಬರ್ 1, 2025 ರಂದು ಮಧ್ಯಾಹ್ನ 12 ಗಂಟೆಗೆ ಬೀದರ ನಗರಸಭೆಗೆ ಮುತ್ತಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ನಗರಸಭೆಯ ವಿವಿಧ ಯೋಜನೆಗಳಲ್ಲಿ ಮಿತಿಮೀರಿದ ಅವ್ಯವಹಾರಗಳು




ನಡೆಯುತ್ತಿರುವುದನ್ನು ಉಲ್ಲೇಖಿಸಿ, ನಗರಸಭೆ ಅಧ್ಯಕ್ಷರು ಹಾಗೂ ಪೌರಾಯುಕ್ತರ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ.

ಈ ಮುತ್ತಿಗೆ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು, ಪ್ರಗತಿಪರ ಚಿಂತಕರು, ಬುದ್ಧಿಜೀವಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರುಗಳು ಭಾಗವಹಿಸಲಿದ್ದಾರೆ ಎಂದು ವಿಭಾಗಿಯ ಸಂಚಾಲಕರಾದ ಉಮೇಶಕುಮಾರ ಸ್ವಾರಳ್ಳಿಕರ್ ಹಾಗೂ ಜಿಲ್ಲಾ ಸಂಚಾಲಕರಾದ ಬಾಬುರಾವ ಕೌಠಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ. 1ರಂದು ಮಲ್ಲಿಕಾರ್ಜುನ ದೇವರ ಪಲ್ಲಕ್ಕಿ ಮಹೋತ್ಸವ

ಕಲಬುರಗಿ:ಅ.30: ನಗರದ ಲೋಹಾರಗಲ್ಲಿಯ ಮಹಾದೇವ ನಗರದ ಶ್ರೀ ಮಲ್ಲಿಕಾರ್ಜುನ ಪಂಚ ಮಂಡಳಿಯವತಿಯಿಂದ 2025ರ ಸೆಪ್ಟಂಬರ್ 1 ರಂದು ಮಲ್ಲಿಕಾರ್ಜುನ ದೇವರ ಪಲ್ಲಕ್ಕಿ ಉತ್ಸವ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳ್ಳಿಗೆ ಮಹಾದೇವನಗರದ ಮಹಾದೇವ ದೇವಸ್ಥಾನದಿಂದ ಪಲ್ಲಕ್ಕಿ ಮೆರವಣಿಗೆ ಆರಂಭವಾಗಿ ಹುಮ್ನಾಬಾದ ಬೆಸ್, ಕಿರಿಣಾ ಬಜಾರ, ಚೌಕ್, ಫೋರ್ಟ್ ರಸ್ತೆ ಮಾರ್ಗವಾಗಿ ಲೋಹಾರಗಲ್ಲಿ ಮುಖಾಂತರ ಮಲ್ಲಿಕಾರ್ಜುನ ದೇವಸ್ಥಾನಕ್ಕೆ




ತಲುಪಿ ಮುಕ್ತಾಯವಾಗುವುದು.

ಇದಕ್ಕೂ ಮೊದಲು ಆಗಸ್ಟ್-31 ರಂದು ದೇವಸ್ಥಾನಕ್ಕೆ ಆಗಮಿಸವು ಭಕ್ತರಿಗಾಗಿ ಹಾಗೂ ಮಹಾದೇವನಗರ, ಹಾಗೂ ಸುತ್ತಮುತ್ತಲಿನ ಬಡಾವಣೆ ನಾಗರಿಕರಿಗಾಗಿ ಅನ್ನಸಂರ್ಪಣೆ (ಖಾಂಡ) ಆಯೋಜಿಸಲಾಗಿದೆ. ಪಲ್ಲಕ್ಕಿಮೆರವಣಿಗೆಯಲ್ಲಿ ಮಲ್ಲಿಕಾರ್ಜುನ ಭಕ್ತರು, ಬಡಾವಣೆಯ ಮಹಿಳೆಯರು, ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಲೋಹಾರಗಲ್ಲಿ ಮಹಾದೇವ ನಗರದ ಶ್ರೀ ಮಲ್ಲಿಕಾರ್ಜುನ ಪಂಚ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಸ್‌ಪೋರ್ಟ್ ಮೇಳಕ್ಕೆ ಉತ್ತಮ ಪ್ರತಿಕ್ರಿಯೆ

## 200ಕ್ಕೂ ಹೆಚ್ಚು ಪಾಸ್‌ಪೋರ್ಟ್ ಆಕಾಂಕ್ಷಿಗಳು ಭಾಗಿ

ಬೀದರ.ಆ.30:ಅಂಚೆ ಇಲಾಖೆ ಹಾಗೂ ಬೀದರ್ ಬೆಟರ್‌ಮೆಂಟ್ ಫೌಂಡೇಷನ್ ವತಿಯಿಂದ ಇಲ್ಲಿಯ ಶಾಹೀನ್‌ನಗರದ ಅಬ್ದುರ್‌ರಹಮಾನ್ ಮಲ್ಟಿಪರ್ಪೋಸ್ ಹಾಲ್‌ನಲ್ಲಿ ಶನಿವಾರ ನಡೆದ ಪಾ???ಪೋರ್ಟ್ ಮೇಳಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಮೇಳದಲ್ಲಿ ಸಾರ್ವಜನಿಕರು, ವಿದ್ಯಾರ್ಥಿಗಳು ಸೇರಿದಂತೆ 200ಕ್ಕೂ ಹೆಚ್ಚು ಪಾಸ್‌ಪೋರ್ಟ್ ಆಕಾಂಕ್ಷಿಗಳು ಭಾಗಿಯಾದರು.

ಅಂಕಪಟ್ಟಿ, ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್ ಸೇರಿದಂತೆ ಸರಿಯಾದ



ದಾಖಲೆ ಇದ್ದ 100 ಜನರಿಗೆ ಒಂದು ವಾರದಲ್ಲಿ ಆನ್‌ಲೈನ್ ಸೇವೆ ಒದಗಿಸಿಕೊಡುವ ವ್ಯವಸ್ಥೆ ಮಾಡಲಾಯಿತು. ಈ ಪೈಕಿ 46 ಜನರಿಗೆ ಸ್ಥಳದಲ್ಲೇ ಅಪಾಯಿಂಟ್‌ಮೆಂಟ್ ಕೊಡಿಸಲಾಯಿತು. ಉಳಿದ 100ಕ್ಕೂ ಹೆಚ್ಚು ಜನರಿಗೆ ಯಾವ ದಾಖಲೆಯನ್ನು ಯಾವ ರೀತಿ ಸರಿಪಡಿಸಬೇಕು ಎನ್ನುವ ಮಾಹಿತಿ ನೀಡಲಾಯಿತು.

ಇದಕ್ಕೂ ಮುನ್ನ ಮೇಳಕ್ಕೆ ಚಾಲನೆ ನೀಡಿದ ಬೀದರ್ ಬೆಟರ್‌ಮೆಂಟ್ ಫೌಂಡೇಷನ್ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅವರು, ಪಾಸ್‌ಪೋರ್ಟ್ ಪಡೆಯುವುದನ್ನು ಸುಲಭವಾಗಿಸಲು ಮೇಳ ಸಂಘಟಿಸಲಾಗಿದೆ ಎಂದು ತಿಳಿಸಿದರು. ಮೇಳಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ವಿವಿಧೆಡೆಯ ಜನ ದಾಖಲೆಗಳೊಂದಿಗೆ ಬಂದು ಪಾಸ್‌ಪೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ ಎಂದು ಅಂಚೆ ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್ ತಿಳಿಸಿದರು.

# ಕೃಷಿಯಲ್ಲಿ ಹಲವಾರು ತಾಂತ್ರಿಕತೆಗಳು ಬರುತ್ತಿರುವುದರಿಂದ ಅವುಗಳ ಜ್ಞಾನ ಅವಶ್ಯಕ- ಕುಲಪತಿ ಡಾ.ಪಿ.ಎಲ್ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕೃಷಿಪರಿಕರಮಾರಾಟಗಳಲ್ಲಿ ದಿನನಿತ್ಯ ಹಲವಾರು ತಾಂತ್ರಿಕತೆಗಳು ಬರುತ್ತಿರುವುದರಿಂದ ಅವುಗಳನ್ನು ಹೇಗೆ ಬಳಸಬೇಕು ಎಂಬ ಜ್ಞಾನವನ್ನು ತಿಳಿದುಕೊಂಡು ಅದನ್ನ ರೈತರಿಗೆ ತಲುಪಿಸಬೇಕು ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಹೇಳಿದರು.



ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ ಜೆ. ಎಚ್. ಪಟೇಲ್ ಸಭಾಂಗಣದಲ್ಲಿ ಮ್ಯಾನೇಜ ಹೈದರಾಬಾದ. ಸಮೇತಿ (ಉತ್ತರ). ಕೃಷಿ ವಿಶ್ವವಿದ್ಯಾಲಯ ಧಾರವಾಡ ಮತ್ತು ರಾಯಚೂರ. ಕೃಷಿ ಇಲಾಖೆ ಕೊಪ್ಪಳ. ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಮತ್ತು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಕೃಷಿ ಪರಿಕರ ಮಾರಾಟಗಾರರಿಗೆ ಕೃಷಿ ವಿಸ್ತರಣಾ ಸೇವೆಗಳ ಡಿಪ್ಲೊಮಾ ಕೋರ್ಸನ ಉದ್ಘಾಟನಾ ಸಮಾರಂಭವನ್ನು ನೆರವೇರಿಸಿ ಮಾತನಾಡಿದರು.

ಕೃಷಿ ಪರಿಕರಗಳ ಮಾರಾಟಗಾರರು ತಮಗೆ ನೀಡುವ 48 ವಾರಗಳ ತರಬೇತಿಯಲ್ಲಿ ಎಲ್ಲರೂ ಶಿಸ್ತು. ಸಂಯಮ ಜೊತೆಗೆ ಉತ್ಸಾಹದಿಂದ ಕಲಿಯಬೇಕು. ಇಂದು ವೈಜ್ಞಾನಿಕ ಕೃಷಿಯ ಕಾಲ ಆಗಿರುವುದರಿಂದ ಕೃಷಿ ಪರಿಕರಗಳ ಬಗ್ಗೆ ಮಾರಾಟ ಮಾಡಿದರೆ ಸಾಲದು ಅವುಗಳ ಬಗ್ಗೆ ಸಮಗ್ರವಾಗಿ ತಿಳಿದುಕೊಳ್ಳಬೇಕಿದೆ. ಎಲ್ಲಾ ಪ್ರದೇಶದಲ್ಲಿ ಹವಾಮಾನ ಒಂದೇ ತರಹ ಇರುವುದಿಲ್ಲ. ನಮ್ಮ ಸುತ್ತಮುತ್ತಲಿನ ಪರಿಸರ ಮತ್ತು ಜೀವಿಗಳ ಬಗ್ಗೆ ಜ್ಞಾನ ಹೊಂದಿರುವುದು ಬಹಳ ಮುಖ್ಯ ಹಾಗಾಗಿ ನಿಮ್ಮ ಮಕ್ಕಳಿಗೆ ಜೀವ ವಿಜ್ಞಾನದ ಬಗ್ಗೆ ತಿಳುವಳಿಕೆ ನೀಡಿ ಎಂದರು.

ಕೃಷಿಯನ್ನು ವೈಜಾನಿಕವಾಗಿ ಮಾಡಿದಾಗ ಮಾತ್ರ ಉದ್ದಿಮೆಯನ್ನಾಗಿ ಮಾಡಬಹುದು. ಸೋಲಾರ ಅಳವಡಿಸಿಕೊಳ್ಳಲು ರೈತರಿಗೆ ತಿಳಿಸಬೇಕು. ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಒತ್ತು ನೀಡಬೇಕು. ಕನಿಷ್ಠ 2 ವರ್ಷಗಳಿಗೊಮ್ಮೆ ಮಣ್ಣಿನ ಪರೀಕ್ಷೆಯನ್ನು ರೈತರು ಮಾಡಿಸಬೇಕು. ಹತ್ತಿ. ತೊಗರಿ. ಸೂರ್ಯಕಾಂತಿ ಕಟಗಿಗಳನ್ನು ಸುಡದೆ ಅವುಗಳನ್ನು ಕೊಳೆಸಿ ಗೊಬ್ಬರ ಮಾಡವುದರ ಜೊತೆಗೆ ಸಮಗ್ರ ಕೃಷಿಗೆ ರೈತರು ಒತ್ತು ನೀಡಬೇಕೆಂದು ಹೇಳಿದರು.

ಕೊಪ್ಪಳ ಜಿಲ್ಲೆಯಲ್ಲಿ ಹಲವಾರು ಪ್ರಗತಿಪರ ರೈತರಿದ್ದು ಇಲ್ಲಿ ಹಲವಾರು ರೀತಿಯ ಬೆಳೆಗಳನ್ನು ಬೆಳೆಯಲಾಗುತ್ತದೆ. ನಿಸರ್ಗದ ಸಂಪನ್ಮೂಲಗಳಾದ ಮಣ್ಣು ಮತ್ತು ನೀರಿನ ರಕ್ಷಣೆ ಮಾಡಬೇಕು. 48 ದಿನಗಳ ಕಡಿಮೆ ಅವಧಿಯ ತರಬೇತಿಯಲ್ಲಿ ಕೃಷಿ. ತೋಟಗಾರಿಕೆ. ಹೈನುಗಾರಿಕೆ ಬಗ್ಗೆ ಹೆಚ್ಚಿನ ಜ್ಞಾನ ನೀಡುತ್ತಿರುವುದರಿಂದ ಎಲ್ಲದರ ಬಗ್ಗೆ ಸಮಗ್ರವಾಗಿ ತಿಳಿದುಕೊಳ್ಳಬೇಕೆಂದರು.

ಸಮೇತಿ -ಉತ್ತರ ಕೃಷಿ ವಿಶ್ವವಿದ್ಯಾಲಯ ಧಾರವಾಡದ ಪ್ರಾಧ್ಯಾಪಕರು ಹಾಗೂ ರಾಜ್ಯ ನೋಡಲ್ ಅಧಿಕಾರಿಗಳಾದ ಡಾ. ಎಸ್. ಎನ್. ಜಾಧವ್ ಮಾತನಾಡಿ 48 ವಾರಗಳ ತರಬೇತಿಯಲ್ಲಿ 8 ನೇ ವಾರ 15 ನೇ ವಾರ ಹೀಗೆ ಮೂರು ಪರೀಕ್ಷೆಗಳನ್ನು ನಡೆಸಿ 48 ವಾರಗಳ ನಂತರ ಅಂತಿಮ ಪರೀಕ್ಷೆ ನಡೆಸಲಾಗುತ್ತದೆ. ತರಬೇತಿ ಅವಧಿಯಲ್ಲಿ ಚೆನ್ನಾಗಿ ಕಲಿಯಬೇಕು ಕಲಿಕೆ ಎಂಬುದು ನಿರಂತರ. ತರಬೇತಿ ಮುಗಿಸಿದವರಿಗೆ ಪ್ರಮಾಣ ಪತ್ರಗಳನ್ನು ನೀಡಲಾಗುತ್ತದೆ ಅವುಗಳಿಂದ ತಾವು ಕೃಷಿ ಪರಿಕರ ಅಂಗಡಿಗಳನ್ನು ತೆರೆಯಬಹುದು. ಇದರಿಂದ ಗ್ರಾಮೀಣ ಭಾಗದಲ್ಲಿ ಕೃಷಿ ಪರಿಕರಗಳ ಅಂಗಡಿಗಳು ಹೆಚ್ಚಾದಂತೆ ರೈತರಿಗೂ ಅನುಕೂಲವಾಗಲಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಸೆಪ್ಟೆಂಬರ್ 13 ರಿಂದ 16 ರವರೆಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಕೃಷಿಮೇಳ-2025 ರ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ. ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ. ಎಮ್. ವಿ. ಮಂಜುನಾಥ. ಕೊಪ್ಪಳ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್. ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಉಪಾಧ್ಯಕ್ಷರಾದ ವೀರಣ್ಣ ಕಮತರ ಸೇರಿದಂತೆ ಇತರೆ ಕೃಷಿ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಗೂ ಡಿಪ್ಲೊಮಾ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳು ಉಪಸ್ಥಿತರಿದ್ದರು.

# ಪಂಚಗ್ಯಾರಂಟಿ ಯೋಜನೆಗಳ ಲಾಭ ಅರ್ಹರಿಗೆ ದೊರಕಲಿ ಪಂಚಗ್ಯಾರಂಟಿ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶ್ರೇಣಿಕ್ ಕುಮಾರ್ ದೋಖಾ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:30- ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚಗ್ಯಾರಂಟಿ ಯೋಜನೆಗಳ ಲಾಭ ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ದೊರೆಯುವಂತೆ ನೋಡಿಕೊಳ್ಳಲು ಪಂಚಗ್ಯಾರಂಟಿ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶ್ರೇಣಿಕ್ ಕುಮಾರ್ ದೋಖಾ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.




ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನ್ನ ಭಾಗ್ಯ ಯೋಜನೆಯಡಿ ಅರ್ಹರಿಗೆ ಲಾಭ ದೊರೆಯುತ್ತಿರುವ ಬಗ್ಗೆ ಅಧಿಕಾರಿಗಳು ನಿಗಾ ಇಡಬೇಕು. ನ್ಯಾಯ ಬೆಲೆ ಅಂಗಡಿಗಳ ವ್ಯಾಪ್ತಿಯಲ್ಲಿಯೂ ನಿಗಾ ಇಡಬೇಕು. ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಬೇಕು. ಗೃಹಲಕ್ಷ್ಮಿ ಯೋಜನೆಯಿಂದ ಅರ್ಹರು ವಂಚಿತರಾಗದಂತೆ ನಿಗಾವಹಿಸಿ, ಸಕಾಲಕ್ಕೆ ಹಣ ಪಾವತಿಯಾಗುವಂತೆ ನೋಡಿಕೊಳ್ಳಲು ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು

ಯುವನಿಧಿ,ಗೃಹ ಜ್ಯೋತಿ,ಶಕ್ತಿ ಯೋಜನೆಗಳ ಲಾಭವು ನಿರಂತರ ದೊರಕಿಸಬೇಕು. ಪಂಚಗ್ಯಾರಂಟಿ ಯೋಜನೆಗಳ ಲಾಭ ಪ್ರತಿ ಅರ್ಹ ಫಲಾನುಭವಿಗಳಿಗೆ ದೊರೆಯುವಂತೆ ನೋಡಿಕೊಳ್ಳಲು ಸೂಚಿಸಿದರು.

ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಆರ್ಥಿಕ, ಪ್ರಥಮ ಹಂತದ ಸಮೀಕ್ಷೆ ಜೆಸ್ಕಾಂ ದಿಂದ ಆರಂಭಿಸಲಾಗಿದ್ದು, ಬಿಲ್ ಕಲೆಕ್ಟರ್ ಹಾಗೂ ರೀಡರ್ ಗಳು ಸ್ಟಿಕರ್ ಅಂಟಿಸುವ ಕಾರ್ಯ ಆರಂಭಿಸಿದ್ದಾರೆ. ಆರ್.ಆರ್. ನಂಬರ್ ಜೊತೆಗೆ ಯುನಿಕ್ ಐಡಿ ಸೃಷ್ಟಿಸಿ ಜಿಯೋ ಟ್ಯಾಗ್ ಮಾಡಲಾಗುತ್ತಿದ್ದು , ನಾಗರಿಕರು ಸಹಕರಿಸುವಂತೆ ತಿಳಿಸಿದ ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ರಾಘವೇಂದ್ರ ಅವರು, ನಂತರ ಗಣತಿದಾರರಿಂದ ಸಮಗ್ರ ಗಣತಿ, ಸಮೀಕ್ಷೆ ಕಾರ್ಯವು ಸಹ ಮುಂದೆ ನಡೆಯಲಿದೆ ಎಂದು ಹೇಳಿದರು.

ಸಭೆಯಲ್ಲಿ ಉಪಾಧ್ಯಕ್ಷರಾದ ಸ್ಯಾಮ್ಸನ್ ಮಾಳಿಕೇರಿ, ಬಸವರಾಜ ಬಿಳಾರ್, ಸದಸ್ಯರಾದ ದಾವೂದ್ ಪಠಾಣ್,ಸಿದ್ದನಗೌಡ ಹಂದ್ರಾಳ,ಶಿವಕುಮಾರ್, ಸಂಜೀವಕುಮಾರ ಮುಂಡರಗಿ, ಮಾನಪ್ಪ ವಠಾರ್ ಸಗರ,ಧರ್ಮ ಬಾಯಿ ತುಳಜಾ, ಮಾರಯ್ಯ ರಾಯಪ್ಪ, ತಾಲೂಕ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಟ್ಟಕಡೆಯ ಫಲಾನುಭವಿಗೆ ಸರ್ಕಾರದ ಯೋಜನೆಗಳು ತಲುಪಬೇಕು: ಶಾಸಕ ಚನ್ನಾರೆಡ್ಡಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ.30:ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ (ರಿ)., ಕರ್ನಾಟಕ ಕಾರ್ಯನಿರತ ಪತ್ರಿಕೆಗಳ ಸಂಪಾದಕರ ಸಂಘ (ರಿ). ಜಿಲ್ಲಾ ಘಟಕ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಇಂದು ಯಾದಗಿರಿಯ ಎಸ್ ಡಿ ಎನ್ ಹೋಟೆಲ್ ನಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಆಯೋಜಿಸಿದ್ದ "ವಾರ್ತಾಲಾಪ" ಕಾರ್ಯಾಗಾರವನ್ನು ಯಾದಗಿರಿ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಉದ್ಘಾಟಿಸಿದರು.

ಈ ವೇಳೆ ಶಾಸಕರಾದ ಶ್ರೀ ಚನ್ನಾರೆಡ್ಡಿ ಅವರು ಮಾತನಾಡಿ, ಪತ್ರಕರ್ತರಿಗೆ ಈ ಕಾರ್ಯಾಗಾರ ಆಯೋಜಿಸಿರುವುದು ಬಹಳ ಸಂತೋಷದ ಸಂಗತಿ. ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಹಳ್ಳಿ ಹಳ್ಳಿಗೆ ಮುಟ್ಟಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಭಾರತ ಸರ್ಕಾರದ ವಾರ್ತಾ ಶಾಖೆ ಹಮ್ಮಿಕೊಂಡಿರುವ ವಾರ್ತಾಲಾಪ ಕಾರ್ಯಾಗಾರವು ಬಹಳ ಅನುಕೂಲಕರವಾಗಲಿದೆ. ಅಭಿವೃದ್ಧಿ ಕಾರ್ಯಕ್ರಮಗಳನ್ನು ಹೆಚ್ಚು ಪ್ರಚುರಪಡಿಸುವುದರಿಂದ ಎಲ್ಲ ಫಲಾನುಭವಿಗಳಿಗೂ ಸರ್ಕಾರದ ಯೋಜನೆಗಳು ತಲುಪಲಿವೆ ಎಂದು ತಿಳಿಸಿದರು.

ಬಹುತೇಕ ಹಳ್ಳಿಗಳಲ್ಲಿ ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿವೆ. ಇದರಿಂದ ಜನರಿಗೆ, ಮುಖ್ಯವಾಗಿ ವಿದ್ಯಾರ್ಥಿಗಳಿಗೆ ಬಹಳ ಅನುಕೂಲಕರ ವಾತಾವರಣ ಸೃಷ್ಟಿಯಾಗಿದೆ. ಇದು ಸರ್ಕಾರದ ಒಂದು ಅತ್ಯುತ್ತಮ ಕಾರ್ಯವಾಗಿದೆ. ಇದೇ ರೀತಿ ಜನರಿಗೆ ಹಾಗೂ ವಿದ್ಯಾರ್ಥಿಗಳಿಗೆ ಹಲವು ಅಭಿವೃದ್ಧಿ ಕಾರ್ಯಗಳು ಹೆಚ್ಚಾಗಲಿ ಎಂದು ಆಶಿಸಿದರು.

ಭಾರತ ಸರ್ಕಾರದ ವಾರ್ತಾ ಶಾಖೆಯ, ಬೆಂಗಳೂರಿನ ಹೆಚ್ಚುವರಿ ಮಹಾನಿರ್ದೇಶಕರಾದ ಶ್ರೀ ಎಸ್.ಜಿ. ರವೀಂದ್ರ ಅವರು ಕಾರ್ಯಾಗಾರದಲ್ಲಿ ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ರಾಜ್ಯ ಸರ್ಕಾರದ ಮೂಲಕವೇ ಅನುಷ್ಠಾನವಾಗುತ್ತವೆ. ಹಾಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಂದಾಗಿ ಕೆಲಸ ಮಾಡಿದಾಗ ಮಾತ್ರ ಯೋಜನೆಗಳ ಸಮರ್ಪಕ ಅನುಷ್ಠಾನ ಕಾಣಬಹುದು. ಮಾಹಿತಿ ಮತ್ತು ಪ್ರಸಾರ ಖಾತೆ-ಯ ರಾಜ್ಯ ಸಚಿವರಾದ ಡಾ.ಎಲ್. ಮುರುಗನ್ ಅವರು ಲೋಕಸಭೆಯಲ್ಲಿ ಮಾಹಿತಿ ನೀಡಿದಂತೆ, ಗ್ರಾಮೀಣ ಪ್ರದೇಶಗಳಲ್ಲಿ 104ರಿಂದ 510 ಸಮುದಾಯ ವಾಹಿನಿಗಳನ್ನು ಹೆಚ್ಚಿಸಲಾಗಿದೆ. ಹೊಸದಾಗಿ 264 ಸಮುದಾಯ ಬಾನುಲಿ ಕೇಂದ್ರಗಳು, 6 ದೂರದರ್ಶನ ವಾಹಿನಿಗಳಿಗೆ ಅನುಮೋದನೆ ನೀಡಲಾಗಿದೆ. ಪ್ರಧಾನಮಂತ್ರಿ ಆವಾಸ್ ಯೋಜನೆ, ಆರೋಗ್ಯವಲಯದಲ್ಲಿ ಆಯುಷ್ಮಾನ್ ಭಾರತ, ಜನೌಷಧಿ ಕೇಂದ್ರಗಳು, ಸರ್ಕಾರದ ಎಲ್ಲ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ಒದಗಿಸುವ ಉಮಂಗ್ ಅಪ್ಲಿಕೇಷನ್ ಸೇರಿದಂತೆ ವಿಶೇಷವಾಗಿ ರೈತರಿಗೆ, ಯುವಕರಿಗೆ, ಮಕ್ಕಳಿಗೆ, ಮಹಿಳೆಯರಿಗೆ, ಆರೋಗ್ಯ, ವಸತಿ ಕ್ಷೇತ್ರಗಳಲ್ಲಿ ಜನಪ್ರಿಯ ಯೋಜನೆ ಹಾಗೂ ಉಪಕ್ರಮಗಳು ಅನುಷ್ಠಾನಗೊಂಡಿವೆ. ಇವುಗಳಿಗೆ ಮಾಧ್ಯಮದವರು ಇನ್ನೂ ಹೆಚ್ಚಿನ ಪ್ರಚಾರ ಒದಗಿಸಿದರೆ, ಜನರು ಅವುಗಳ ಮಾಹಿತಿ ಪಡೆದು, ಅದರ ಅನುಕೂಲ ಪಡೆಯುತ್ತಾರೆ ಎಂದು ಹೇಳಿದರು.

ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಮಾತನಾಡಿ, ಮಹತ್ವಾಕಾಂಕ್ಷಿ ಜಿಲ್ಲೆಗಳ ಪಟ್ಟಿಯಲ್ಲಿ ಯಾದಗಿರಿ ಇದೆ. ಇದು ಕೃಷಿಯಾಧಾರಿತ ಜಿಲ್ಲೆಯಾಗಿದ್ದು, ಇಲ್ಲಿನ ಸುಸ್ಥಿರ ಕೃಷಿ, ತೋಟಗಾರಿಕೆ, ನೀರಾವರಿ ಯೋಜನೆಗಳ ಅನುಷ್ಠಾನ ಕುರಿತು ಈ ಕಾರ್ಯಾಗಾರದಲ್ಲಿ ಸಮಗ್ರ ಮಾಹಿತಿ ದೊರಕಲಿದೆ. ಈ ಕಾರ್ಯಾಗಾರ ಮಹತ್ವದಾಗಿದೆ. ಇದರ ಜೊತೆಗೆ ಉದ್ಯೋಗಾವಕಾಶ, ಜೀವ ವಿಮೆ, ಶಿಕ್ಷಣ, ಆರೋಗ್ಯ, ಯುವ ಸಬಲೀಕರಣ ಮುಂತಾದ ಕ್ಷೇತ್ರಗಳ ಜನಪರ ಯೋಜನೆಗಳ ಮಾಹಿತಿಗಳನ್ನು ಪತ್ರಕರ್ತರು ತಿಳಿದುಕೊಂಡು ಅದನ್ನು ಜನರಿಗೆ ಮುಟ್ಟಿಸುವುದು ಅಗತ್ಯ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ಅವರು ಮಾತನಾಡಿ, ಮಾಧ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗವೆಂದು ಪರಿಗಣಿಸಲಾಗುತ್ತದೆ. ಮಾಧ್ಯಮದವರು ಮಾಹಿತಿ ಹಂಚಿಕೊಳ್ಳುವುದರ ಜೊತೆ-ಗೆ ಅದರಲ್ಲಿರುವ ಸತ್ಯಪರತೆಗೂ ಒತ್ತು ನೀಡಬೇಕು. ಈಗಿನ ಕಾಲಕ್ಕೆ ಜವಾಬ್ದಾರಿಯ ವರದಿಗಾರಿಕೆ ಹೆಚ್ಚು ಅವಶ್ಯವಾಗಿದೆ. ಸಮಾಜದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ತಡೆಯಲು ಪೊಲೀಸ್ ಇಲಾಖೆ ಸಹಾಯವಾಣಿಯನ್ನು ಜಾರಿಗೊಳಿಸಿದೆ. ಅದಕ್ಕೆ ಹೆಚ್ಚಿನ ಪ್ರಚಾರ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶ್ರೀ ಮಲ್ಲಪ್ಪ ಸಂಕೀನ್ ಅವರು ಮಾತನಾಡಿ, ಸರ್ಕಾರದ ಅನೇಕ ಯೋಜನೆಗಳು ಮೊದಲು ಮಾಧ್ಯಮದವರಿಗೆ ತಿಳಿಯಬೇಕು. ಆಗ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳನ್ನು ತಲುಪಿಸಲು ಅನುಕೂಲವಾಗುತ್ತದೆ. ಪತ್ರಕರ್ತರಲ್ಲಿ ಅಧ್ಯಯನ ಆಧಾರಿತ ಲೇಖನಗಳು ಹೆಚ್ಚಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಯಾದಗಿರಿ ನಗರಸಭೆ ಅಧ್ಯಕ್ಷರಾದ ಕು. ಲಲಿತಾ ಅನಪೂರ, ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಲವೀಶ್ ಒರಡಿಯಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬೂರಾವ್ ಕಾಡ್ಲೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಶ್ರೀ ಸುಲೈಮಾನ್ ಡಿ. ನದಾಫ್, ಕರ್ನಾಟಕ ಕಾರ್ಯನಿರತ ಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಶ್ರೀ ಸಿದ್ದಪ್ಪ ಲಿಂಗೇರಿ ಅವರು ಉಪಸ್ಥಿತರಿದ್ದರು.

# ಸಾರಿಗೆ ಘಟಕ ಸಿಬ್ಬಂದಿಗೆ ಡೆಂಗ್ಯೂ ಜಾಗೃತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಾಲಯ, ಜಿಲ್ಲಾ ಸಮೀಕ್ಷಾ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಹಾಗೂ ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರು ಸಂಯುಕ್ತಾಶ್ರಯದಲ್ಲಿ ಪಟ್ಟಣದ ಸಾರಿಗೆ ಡೀಪೋದಲ್ಲಿ ಡೆಂಗ್ಯೂ ಹಾಗೂ ಸೊಳ್ಳೆವಾಹಕ ರೋಗಗಳ ಕುರಿತ ಜಾಗೃತಿ ಮತ್ತು ಆರೋಗ್ಯ ಶಿಕ್ಷಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಜೋಶಿ ಮಾತನಾಡಿ, "ಬಸ್ ಡಿಪೋಗಳಲ್ಲಿ ಟೈರ್ ಸಂಗ್ರಹ ಹಾಗೂ ಘನ ತ್ಯಾಜ್ಯ ವಸ್ತುಗಳಲ್ಲಿ ಮಳೆ ನೀರು ನಿಂತು ಹೋಗುವ ಕಾರಣ ಈಡಿಸ್ ಇಜಿಪ್ಟೆ ಲಾರ್ವಾ ಬೆಳೆಯುತ್ತವೆ. ಇದು ಡೆಂಗ್ಯೂ ಹರಡುವ ಪ್ರಮುಖ ಕಾರಣ. ಆದ್ದರಿಂದ ಟೈರ್ ಹಾಗೂ ತ್ಯಾಜ್ಯ ವಸ್ತುಗಳನ್ನು ನೀರು ಸಂಗ್ರಹವಾಗದ ಸ್ಥಳದಲ್ಲಿ ಇಡುವುದು ಮತ್ತು ನಿರುಪಯುಕ್ತ ವಸ್ತುಗಳ ಸೂಕ್ತ ವಿಲೇವಾರಿ ಮಾಡುವುದು ಅಗತ್ಯ" ಎಂದು ತಿಳಿಸಿದರು. ಸಾಂಕ್ರಾಮಿಕ ರೋಗ ತಜ್ಞ ಅಶೋಕ ಮಡ್ಡಿಕರ್ ಅವರು ಡೆಂಗ್ಯೂ ವೈರಸ್ ಈಡಿಸ್ ಸೊಳ್ಳೆಯ ಕಚ್ಚುವುದರಿಂದ ಹರಡುತ್ತದೆ. ವಿಪರೀತ ಜ್ವರ, ತೀವ್ರ ತಲೆನೋವು, ಕಣ್ಣಿನ ಹಿಂಭಾಗ ನೋವು, ನಡುಕ ಹಾಗೂ ಚರ್ಮದಿಂದ ರಕ್ತಸ್ರಾವವು ಸಾಮಾನ್ಯ ಲಕ್ಷಣಗಳು. ಸರಿಯಾದ ಚಿಕಿತ್ಸೆ ಪಡೆದರೆ ಗುಣಮುಖರಾಗಲು ಸಾಧ್ಯ. ಕಾರ್ಯ ಸ್ಥಳ ಹಾಗೂ ಮನೆಗಳಲ್ಲಿ ಸೊಳ್ಳೆ ಕಡಿತ ತಡೆಗಟ್ಟುವ ಕ್ರಮಗಳನ್ನು ಅನುಸರಿಸಬೇಕು" ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಘಟಕ ವ್ಯವಸ್ಥಾಪಕ ಪ್ರಕಾಶ್ ದೊಡ್ಡಮನಿ ಮತ್ತು ಸಾರಿಗೆ ಡೀಪೋ ಸಿಬ್ಬಂದಿ ಹಾಜರಿದ್ದರು.

# ಚೆನ್ನಮ್ಮ ಬಿರಾದಾರ ನಿಧನ


ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ ಸಮೀಪದ ಮಡಿಕೇಶ್ವರ ಗ್ರಾಮದ ಹಿರಿಯರಾದ ಚೆನ್ನಮ್ಮ ಮಲ್ಲನಗೌಡ ಬಿರಾದಾರ (82) ಶುಕ್ರವಾರ ನಿಧನರಾದರು. ಮೃತರಿಗೆ ಐವರು ಪುತ್ರರು, ಮೂವರು ಪುತ್ರಿಯರು, 17 ಜನ ಮೊಮ್ಮಕ್ಕಳು, 9 ಜನ ಗಿರಿ ಮೊಮ್ಮಕ್ಕಳಿದ್ದಾರೆ. ತಾಳಿಕೋಟಿ ಪಿಎಸ್ಐ ಜ್ಯೋತಿ ಖೋತ ಅವರ ಅಜ್ಜಿಯವರಾಗಿದ್ದಾರೆ. ಮೃತರ ಅಂತ್ಯಕ್ರಿಯೆ ಆ.30 ರಂದು ಶನಿವಾರ



ಮದ್ಯಾಹ್ನ 2-00 ಘಂಟೆಗೆ ಮಡಿಕೇಶ್ವರ ಗ್ರಾಮದಲ್ಲಿ ವಿಧಿವಿಧಾನಗಳೊಂದಿಗೆ ಅಂತ್ಯಕ್ರಿಯೇ ಜರುಗಿತ್ತು.

# ಕ್ರೀಡೆಯಲ್ಲಿ ಮೇಜರ್ ಧ್ಯಾನಚಂದ್ ಕೊಡುಗೆ ಅಪಾರ: ನಾಯ್ಕಲ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ನಮ್ಮ ದೇಶಕ್ಕೆ ಹಾಕಿ ಮಾಂತ್ರಿಕ ಮೇಜರ್ ಧ್ಯಾನಚಂದ್ ಅವರ ಕೊಡುಗೆ ಅಪಾರವಾದದ್ದು ಎಂದು ಪ್ರಾಂಶುಪಾಲ ಶರಣು ನಾಯ್ಕಲ್ ಹೇಳಿದರು. ನಗರದ ಹೃದಯಭಾಗದಲ್ಲಿ ಇರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ದೊರಿಗುಡ್ಡ ಉಕ್ಕಿನಾಳ ಶಾಲೆಯಲ್ಲಿ ಶುಕ್ರವಾರದಂದು ಹಮ್ಮಿಕೊಂಡಿದ್ದ ಹಾಕಿ ಮಾಂತ್ರಿಕ ಮೇಜರ್ ಧ್ಯಾನಚಂದ್ ಜಯಂತೋತ್ಸವ ಹಾಗೂ ಕ್ರೀಡಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಪಠ್ಯದ ಜೊತೆ ಕ್ರೀಡೆಯಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ದಿನನಿತ್ಯ ಯೋಗ ವ್ಯಾಯಾಮ ವಿವಿಧ ಕ್ರೀಡೆಯಲ್ಲಿ ಪಾಲ್ಗೊಳ್ಳಬೇಕು ಎಂದರು ಒಲಿಂಪಿಕ್ ಕ್ರೀಡೆಯಲ್ಲಿ ಭಾರತದ ಪರವಾಗಿ ಪ್ರತಿನಿಧಿಸಿ ಹಲವಾರು ಪ್ರಶಸ್ತಿಗಳನ್ನು ಪಡೆದು ನಮ್ಮ ದೇಶಕ್ಕೆ ಕೀರ್ತಿ ತಂದಿದ್ದಾರೆ ಎಂದು ಹೇಳಿದರು.

ಶಾಲೆಯ ಪ್ರಾಂಶುಪಾಲರಾದ ಶರಣು ನಾಯ್ಕಲ್ ಮಾತನಾಡಿ. ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕ ಮಾನಸಿಕ ಆರೋಗ್ಯ ವೃದ್ಧಿ ಆಗುತ್ತದೆ ಮೇಜರ್ ಧ್ಯಾನಚಂದ್ ಅವರಂತೆ ಇಂದಿನ ಯುವಕರು ಕ್ರೀಡೆಯಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಪಡೆದು ದೇಶಕ್ಕೆ ಕೀರ್ತಿ ತರಬೇಕು ಮತ್ತು ಜೀವನದಲ್ಲಿ ಕ್ರೀಡೆಯ ಪ್ರಯೋಜನಗಳೊಂದಿಗೆ ಕ್ರೀಡಾಕೂಟದಲ್ಲಿ ಭಾಗವಹಿಸಬೇಕು .ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರಾದ ಮಡಿವಾಳಪ್ಪ ಪಾಟೀಲ್ ಹೆಗ್ಗಣದೊಡ್ಡಿ, ಸುಭಾಷ್ ನಾಯಕ್ ನಿಲಯ ಪಾಲಕರಾದ ಸಂತೋಷ ಜೋಗೋರ, ಮಲ್ಲಿಕಾರ್ಜುನ ಮಳಿಕೇರಿ, ಚಂದ್ರು ರಾಥೋಡ್ ರಾಜಕುಮಾರ ಬಡಿಗೇರ್, ಬಸವರಾಜ ನಾಯಕ,ದತ್ತು ಸರ್ ಭಾಗ್ಯಮ್ಮ ಪಾಟೀಲ್, ಸೌಮ್ಯ ಕುಲಕರ್ಣಿ, ದೀಪಾ ಮೇಡಂ, ಶಕುಂತಲಾ ಸುರಪುರ, ದಿವ್ಯ ಬಿರಾದಾರ,ಮತ್ತು ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕ್ರೀಡೆ ಆರೋಗ್ಯವಾಗಿಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ:ನಾಯಕ

ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಅ.30:ಕ್ರೀಡೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಆರೋಗ್ಯವಾಗಿಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಇದರ ಮಹತ್ವ ಸಾರಲು ಹಾಗೂ ಹೆಚ್ಚಿನ ರೀತಿಯಲ್ಲಿ ಕ್ರೀಡೆಗಳಲ್ಲಿ ತೊಡಿಸಿಕೊಳ್ಳುವಂತೆ ಪ್ರೋತ್ಸಾಹಿಸಲು ಹಾಕಿ ದಂತಕಥೆ ಮೇಜರ ಧ್ಯಾನ ಚಂದ ಅವರ ಜನ್ಮದಿನದ ಸ್ಮರಣಾರ್ಥವಾಗಿ ಪ್ರತಿ ವರ್ಷ ಆಗಸ್ಟ 29 ರಂದು ರಾಷ್ಟ್ರೀಯ ಕ್ರೀಡಾ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಮುಖ್ಯಗುರು ಲಿಂಗಾರೆಡ್ಡಿ ನಾಯಕ ಅಭಿಪ್ರಾಯಪಟ್ಟರು.



ಪಟ್ಟಣದ ವಿದ್ಯಾ ವರ್ಧಕ ಸಂಸ್ಥೆಯ ವಿವಿಧ ವಿಭಾಗಗಳಿಂದ ಹಮ್ಮಿಕೊಂಡ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಈ ದಿನಾಚರಣೆಯ ಮೂಲಕ ಕ್ರೀಡೆಯ ಮೌಲ್ಯಗಳಾದ ಶಿಸ್ತು, ಪರಿಶ್ರಮ, ಕ್ರೀಡಾ ಮನೋಭಾವನೆಯ ಗುಣಗಳನ್ನು ಬೆಳಸಿಕೊಳ್ಳುವುದು ಅಲ್ಲದೆ ಧ್ಯಾನ ಚಂದ ಅವರ ಸಾಧನೆ ನಮ್ಮದಾಗಬೇಕು. ಕ್ರೀಡೆಗಳು ಜೀವನದ ಅವಿಭಾಜ್ಯ ಅಂಗವಾಗಿ ಪರಿಗಣಿಸುವ ಕೆಲಸವಾಗಬೇಕು ಎಂದು ಹೇಳಿದರು.

ಪ್ರಾಂಶುಪಾಲ ಹಂಪಣ್ಣ ಸಜ್ಜನಶೆಟ್ಟಿ, ಜಿ.ಎಂ.ಗುರುಪ್ರಸಾದ. ಕರಬಸಯ್ಯ ದಂಡಿಗಿಮಠ, ದೈಹಿಕ ಶಿಕ್ಷಕರಾದ ವಿಶ್ವನಾಥರೆಡ್ಡಿ ಪಾಟೀಲ ಕಣೇಕಲ್, ರಾಜಶೇಖರ ಪಾಟೀಲ, ಬಸವರಾಜ ಭರಮಶೆಟ್ಟಿ, ಸತೀಶ ಪುಮಾರ್ಂ, ಶಿವುಕುಮಾರ ಬಂಡಿ, ಸಂಗಾರೆಡ್ಡಿ ಪಾಟೀಲ, ತೋಟೇಂದ್ರ, ಅಭಿಲಾಷ, ಬಿ.ಇಡಿ ಕಾಲೇಜಿನ ಪ್ರಶಿಕ್ಷಣಾರ್ಥಿಗಳು, ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಸೇರಿದಂತೆ ಇತರರಿದ್ದರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿರಿ:9449732000

# ಜಾತಿ ಕಾಲಂನಲ್ಲಿ "ಆದಿಬಣಜಿಗ" ಎಂದು ಬರೆಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.30- ಮುಂಬರುವ ಜನಗಣತಿ ಜಾತಿ ಕಾಲಂ 8 ರಲ್ಲಿದ್ದಂತೆ " ಆದಿಬಣಜಿಗ " ಮಾತ್ರ ಬರೆಯಿಸಬೇಕೆಂದು ಗುಲಬರ್ಗಾ ಜಿಲ್ಲಾ ಆದಿ ಬಣಜಿಗ ಸಮಾಜ ಮನವಿ ಮಾಡಿದೆ.

ಈ ಸಂಬಂಧ ಗುಲಬರ್ಗಾ ಜಿಲ್ಲಾ ಆದಿಬಣಜಿಗ ಸಮಾಜದವರೆಲ್ಲ ಸಭೆ ಸೇರಿ ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾದ



ಮಧುಸೂದನ ನಾಯ್ಕ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಅದರಂತೆ ಕಲ್ಯಾಣ ಕರ್ನಾಟಕ, ಉತ್ತರ ಕರ್ನಾಟಕ ಭಾಗದ ಸಮಾಜ ಬಾಂಧವರು ಲಿಂಗಾಯತ ಬಣಜಿಗ, ಲಿಂಗಾಯತ ಆದಿಬಣಜಿಗ ಎಂದು ಬರೆಯಿಸದೆ ಕೇವಲ " ಆದಿಬಣಜಿಗ " ಎಂದು ಬರೆಯಿಸಬೇಕು ಎಂದು ಸಮಾಜದ ಗೌರವಾಧ್ಯಕ್ಷರಾದ ಡಾ.ಬಸವರಾಜ ಕೊನೇಕ್ ಹಾಗೂ ಅಧ್ಯಕ್ಷರಾದ ಶಿವಪುತ್ರಪ್ಪ ಬರೂಡೆ ಮನವಿ ಮಾಡಿದ್ದಾರೆ.

ಇದರಿಂದ ಕರ್ನಾಟಕದಲ್ಲಿ ಆದಿಬಣಜಿಗ ಜನ ಸಂಖ್ಯೆ ಎಷ್ಟಿದೆ ಎಂಬುವುದರ ನಿರ್ದಿಷ್ಟ ಹಾಗೂ ಖಚಿತ ಮಾಹಿತಿ ದೊರೆಯುತ್ತದೆ. ಆದ್ದ-ರಿಂದ ಸಮಾಜ ಬಾಂಧವರು ಜಾತಿ ಕಾಲಂ 8ರಲ್ಲಿ ಇದ್ದಂತೆ " ಆದಿಬಣಜಿಗ" ಎಂದು ಬರೆಯಿಸಬೇಕು ಎಂದು ಅವರು ತಿಳಿಸಿದ್ದಾರೆ.

# ಪಾಲಿಕೆ ವಿರೋಧ ಪಕ್ಷದ ನಾಯಕಿಯಾಗಿ ಶೋಭಾ ದೇಸಾಯಿ ಅಧಿಕಾರ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.30-ಮಹಾನಗರ ಪಾಲಿಕೆಯ ವಿರೋಧ ಪಕ್ಷದ ನಾಯಕರಾಗಿ 52ನೇ ವಾರ್ಡ್‌ನ ಪಾಲಿಕೆ ಸದಸ್ಯೆ ಶೋಭಾ ಗುರುರಾಜ ದೇಸಾಯಿ ಅವರು ಇಂದು ಅಧಿಕಾರ ಸ್ವೀಕರಿಸಿದರು.

ಆ ಮೂಲಕ ಪಾಲಿಕೆ ಮೇಯರ್, ಉಪಮೇಯರ್, ವಿರೋಧ ಪಕ್ಷದ ನಾಯಕ ಹುದ್ದೆಗಳು ಮಹಿಳೆಯರ ಪಾಲಾದಂತಾಗಿದೆ.



ಮಹಾನಗರ ಪಾಲಿಕೆ ಆಯುಕ್ತ ಶಿಂಧೆ ಅವಿನಾಶ್ ಸಂಜೀವನ್, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ, ಬಿಜೆಪಿ ನಗರಾಧ್ಯಕ್ಷ ಚಂದು ಪಾಟೀಲ ಸೇರಿದಂತೆ ಬಿಜೆಪಿ ಮುಖಂಡರು, ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ–ಕರ್ನಾಟಕ ಆಯ್ಕೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ–ಕರ್ನಾಟಕಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮ ಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಮಹಾತ್ಮ ಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ "ಅಸ್ಪೃಶ್ಯತೆ ನಿವಾರಣೆ","ಅಹಿಂಸೆ","ಮಹಿಳಾ ಸಬಲೀಕರಣ","ಗ್ರಾಮೀಣ ನೈರ್ಮಲ್ಯ", "ಮದ್ಯಪಾನ ವಿರೋಧಿ ನೀತಿ", "ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ", "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಏಳಿಗೆ"–ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.

ಅರ್ಜಿಗಳನ್ನು 2025ನೇ ಸೆಪ್ಟೆಂಬರ್ 19ರೊಳಗಾಗಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ. ನಂ. 17. ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು – 560001 ಅಥವಾ ಇ – ಮೇಲ್ ವಿಳಾಸುಟಿಜಿಂಡಿಟಚಿಣುಂಟಿಜು–ರಿಡಿಚಿತಿಚಿಡಿಧ@ರಿಟಚಿಟಿ.ಛಿಂಟ ಹಾಗೂ ಖುದ್ದಾಗಿ ಇಲಾಖೆಗೆ ಕಳುಹಿಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಸ್ಥೆಯು ಯಶಸ್ವಿಗೊಳ್ಳಲು ಅಲ್ಲಿನ ಕಾರ್ಯವೈಕರಿ ಪ್ರಮುಖ ಕಾರಣ :ಜಿಡಿ. ಥಾಮಸ್ ಕೆ ಪರಂಬಿಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಸಂಸ್ಥೆಯು ಯಶಸ್ವಿಯಾಗಲು ಅಲ್ಲಿ ಕಾರ್ಯನಿರ್ವಹಿಸುವ ಪ್ರಾಂಶುಪಾಲರಿಂದ ಪ್ರತಿಯೊಬ್ಬ ಸಿಬ್ಬಂದಿಯ ಪರಿಶ್ರಮ ಬಹುಮುಖ್ಯವಾಗಿದ್ದು ಪ್ರತಿಯೊಬ್ಬರ ಪರಿಶ್ರಮದಿಂದ ಮಾತ್ರ ಕಾರ್ಯ ಯಶಸ್ವಿ ಸಾಧ್ಯ ಎಂದು ಎಂ ಎಸ್ ಎಫ್ ಎಸ್ ಸಂಸ್ಥೆಯ ಮುಖ್ಯಸ್ಥರಾದ ಜಿಡಿ. ಥಾಮಸ್ ಕೆ ಪರಂಬಿಲ್ ಹೇಳಿದರು.

ಪಟ್ಟಣದ ಎಸ್ ಎಫ್ ಎಸ್ ಶಾಲೆಯ ಆಯೋಜಿಸಲಾಗಿದ್ದ ನೂತನ ಪದವಿಪೂರ್ವ ವಿದ್ಯಾಲಯದ ಪ್ರಾರಂಭೋತ್ಸವ ಹಾಗೂ ಕಟ್ಟಡದ ಉದ್ಘಾಟನೆ ಕಾರ್ಯಕ್ರಮವನ್ನ ಜಿಡಿ. ಥಾಮಸ್ ಪರಂಬಿಲ್ ನೆರವೇರಿಸಿ ಮಾತನಾಡುತ್ತಾ ಯಾವುದೇ ಸಂಸ್ಥೆಯು ಯಶಸ್ವಿಗೊಳ್ಳಲು ಅಲ್ಲಿನ ಕಾರ್ಯವೈಕರಿ ಪ್ರಮುಖ ಕಾರಣವಾಗಿದ್ದು ಪ್ರತಿಯೊಬ್ಬರ ಸಹಕಾರ ಉತ್ತಮ ಸೇವೆಯಿಂದ ಯಶಸ್ವಿ ಸಾಧ್ಯ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಒಳ್ಳೆಯ ಗುಣಮಟ್ಟದ ಶಿಕ್ಷಣ ಹಾಗೂ ಜ್ಞಾನ ನೀಡುವ ಉದ್ದೇಶವನ್ನು ಎಂ ಎಸ್ ಎಫ್ ಎಸ್ ಸಂಸ್ಥೆ ಹೊಂದಿದ್ದು, ಸಂತೆಯಲ್ಲಿ ಭರವಸೆಯ ಶಿಕ್ಷಣ, ಜ್ಞಾನ ಮತ್ತು ಸಂಸ್ಕಾರವನ್ನು ಜೀವನದಲ್ಲಿ ಕರಗತ ಮಾಡಿಕೊಳ್ಳುವಂತಹ ಶಿಕ್ಷಣ ನೀಡುವ ಅನುಭವಿ ಉಪನ್ಯಾಸಕರನ್ನು ಹೊಂದಿದ್ದು ಪಾಲಕರ ಕನಸನ್ನು ನನಸು ಮಾಡುವ ಜೀವನ ಶೈಲಿ ಕಟ್ಟಿಕೊಡುವ ಭರವಸೆಯನ್ನು ನೀಡುತ್ತೇನೆ ಎಂದು ಹೇಳಿದರು.

ಎಸ್ಎಫ್ಎಸ್ ಶಾಲೆ ಕೊಪ್ಪಳದ ಪ್ರಾಂಶುಪಾಲರಾದ ಜಿಡಿ. ಜಪಮಾಲೈ ಮಾತನಾಡಿ ಈ ಗ್ರಾಮೀಣ ಪ್ರದೇಶದಲ್ಲಿ 2001 ರಿಂದ ಎಂ ಎಸ್ ಎಫ್ ಎಸ್ ಸಮಾಜ ಸೇವೆ ಪ್ರಾರಂಭಗೊಂಡಿದ್ದು ಇಲ್ಲಿನ ಜನರ ಒತ್ತಾಯದ ಮೇರೆಗೆ 2002 ರಲ್ಲಿ 40 ವಿದ್ಯಾರ್ಥಿಗಳಿಂದ ಎಸ್ ಎಫ್ ಶಾಲೆ ಪ್ರಾರಂಭವಾಗಿದ್ದು ಇಂದು ಸಾವಿರ ತನಕ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿರುತ್ತವೆ. ಜೊತೆಗೆ ಪದವಿ ಪೂರ್ವ ಶಿಕ್ಷಣಕ್ಕೆ ಬೇರೆ ವಿದ್ಯಾರ್ಥಿಗಳು ಹೋಗುವುದನ್ನು ಗಮನಿಸಿ ಈಗ ಅದನ್ನು ಸಹ ಪ್ರಾರಂಭಿಸಿದ್ದು ಇಲ್ಲಿನ ಪ್ರತಿಭಾ ವಂತ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಿ ಕೊಡುವ ಉದ್ದೇಶ ನಮ್ಮದಾಗಿದೆ.

ಉನ್ನತ ಶಿಕ್ಷಣಕ್ಕಾಗಿ ವಿದ್ಯಾರ್ಥಿಗಳು ಪಾಲಕರಿಂದ ದೂರ ಹೋದಾಗ ದಾರಿ ತಪ್ಪುವ ಎಲ್ಲ ರೀತಿಯ ಆತಂಕಗಳು ಪಾಲಕರನ್ನು ಹೊಂದಿದ್ದು ಅಂತಹ ಆತಂಕ ತಪ್ಪಿಸಿ ಉತ್ತಮ ಮೌಲ್ಯ ಹಾಗೂ ಶಿಕ್ಷಣ ಒದಗಿಸುವುದೇ ಸಂಸ್ಥೆಯ ಪ್ರಮುಖ ಧ್ಯೇಯವಾಗಿದೆ ಎಂದು ಹೇಳಿದರು.


ಶಾಲೆಯ ಪ್ರಾಂಶುಪಾಲರಾದ ಜಿಡಿ. ಸಜ್ಜಿ ಜಾರ್ ಮಾತನಾಡಿ ಪ್ರೀತಿಯಿಂದ ಸೇವೆ ನೀಡುವ ಉದ್ದೇಶವನ್ನು ಸಂಸ್ಥೆ ಹೊಂದಿದ್ದು ಸಂಸ್ಥೆಯ ಮೇಲೆ ನಂಬಿಕೆ ಇಟ್ಟು ತಮ್ಮ ಮಕ್ಕಳನ್ನು ಇಲ್ಲಿ ದಾಖಲು ಮಾಡಿದ ಪಾಲಕರಿಗೆ ಧನ್ಯವಾದಗಳು ತಿಳಿಸುವುದಾಗಿ ಹೇಳುತ್ತಾ. ಸಂಸ್ಥೆಯ ಪ್ರತಿಯೊಬ್ಬ ಸಿಬ್ಬಂದಿಯು ಉತ್ತಮ ಕಾರ್ಯ ನಿರ್ವಹಣೆಯಿಂದ ಸಂಸ್ಥೆ ಒಳ್ಳೆಯ ಹೆಸರನ್ನು ಗಳಿಸಿದೆ ಆದ್ದರಿಂದ ಇಲ್ಲಿ ಸೇವೆ ಸಲ್ಲಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಲಾಗಿ ತಿಳಿಸಿದರು.

ಈ ವೇಳೆಯಲ್ಲಿ ಶಿಕ್ಷಣ ಇಲಾಖೆಯ ಬಿ ಆರ್ ಸಿ ಮಹೇಶ ಅಸೂಟಿ, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಲಲಿತಮ್ಮ ಯಡಿಯಾಪುರ, ಬಳಗೇರಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೌರಮ್ಮ ವಿರೂಪಾಕ್ಷಯ್ಯ ಕುರ್ತುಕೋಟಿ, ಸಿ ಆರ್ ಪಿ ಪೀರಸಾಬ್ ದಫೇದಾರ್, ಸಂಸ್ಥೆಯ ಪ್ರಮುಖರಾದ ಜಿಡಿ. ಇ.ಹೃದಯ ರಾಜ್, ಜಿಡಿ. ಬೆನ್ನಿ ಜಾಕರ್, ಜಿಡಿ. ಸಂತೋಷ್ ಕುಮಾರ್, ಜಿಡಿ. ಆರೋಗ್ಯ ರಾಜ್ ಸೇರಿದಂತೆ ಪಾಲಕರು, ವಿದ್ಯಾರ್ಥಿಗಳು ಹಾಗೂ ಇನ್ನಿತರರು ಪಾಲ್ಗೊಂಡಿದ್ದರು

# ವಿಭೂತಿಹಳ್ಳಿ ಸಮುದಾಯ ಆರೋಗ್ಯ ಕೇಂದ್ರ ಹೋಗುವ ದಾರಿ ಅದೋಗತಿ.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲೆ ಶಾಪುರ್ ತಾಲೂಕಿನ ಹೃದಯ ಭಾಗದಲ್ಲಿರುವ ವಿಭೂತಿಹಳ್ಳಿ ಸಮುದಾಯ ಆರೋಗ್ಯ ಕೇಂದ್ರ ಹೋಗುವ ದಾರಿ ಅದೋಗತಿಯಾಗಿದ್ದು. ರೋಗಿಗಳು ಸಮುದಾಯ ಆರೋಗ್ಯ ಕೇಂದ್ರಕ್ಕೆ ಹೋಗಬೇಕಾದರೆ ನರಳಾಡುವ ಪರಿಸ್ಥಿತಿ ಎದುರಾಗಿದ್ದು.



ಜನರಿಗೆ ಅನುಕೂಲವಾಗಲಿ ಎಂದು ಪ್ರತಿಯೊಂದು ಹೋಬಳಿ ಕೇಂದ್ರಕ್ಕೆ ಸಮುದಾಯ ಆರೋಗ್ಯ ಕೇಂದ್ರ ಸರ್ಕಾರ ಮಾಡಿದ್ದು ವಿಪರ್ಯಾಸ ಅಲ್ಲಿಗೆ ಹೋಗಲು ರಸ್ತೆ ಇರೋದು ದುರದೃಷ್ಟಕರ ಸಂಗತಿಯಾಗಿದ್ದು.

ಸರ್ಕಾರದ ಮಹತ್ವಕ್ಷೆ ಯೋಜನೆಯಾಗಿದ್ದು ಜನರಿಗೆ ಆರೋಗ್ಯದ ಬಹುಮುಖ್ಯ ಪಾತ್ರವಾಗಿದ್ದು ಅಲ್ಲಿಗೆ ನಡೆದು–ಕೊಂಡು ಹೋಗುವ ದಾರಿ ಕೆಸರು ಗದ್ದೆಗಳಿಂದ ತುಂಬಿತ್ತು ರೋಗಿಗಳು ಹೋಗೋದೇ ಹರಸಾಸಮಯವಾಗಿದ್ದು ಕೂಡಲೇ ಎಚ್ಚೆತ್ತುಕೊಂಡು ತಾಲೂಕಿನ ಶಾಸಕರು ಇತ್ತ ಗಮನಹರಿಸಿ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಜನರಿಗೆ ಅನು ಮಾಡಿ ಕೊಡುವಂತೆ ಸಾರ್ವಜನಿಕರ ಆಗ್ರಹವಾಗಿದೆ.



**ಕಲಬುರಗಿ: ಭಾರತ ಕಮ್ಯೂನಿಸ್ಟ್ ಪಕ್ಷದ 25 ನೇ ರಾಜ್ಯ ಸಮ್ಮೇಳನದ ಅಂಗವಾಗಿ ನಗರದಲ್ಲಿ ಶನಿವಾರ ಮೆರವಣಿಗೆ ನಡೆಯಿತು. (ಮಲ್ಲಮ್ಮ ನುಡಿ ಚಿತ್ರ)**

# ಸೆ.04 ರಂದು ಕಲ್ಯಾಣ ಕರ್ನಾಟಕ ಉತ್ಸವ ಆಚರಣೆ ಕುರಿತು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ಜಿಲ್ಲಾಡಳಿತ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಸೆ.17 ರಂದು ಕಲ್ಯಾಣ ಕರ್ನಾಟಕ ಉತ್ಸವ ಆಚರಣೆ ಕುರಿತಂತೆ ಚರ್ಚಿಸಲು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರ ಅಧ್ಯಕ್ಷತೆಯಲ್ಲಿ ಸೆ.04 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಜಿಲ್ಲಾ ಮಟ್ಟದ ಅಧಿಕಾರಿಗಳು ನಿಗದಿಪಡಿಸಿದ ಸಮಯಕ್ಕೆ ತಪ್ಪದೇ ಹಾಜರಿರಬೇಕು ಎಂದು ಜಿಲ್ಲಾಡಳಿತ ಪ್ರಕಟಣೆ ತಿಳಿಸಿದೆ.

# ಕಕರಸಾ ನಿಗಮ ಬಳ್ಳಾರಿ ವಿಭಾಗ: ಕಾರ್ಯಾಚರಣೆ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ಆಂಧ್ರಪ್ರದೇಶದ ಆದೋನಿ ಹಾಗೂ ಆದೋನಿ ಮೂಲಕ ಕಾರ್ಯಾಚರಣೆಯಾಗುವ ಕರಾರಸಾ ನಿಗಮದ ಸಾರಿಗೆಗಳ ಕಾರ್ಯಾಚರಣೆಯನ್ನು ಆ.31 ರಿಂದ ಆದೋನಿ ಎ.ಪಿ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ವಿಸ್ತರಣೆ ಮಾಡಲಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಳ್ಳಾರಿ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

ಕಕರಸಾ ನಿಗಮ, ಕರಾರಸಾ ನಿಗಮ ಮತ್ತು ವಾಕರಸಾ ಸಂಸ್ಥೆಯಿಂದ ಕಾರ್ಯಾಚರಣೆಯಾಗುವ ಮಂತ್ರಾಲಯ, ರಾಯಚೂರು, ಎಮ್ಮಿಗನೂರು, ಶ್ರೀಶೈಲಂ ವಯಾ ಆದೋನಿ ಹಾಗೂ ಆದೋನಿ ಸಾರಿಗೆಗಳ ಕಾರ್ಯಾಚರಣೆಯನ್ನು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಆದೋನಿ ಪಟ್ಟಣದ ಎ.ಪಿ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣಕ್ಕೆ ವಿಸ್ತರಣೆ ಮಾಡಲಾಗಿದೆ.

ಹಾಗೆಯೇ ಆದೋನಿ ಪಟ್ಟಣದಲ್ಲಿ ಪ್ರಯಾಣಿಕರು ಇಳಿಯಲು, ಹತ್ತಲು ಪ್ರಸ್ತುತ ನೀಡುತ್ತಿರುವ ನಿಲುಗಡೆಗಳೊಂದಿಗೆ ಹೆಚ್ಚುವರಿಯಾಗಿ ಆದೋನಿ ಪಟ್ಟಣದ ನಿರ್ಮಲ್ ಟಾಕೀಸ್ ಹತ್ತಿರ, ಸರ್ಕಾರಿ ಜನರಲ್ ಆಸ್ಪತ್ರೆ ಹತ್ತಿರ ಹತ್ತಲು, ಇಳಿಯಲು ಪ್ರಯಾಣಿಕರ ಅನುಕೂಲಕ್ಕಾಗಿ ನಿಲುಗಡೆಗಳನ್ನು ಕಲ್ಪಿಸಲಾಗಿದೆ.

ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆ ಸೇವೆಯನ್ನು ಸದುಪಯೋಗಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಕಾರ್ಮಿಕ ಇಲಾಖೆಯಿಂದ ವಿವಿಧೆಡೆ ದಾಳಿ: ಮೂವರು ಬಾಲಕಾರ್ಮಿಕ ಮಕ್ಕಳ ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ನಿರ್ದೇಶನ ಮೇರೆಗೆ ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಸಂಡೂರು ತಾಲ್ಲೂಕಿನ ತೋರಣಗಲ್ಲು ರೈಲ್ವೇ ನಿಲ್ದಾಣ, ಜಿಂದಾಲ್ ಮೊದಲನೇ ಗೇಟ್ ಮಂಭಾಗ ಹಾಗೂ ಹೊಸಪೇಟೆ ಬೈಪಾಸ್ ರಸ್ತೆಯ ಮುಂತಾದ ಉದ್ದಿಮೆಗಳ ಮೇಲೆ ಟಾಸ್ಕ್ ಫೋರ್ಸ್ ಸಮಿತಿ ಮೂಲಕ ಅಕಸ್ಮಿಕ ದಾಳಿ ನಡೆಸಿ ಮೂವರು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.

ತೋರಣಗಲ್‌ನ ನಾಡಕಚೇರಿಯಲ್ಲಿ ಶನಿವಾರ ಸಂಡೂರು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಈ ಬಾಲಕಾರ್ಮಿಕರ ಆಕಸ್ಮಿಕ ದಾಳಿ ಕಾರ್ಯಕ್ರಮ ಕೈಗೊಳ್ಳಲಾಗಿದ್ದು, ವಶಕ್ಕೆ ಪಡೆದುಕೊಂಡು ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿಯೇ ಪಡೆದುಕೊಳ್ಳಲಾಯಿತು. ಆ ಮಕ್ಕಳನ್ನು ಶಿಕ್ಷಣ ಇಲಾಖೆ ಹಾಗೂ ಪೋಷಕರ ವಶಕ್ಕೆ ಒಪ್ಪಿಸಲಾಯಿತು.

ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್ ನೀಡುವುದರ ಮೂಲಕ ಬಾಲಕಾರ್ಮಿಕ ಪದ್ಧತಿ ಕುರಿತು ಜಾಗೃತಿ ಜಾಗೃತಿ ಮೂಡಿಸಲಾಯಿತು.

ಈ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಸಂಡೂರು ತಹಶೀಲ್ದಾರ ಅನೀಲ್ ಕುಮಾರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಎಸ್.ಖೈನೂರು, ಸಂಡೂರು ಕಾರ್ಮಿಕ ನಿರೀಕ್ಷಕ ಮಂಜುನಾಥ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವೀರಭದ್ರಯ್ಯ ಹಿರೇಮಠ, ತೋರಣಗಲ್ಲು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಕಲ್ಲಪ್ಪ, ಕೈಗಾರಿಕಾ ವಿಸ್ತರಣಾಧಿಕಾರಿ ಚೈತ್ರ ಎನ್.ಕೆ., ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಕಂದಾಯ ಅಧಿಕಾರಿ ಗಣೇಶ್, ರೀಚ್ ಸಂಸ್ಥೆಯ ಸಂಯೋಜಕ ಹನುಮಂತಪ್ಪ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಸೆ.02 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 110/11ಕೆವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳುತ್ತಿರುವುದರಿಂದ ಸೆ.02 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಎಫ್–23 ಮತ್ತು ಎಫ್–24 ರ ವ್ಯಾಪ್ತಿಯ ನಗರದ ಹೆಚ್.ಆರ್.ಗವಿಯಪ್ಪ ವೃತ್ತ, ತೇರು ಬೀದಿ, ಜೈನ್ ಮಾರ್ಕೆಟ್, ಕಾಳಮ್ಮ ರಸ್ತೆ, ಲಾರಿ ಟರ್ಮಿನಲ್, ರಂಗ ಮಂದಿರ, ಹೊಸ ಬಸ್ ನಿಲ್ದಾಣ, ಬಂಡಿಮೊಟ್, ಗೊಲ್ಲರಹಟ್ಟಿ, ಮಾರುತಿ ಕಾಲೋನಿ, ಬೆಂಗಳೂರು ರಸ್ತೆ, ಬಾಪೂಜಿ ನಗರ, ಕುರಿ ಕಮೇಲ, ಕಮೇಲ ರಸ್ತೆ, ಮೃತ್ಯುಂಜಯ ನಗರ, ಬೆಂಕಿ ಮಾರೆಮ್ಮ ಗುಡಿ ಹತ್ತಿರ, ಬಾಲಾಂಜನೇಯ ಗುಡಿ ರಸ್ತೆ, ಪಿ.ಕೆ.ಸ್ಟ್ರೀಟ್, ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮತ್ತು ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯ ಲೇಖಕರ ಪುಸ್ತಕಗಳನ್ನು ಶೀಘ್ರ ಖರೀದಿಸುವಂತೆ ಜಿಲ್ಲಾಧಿಕಾರಿಗೆ ಮನವಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಜಿಲ್ಲಾ ಕೇಂದ್ರ ಗ್ರಂಥಾಲಯ ಅಧಿಕಾರಿಗಳು, ಉಲ್ಲೇಖ ಎರಡರಂತೆ ಪತ್ರಿಕಾ ಪ್ರಕಟಣೆ ನೀಡಿ ಕಲ್ಯಾಣ ಕರ್ನಾಟಕ ಪ್ರದೇಶದ ಕೊಪ್ಪಳ ಜಿಲ್ಲೆಯ ಲೇಖಕರಿಂದ ಪುಸ್ತಕ ಖರೀದಿಗಾಗಿ ಅರ್ಜಿಯನ್ನು ಆಹ್ವಾನಿಸಿದ್ದರು. ಅದರ ಅನುಸಾರ ಜಿಲ್ಲೆಯ ಲೇಖಕರು ಪುಸ್ತಕ ಖರೀದಿಗಾಗಿ ಅರ್ಜಿಯನ್ನು ಕಳೆದ ಆರು ತಿಂಗಳ ಹಿಂದೆ ಸಲ್ಲಿಸಿದ್ದರು.

2018ರಿಂದ 2024ನೇ ಸಾಲಿನವರೆಗೆ ಪುಸ್ತಕಗಳನ್ನು ಖರೀದಿ ಮಾಡಿರುವುದಿಲ್ಲ. ಈಗಾಗಲೇ ಅರ್ಹ ಲೇಖಕರಿಂದ ಕೆಕೆಆರ್‌ಡಿಬಿ ಅನುದಾನದಲ್ಲಿ ಪುಸ್ತಕ ಖರೀದಿಗಾಗಿ ಘೋಷಣ ಪತ್ರಗಳನ್ನು ಆಯ್ಕೆಯಾದ ಲೇಖ–ಕರಿಂದ ಪಡೆಯಲಾಗಿದೆ. ಕ್ರಿಯಾ ಯೋಜನೆಯ ಕಾರಣದಿಂದಾಗಿ ಇದುವರೆಗೂ ಪುಸ್ತಕ ಖರೀದಿಸುವ ಪ್ರಕ್ರಿಯೆ ಆರಂಭ ಗೊಂಡಿಲ್ಲ ಈಗಾಗಲೇ ಯಾದಗಿರಿ ಜಿಲ್ಲೆಯಲ್ಲಿ ಪ್ರಕ್ರಿಯೆ ಪ್ರಾರಂಭವಾಗಿದ್ದು ನಮ್ಮ ಜಿಲ್ಲೆಯಲ್ಲಿಯೂ ಪ್ರಾರಂಭಗೊಳಿಸಿ ಪುಸ್ತಕ ಖರೀದಿಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಹೈದ್ರಾಬಾದ್ ಕರ್ನಾಟಕ ಪ್ರಕಾಶಕರ ಹಾಗೂ ಮಾರಾಟಗಾರರ ಮುದ್ರಕರ ಸಂಘದ ಸಂಚಾಲಕರಾದ ಮಹೇಶಬಾಬು ಸುರ್ವೆ ಮತ್ತು ಉಪಾಧ್ಯಕ್ಷರಾದ ಜಿ.ಎಸ್.ಗೋನಾಳ ರವರು ಕೊಪ್ಪಳ ಜಿಲ್ಲೆಯ ಲೇಖಕರ ಪರವಾಗಿ ಜಿಲ್ಲಾಧಿಕಾರಿಗಳಾದ ಸುರೇಶ ಬಿ. ಇಟ್ನಾಳ್ ಇವರಿಗೆ ಮನವಿ ಸಲ್ಲಿಸಿ ಶೀಘ್ರವಾಗಿ ಜಿಲ್ಲೆಯ ಲೇಖಕರು, ಪ್ರಕಾಶಕರಿಗೆ ಅನಕೂಲ ಮಾಡಿಕೊಡಬೇಕೆಂದು ವಿನಂತಿಸಿದ್ದಾರೆ.

# ಆ.31 ರಂದು ಒಂದು ದಿನದ ಪುನಶ್ಚೇತನ ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ ಬೆಂಗಳೂರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಮತ್ತು ಕೊಪ್ಪಳ ಸಹಯೋಗದೊಂದಿಗೆ ಆ.31 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯ ಜಿಲ್ಲಾ ನ್ಯಾಯಾಲಯ ಸಂಕೀರ್ಣದ 1ನೇ ಮಹಡಿಯ ಸಮ್ಮೇಳನ ಸಭಾಂಗಣದಲ್ಲಿ "ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳ ನ್ಯಾಯಾಂಗ ಅಧಿಕಾರಿಗಳು ಮತ್ತು ನ್ಯಾಯಾಧೀಶರಿಗೆ ಒಂದು ದಿನದ ಪುನಶ್ಚೇತನ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಹೈಕೋರ್ಟ್‌ನ ನ್ಯಾಯಾಧೀಶರು ಹಾಗೂ ಬಳ್ಳಾರಿ ಜಿಲ್ಲೆಯ ಆಡಳಿತ ನ್ಯಾಯಾಧೀಶರೂ ಆಗಿರುವ ನ್ಯಾಯಮೂರ್ತಿ ಆರ್. ನಟರಾಜ್ ಅವರು ವರ್ಚುವಲ್ ಮೂಲಕ ಕಾರ್ಯಕ್ರಮ ಉದ್ಘಾಟಿಸುವರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ. ಶಾಂತಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕೊಪ್ಪಳ ಜಿಲ್ಲೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಚಂದ್ರಶೇಖರ್.ಸಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ ಬೆಂಗಳೂರಿನ ತರಬೇತುದಾರರಾದ ಗೀತಾದೇವಿ ಎಂ.ಪಾಪಣ್ಣ, ಮಧ್ಯಸ್ಥಿಕೆದಾರರಾದ ಜಯಕೀರ್ತಿ ಎಂ.ಸಿ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು.

ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಜೇಶ್ ಎನ್. ಹೊಸಮನೆ, ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾಂತೇಶ್ ಎಸ್.ದರಗಡ್ ಸೇರಿದಂತೆ ಇತರೆ ನ್ಯಾಯಾಧೀಶರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ನೋಂದಣಿ ಮತ್ತು ಮುದ್ರಾಂಕ ಶುಲ್ಕ ಪರಿಷ್ಕರಣೆ ನೆರೆ ರಾಜ್ಯಗಳ ದರಗಳೊಂದಿಗೆ ಸಮೀಕರಿಸಿ ಪರಿಷ್ಕರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.30–ಕರ್ನಾಟಕ ರಾಜ್ಯ ಸರ್ಕಾರವು ಆಗಸ್ಟ್ 31 ರಿಂದ ಜಾರಿಗೊಳಿಸುತ್ತಿರುವ ಸ್ಥಿರಾಸ್ತಿ ಮೇಲಿನ ವ್ಯವಹಾರಗಳ ದಸ್ತಾವೇಜುಗಳಿಗೆ ವಿಧಿಸುತ್ತಿರುವ ನೋಂದಣಿ ಮತ್ತು ಮುದ್ರಾಂಕ ಶುಲ್ಕವು ನೆರೆಹೊರೆಯ ರಾಜ್ಯಗಳಲ್ಲಿರುವ ದರಗಳಿಗಿಂತ ಪ್ರಸ್ತುತ ಕಡಿಮೆ ಶುಲ್ಕ ಇದ್ದು, ಅದನ್ನು ಇತರೆ ರಾಜ್ಯಗಳ ಶುಲ್ಕಗಳೊಂದಿಗೆ ಸಮೀಕರಣ ಮಾಡಿ ಪರಿಷ್ಕರಿಸಲಾಗುತ್ತಿದೆ ಎಂದು ನೋಂದಣಿ ಮತ್ತು ಮುದ್ರಾಂಕ ಶುಲ್ಕ ಆಯುಕ್ತ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಮುದ್ರಾಂಕ, ನೋಂದಣಿ ಹಾಗೂ ಇತರೆ ಸೆಸ್ ಸೇರಿ ಕರ್ನಾಟಕ ರಾಜ್ಯವು ಶೇ.6.6 ರಷ್ಟು ವಿಧಿಸುತ್ತಿತ್ತು. ಇದೇ ಅವಧಿಯಲ್ಲಿ ಈ ಶುಲ್ಕವು ತಮಿಳುನಾಡು ರಾಜ್ಯದಲ್ಲಿ ಶೇ.9, ಕೇರಳ ಶೇ.10, ಆಂಧ್ರಪ್ರದೇಶ ಶೇ.7.5, ತೆಲಂಗಾಣ ರಾಜ್ಯಗಳು ಶೇ.7.5 ರಷ್ಟು ಶುಲ್ಕ ಆಕರಿಸುತ್ತಿವೆ.

ದಸ್ತಾವೇಜುಗಳ ಮೇಲಿನ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕಗಳನ್ನು ಇತರೆ ರಾಜ್ಯಗಳೊಂದಿಗೆ ಸಮೀಕರಿಸಿಗೊಳ್ಳಲು (ಖಚಿಣುಂ–ಟಿಚಿಟುಚಿಣುಂಟಿ) ಆಡಳಿತಾತ್ಮಕ ಪ್ರಕ್ರಿಯೆಗಳನ್ನು ಬಲಪಡಿಸಲು ಮತ್ತು ನಾಗರಿಕರಿಗೆ ಉತ್ತಮ ಹಾಗೂ ಪರಿಣಾಮಕಾರಿ ಸೇವೆಯನ್ನು ನೀಡಲು ರಾಜ್ಯ ಸರ್ಕಾರವು ಆ.31 ರಿಂದ ರಿಂದ ಜಾರಿಗೆ ಬರುವಂತೆ ನೋಂದಣಿ ಶುಲ್ಕವನ್ನು ಶೇ.1ರಿಂದ ಶೇ.2 ರಷ್ಟು ಪರಿಷ್ಕರಿಸಿದೆ.

ಪರಿಷ್ಕೃತ ನೋಂದಣಿ ಶುಲ್ಕವನ್ನು ಸುಗಮವಾಗಿ ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಪಾವತಿಸಲು ಹಿಂದಿನ ನೋಂದಣಿ ಶುಲ್ಕವನ್ನು ಪಾವತಿಸಿ ಈಗಾಗಲೇ ದಸ್ತಾವೇಜುಗಳ ನೋಂದಣಿಗೆ ಅಪಾಯಿಂಟ್ ಮೆಂಟ್ ಪಡೆದಿರುವವರು ಅಥವಾ ಶುಲ್ಕವನ್ನು ಪಾವತಿಸಿ ಅಪಾಯಿಂಟ್ ಮೆಂಟ್ ಪಡೆಯದಿರುವವರು, ವ್ಯತ್ಯಾಸದ ಮೊತ್ತವನ್ನು ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಪಾವತಿಸಬೇಕು.

ಮೊದಲು ಬಳಸಿದ ಲಾಗಿನ್ ಮೂಲಕವೇ ಈ ಪಾವತಿಯನ್ನು ಮಾಡಬೇಕು. ಅರ್ಜಿದಾರರಿಗೆ ನೆರವಾಗುವ ದೃಷ್ಟಿಯಿಂದ ಅಗತ್ಯ ಸೂಚನೆಗಳನ್ನು ಒಳಗೊಂಡ ಎಸ್ಎಂಎಸ್ ನೇರವಾಗಿ ಅವರ ನೋಂದಾಯಿತ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುವುದು.

ಈಗಾಗಲೇ ದಸ್ತಾವೇಜುಗಳ ನೋಂದಣಿಗೆ ಸಲ್ಲಿಸಲಾಗಿರುವ ಹಾಗೂ ಪರಿಶೀಲನೆಯಲ್ಲಿರುವ ದಸ್ತಾವೇಜುಗಳಿಗೆ ನೋಂದಣಿ ಶುಲ್ಕವನ್ನು ಮರು ಲೆಕ್ಕ ಹಾಕಲಾಗುವುದು ಮತ್ತು ಪರಿಷ್ಕೃತ ಶೇ.2 ರಂತೆ ನೋಂದಣಿ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ಈ ವರ್ಗದ ಅರ್ಜಿದಾರರಿಗೆ ಪಾವತಿಯ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲು ಪರಿಷ್ಕೃತ ನೋಂದಣಿ ಶುಲ್ಕದ ವಿವರವನ್ನು ತಿಳಿಸಲಾಗುವುದು.

ಇಲಾಖೆಯು ದಸ್ತಾವೇಜುಗಳ ನೋಂದಣಿ ಪ್ರಕ್ರಿಯೆಯಲ್ಲಿ ವಿಳಂಬವಾಗುವುದನ್ನು ತಪ್ಪಿಸಲು ಎಲ್ಲಾ ಅರ್ಜಿದಾರರಿಗೆ ಮೇಲ್ಕಾಣಿಸಿದ ನವೀಕರಿಸಿದ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹಂತಹಂತವಾಗಿ ಅನುಸರಿಸಬಹುದಾದ ವಿವರವಾದ ಸೂಚನೆಗಳನ್ನು ಇಲಾಖೆಯ ಅಧಿಕೃತ ಪೋರ್ಟಲ್‌ನಲ್ಲಿ ಲಭ್ಯವಾಗುವಂತೆ ಕಲ್ಪಿಸಲಾಗುವುದು ಎಂದು ನೋಂದಣಿ ಮತ್ತು ಮುದ್ರಾಂಕ ಶುಲ್ಕ ಆಯುಕ್ತ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

# ಗೌರಿ–ಗಣೇಶ ಹಬ್ಬ: ಜಿಲ್ಲೆಯಾದ್ಯಂತ ಸೆ.6 ರವರೆಗೆ ಮದ್ಯ ಮಾರಾಟ ನಿಷೇಧ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : 2025ನೇ ಸಾಲಿನ ಗೌರಿ–ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳ ಆಚರಣೆ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಹಾಗೂ ಕಾನೂನು ಸುವ್ಯವಸ್ಥೆ, ಶಾಂತಿ ಪಾಲನೆಗಾಗಿ ಮತ್ತು ಸಾರ್ವಜನಿಕರ ಹಿತಾಸಕ್ತಿ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯಾದ್ಯಂತ ಕರ್ನಾಟಕ ಅಬಕಾರಿ ಕಾಯ್ದೆ–1965 ರ ಕಲಂ 21 ರನ್ವಯ ಸೆಪ್ಟೆಂಬರ್ 6 ರವರೆಗೆ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ



ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಆಗಸ್ಟ್ 31 ರಂದು 5ನೇ ದಿನದ ಗಣೇಶ ಮೂರ್ತಿ ವಿಸರ್ಜನೆ, ಸೆಪ್ಟೆಂಬರ್ 2 ರಂದು 7ನೇ ದಿನದ ಗಣೇಶ ಮೂರ್ತಿ ವಿಸರ್ಜನೆ, ಸೆ.5 ರಂದು ಈದ್–ಮಿಲಾದ್ ಹಬ್ಬದ ಆಚರಣೆ ಹಾಗೂ ಸೆ.6 ರಂದು 11ನೇ ದಿನದ ಗಣೇಶ ಮೂರ್ತಿ ವಿಸರ್ಜನೆ ಇರುವುದರಿಂದ ಆಯಾ ದಿನಗಳಂದು ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 11 ಗಂಟೆಯವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿಸಲಾಗಿದೆ.

ಈ ವಿಷಯವಾಗಿ ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿ, ಅದರಲ್ಲಿ ಆರಕ್ಷಕರ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ವೃತ್ತ ನಿರೀಕ್ಷಕರು ಕಾರ್ಯನಿರ್ವಹಿಸಲು ಆದೇಶಿಸಿದೆ. ಈ ಆದೇಶವನ್ನು ಅನುಷ್ಠಾನಗೊಳಿಸುವಲ್ಲಿ ನಿರ್ಲಕ್ಷತನ ತೋರಿದವರ ವಿರುದ್ಧ ನಿಯಮಾನುಸಾರ ಕಾನೂನು ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ವಸತಿ ಶಾಲೆಗೆ ಕಾರ್ಯನಿರ್ವಾಹಕ ನಿರ್ದೇಶಕರಾದ ಕಾಂತರಾಜು ಬೇಟಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ನಗರದಲ್ಲಿ ಇರುವ ಅಂಬೇಡ್ಕರ್ ವಸತಿ ಶಾಲೆಗೆ ಶನಿವಾರದಂದು ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ನಿರ್ದೇಶಕರಾದ ಕಾಂತರಾಜು ಪಿ.ಎಸ್.ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಶಹಾಪುರ ವಸತಿ ಶಾಲೆಯೊಂದರ ಶೌಚಾಲಯದಲ್ಲಿ 9ನೇ ತರಗತಿ ವಿದ್ಯಾರ್ಥಿನಿ ಗಂಡು ಮಗುವಿಗೆ ಜನ್ಮ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಿಂದ ಆಗಮಿಸಿದ ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ನಿರ್ದೇಶಕರಾದ ಕಾಂತರಾಜು ಪಿ.ಎಸ್ ಅವರು ಶಹಾಪುರ ನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ವಸತಿ ನಿಲಯಕ್ಕೆ ಭೇಟಿ ನೀಡಿ, 9ನೇ ತರಗತಿ ವಿದ್ಯಾರ್ಥಿಯ ಹೆರಿಗೆಗೆ ಸಂಬಂಧಿಸಿದಂತೆ ಮಾಹಿತಿ ಪಡೆದುಕೊಂಡು, ಈ ತನಿಖೆಯನ್ನು ಚುರುಕುಗೊಳಿಸಲು ನಿವೃತ್ತ ನ್ಯಾಯಾಧೀಶರನ್ನು ನೇಮಿಸಿ, ಸೂಕ್ತ ನ್ಯಾಯ ದೊರಕಿಸಿ ಭರವಸೆ ನೀಡಿದರು,. ಯಾದಗಿರಿ ಹೋಗುವ ಮಾರ್ಗದಲ್ಲಿ ಇರುವ ಬೇವಿನಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿದರು

ನೀಡಿ ಮಕ್ಕಳ ಶಿಕ್ಷಣಕ್ಕೆ ತೆ–ೂಂದರೆಯಾಗದಂತೆ ಶಿಕ್ಷಕರು ನಿಗಾ ವಹಿಸಬೇಕು, ಅಲ್ಲದೆ ಅವರ ಆರೋಗ್ಯದ ಮತ್ತು ಚಲನವಲನ ಕಡೆ ಗಮನಹರಿಸಬೇಕು ಎಂದು ಸಲಹೆ ನೀಡಿದರು, ನಂತರ ವಿವಿಧ ಶಾಲಾ ಕೊಠಡಿಗಳಿಗೆ, ವಸತಿನಿಲಯಗಳಿಗೆ, ಭೇಟಿ ನೀಡಿ ಪರಿಶೀಲಿಸಿದರು. ಶಿಕ್ಷಕರಿಗೆ ಹೆಚ್ಚಿನ ಆಸಕ್ತಿ ವಹಿಸಿ ಮಕ್ಕಳಿಗೆ ವಿದ್ಯಾದಾನ ಮಾಡಿ ವಿದ್ಯಾರ್ಥಿಗಳ ಸುಧಾರಣೆಗಾಗಿ ಹೆಚ್ಚಿನ ಆದ್ಯತೆ ನೀಡಿ ಫಲಿತಾಂಶ ಗುಣಮಟ್ಟದಿಂದ ಕೂಡಿರಬೇಕು ಯಾವುದೇ ಮಕ್ಕಳಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಅವರು ನಿಮ್ಮ ಮನೆಯ ಮಕ್ಕಳಿದ್ದಂತೆ ಎಂದು ಹೇಳಿದರು ಮತ್ತು ಮಕ್ಕಳಿಗೂ ವಸತಿ ಶಾಲೆಗಳು ನಿಮ್ಮ ಮನೆಯ ಆಸ್ತಿ ಇದ್ದಂತೆ ಅದನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

*ಇದೆ ಸಂದರ್ಭದಲ್ಲಿ ದೈಹಿಕ ಶಿಕ್ಷಕರಾದ ಶ್ರೀಧರ್ ಅವರನ್ನು ಯಾಕೆ ಅಮಾನತು ಮಾಡಿದ್ದೀರಾ ಅವರು ಆ ಶಾಲೆಯಿಂದ ವರ್ಗಾವಣೆಯಾಗಿ ಎರಡು ತಿಂಗಳು ಗತಿಸಿದರು ಅವರನ್ನು ಈ ಪ್ರಕರಣದಲ್ಲಿ ಸೇರಿಸಿ ಅಮಾನತ್ತು ಮಾಡಿದ್ದು ಎಷ್ಟು ಸರಿ ಎಂದು ಪ್ರಶ್ನಿಸಿದರು ಇದಕ್ಕೆ ಉತ್ತರಿಸಿದ ಕಾರ್ಯನಿರ್ವಾಹಕ ನಿರ್ದೇಶಕರು ಅವರಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಶ್ರೀಧರ್ ಗೋಟೂರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಚನ್ನಬಸಪ್ಪ, ಪರಿಶಿಷ್ಟ ಪಂಗಡ ಉಪನಿರ್ದೇಶಕರಾದ ಸಿದ್ದಣ್ಣ ಅಣಬಿ, ಶಾಲೆಯ ಪ್ರಾಂಶುಪಾಲ ಶ್ರೀಶೈಲ ತಳವಾರ ದೈಹಿಕ ಶಿಕ್ಷಣ ಶಿಕ್ಷಕರಾದ ಪ್ರಭುಗೌಡ ಮಾಡಗಿ, ನಿಲಯಪಾಲಕರಾದ ಮಿರಾನಲಿ ಶೇಕ್, ವಿರುಪಾಕ್ಷಯ್ಯ ಹಿರೇಮಠ, ಸೇರಿದಂತೆ ಶಾಲೆಯ ಸಿಬ್ಬಂದಿಗಳು ಇನ್ನಿತರರು ಹಾಜರಿದ್ದರು.

## ಸ್ಪರ್ಧಾತ್ಮಕ ಪರೀಕ್ಷೆಗೆ ಇಂಗ್ಲೀಷ್ ಭಾಷಾಜ್ಞಾನ ಪೂರಕ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ಯುವಕರು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಮಾಡಿಕೊಳ್ಳಬೇಕಾದರೆ ಇಂಗ್ಲೀಷ್ ಭಾಷಾಜ್ಞಾನಸಂಪಾದನೆಮಾಡಿಕೊಳ್ಳಬೇಕು ಎಂದುಪ್ರಾಚಾರ್ಯಡಾ.ಅರುಣಕುಮಾರ ಗಾಳಿ ಹೇಳಿದರು.

ಬಾಗಲಕೋಟೆ ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯೂಎಸಿ ಹಾಗೂ ಇಂಗ್ಲೀಷ್ ವಿಭಾಗದ ಸಹಯೋಗದಲ್ಲಿ ಆಯೋಜಿಸಿದ್ದ 30 ದಿನಗಳ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇಂಗ್ಲೀಷ್ ಸರ್ಟೀಫಿಕೇಟ್ ಕೋರ್ಸ್ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ವಿವಿಧ ಉನ್ನತ ಹುದ್ದೆಗಳಿಗೆ ಕರ್ನಾಟಕದಿಂದ ಸ್ಪರ್ಧಿಸುವವರ ಸಂಖ್ಯೆ ತುಂಬಾ ಕಡಿಮೆಯಿದೆ. ಇದಕ್ಕೆ ನಮ್ಮಲ್ಲಿರುವ ಇಂಗ್ಲೀಷ್ ಭಾಷಾಜ್ಞಾನದ ಕೊರತೆಯೇ ಕಾರಣ. ಇದನ್ನು ಹೋಗಲಾಡಿಸಲು ವಿದ್ಯಾರ್ಥಿಗಳು ಇಂಗ್ಲೀಷ್ ಭಾಷೆಯ ಜ್ಞಾನ ಅರಿತುಕೊಂಡರೆ ಐ.ಎ.ಎಸ್, ಐ.ಪಿ.ಎಸ್ ಸೇರಿದಂತೆ ವಿವಿಧ ಉನ್ನತ ಹುದ್ದೆಗಳ ಪರೀಕ್ಷೆಯಲ್ಲಿ ಯಶಸ್ವಿಯಾಗಲು ಸಾಧ್ಯವಾಗುತ್ತದೆ ಎಂದು ಡಾ.ಗಾಳಿ ಹೇಳಿದರು.

ಇಂಗ್ಲೀಷ್ ವಿಭಾಗದ ಮುಖ್ಯಸ್ಥ ಶಿವಶಂಕರ ಪ್ರಸಾದ ಮಾತನಾಡಿ, ಪದವಿ ಕಲಿಯುವ ಹಂತದಲ್ಲಿ ವಿದ್ಯಾರ್ಥಿಗಳು ಇಂಗ್ಲೀಷ್ ಪದಸಂಪತ್ತನ್ನು ವೃದ್ಧಿಸಿಕೊಳ್ಳಬೇಕು. ಇಂಗ್ಲೀಷ್ ವ್ಯಾಕರಣದ ನಿಯಮಗಳನ್ನು ಅರ್ಥ ಮಾಡಿಕೊಂಡು ಸರಿಯಾದ ಭಾಷಾ ಪ್ರಯೋಗ ರೂಢಿಸಿಕೊಂಡಲ್ಲಿ ಸ್ಪರ್ಧಾತ್ಮಕ ಜಗತ್ತಿನಲ್ಲಿ ಗುರಿ ಸಾಧಿಸಲು ಸಾಧ್ಯವಾಗುತ್ತದೆ ಎಂದರು.

ಪ್ರೊ.ಸಂಪತ್ ಲಮಾಣಿ ಮಾತನಾಡಿ, ವಿದ್ಯಾರ್ಥಿಗಳು ಸರ್ಟಿಫಿಕೇಟ್ ಕೋರ್ಸ್‌ಗಳಲ್ಲಿ ಆಸಕ್ತಿಯಿಂದ ಭಾಗವಹಿಸುವದನ್ನು ಕಲಿಯಬೇಕು. ಈ ತರಬೇತಿಯಲ್ಲಿ ಪಡೆದ ಜ್ಞಾನವು ಮುಂಬರುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲವಾಗುತ್ತದೆ ಎಂದರು.

ಐಕ್ಯೂಎಸಿ ಸಂಚಾಲಕ ಡಾ.ಬಸವರಾಜ ಬೀಳಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಸಂಭ್ರಮದಿ ಜರುಗಿದ ಗಿರಿಮಠದ ಜಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಶ್ರೀ ಹೊಳೆ ಹುಚ್ಚೇಶ್ವರ ಸಂಸ್ಥಾನಮಠದಗಿರಿಮಠದರಥೋತ್ಸವ ಗುರುವಾರ ಸಾವಿರಾರು ಜನ ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ಜರುಗಿತು.

ಕಮತಗಿ–ಕೋಟೆಕೆಲ್ಲ ಹೊಳೆ ಹುಚ್ಚೇಶ್ವರ ಸಂಸ್ಥಾನ ಮಠದ ಹುಚ್ಚೇಶ್ವರ ಸ್ವಾಮೀಜಿಯವರ ನೇತೃತ್ವದಲ್ಲಿ

ಬೆಳಗ್ಗೆ ಗಿರಿಮಠದ ಕತೃಗದ್ದಿಗೆಗೆ ರುದ್ರಾಭಿಷೇಕ ನಡೆಯಿತು. ಗದ್ದುಗೆಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ನಂತರ ಕಳಸದ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆಯಿತು.

ಸಾಯಂಕಾಲ ಪಟ್ಟಣದ ಹೊರವಲಯದ ಬೆಟ್ಟದಲ್ಲಿರುವ ಗಿರಿಮಠದಲ್ಲಿ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ರಥೋತ್ಸವ ಜರುಗಿತು. ರಥಕ್ಕೆ ಭಕ್ತರು ಉತ್ತತ್ತಿ, ಬಾಳೆಹಣ್ಣು, ಲಿಂಬೆಹಣ್ಣು ಎಸೆದು ಭಕ್ತಿ ತೋರಿದರು.

ಕಮತಗಿಯ ಹುಚ್ಚೇಶ್ವರ ಸ್ವಾಮೀಜಿ, ಮುನವಳ್ಳಿಯ ಮುರುಘರಾಜೇಂದ್ರ ಸ್ವಾಮೀಜಿ, ಕುಂದರಗಿಯ ಅಮರಸಿದ್ದೇಶ್ವರ ಸ್ವಾಮೀಜಿ, ಕಮತಗಿಯ ಶಿವಕುಮಾರ ಸ್ವಾಮೀಜಿ ಸಾನಿಧ್ಯವಹಿಸಿದ್ದರು. ಕಮತಗಿ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳ ಭಕ್ತರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು.

## ಮೆಡಿಕಲ್ ಕಾಲೇಜಿನಲ್ಲಿ ನಾಳೆ ಓಣಂ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ನಗರದ ಬಿವಿವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ಆವರಣದಲ್ಲಿ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಕೇರಳ ಮೂಲದ ವಿದ್ಯಾರ್ಥಿಗಳಿಂದ ಸೆಪ್ಟಂಬರ್ 1 ರಂದು ಓಣಂ ಉತ್ಸವ ಜರುಗಲಿದೆ.

ಸೋಮವಾರ ಬೆಳಿಗ್ಗೆ 9 ಗಂಟೆಗೆ ಬ.ವಿ.ವ.ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ. ಉತ್ಸವದಲ್ಲಿ ಕೇರಳದಿಂದ ಆಗಮಿಸಲಿರುವ ಕೇರಳದ ಸಾಂಪ್ರದಾಯಿಕ ಚಂಡಮೇಳಂ ವಾದ್ಯ ತಂಡ, ಕಥಕಳಿ ತಂಡ, ಪುಲಿಕಳಿ ತಂಡ, ಕಾವಾಡಿ ದ್ರುವಂ ಕಲಸ್ಮತಿ ಕಲಾವಿದರ ತಂಡದವರು ಭಾಗವಹಿಸುವರು.

ಎಲ್ಲಮೇಳಗಳೊಂದಿಗೆ ಮೆರವಣಿಗೆ ನಡೆಯಲಿದ್ದು, ಶಿವಾಲಯದಿಂದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯುದವರೆಗೆ ಜರುಗಲಿದೆ. ನಂತರ ಕೇರಳದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಕೇರಳದ 500 ಕ್ಕೂ ಹೆಚ್ಚು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸ್ಥಳೀಯ ವಿದ್ಯಾರ್ಥಿಗಳ ಜೊತೆ–ಗೂಡಿ ಓಣಂ ಉತ್ಸವವನ್ನು ಆಚರಿಸಲಿದ್ದಾರೆ.

ಉತ್ಸವದಲ್ಲಿ ಬಿವಿವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ) ಹಾಗೂ ಬಿವಿವಿ ಸಂಘದ ಸದಸ್ಯರು ಉಪಸ್ಥಿತರಿರುವರು ಎಂದು ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ದಿಲೀಪ್ ನಾಟೇಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೇವೂರ ಆದರ್ಶ ಕಾಲೇಜಿನಲ್ಲಿ ವನಮಹೋತ್ಸವ
## ಗಿಡ ನೆಟ್ಟು ಬೆಳೆಸುವ ಪ್ರಾಮಾಣಿಕ ಸಂಕಲ್ಪ ಮಾಡಿ–ವಾಸನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ಪರಿಸರ ರಕ್ಷಣೆಪ್ರತಿಯೊಬ್ಬರಕರ್ತವ್ಯವಾಗಿದ್ದು, ಈ ವಿಷಯದಲ್ಲಿ ನಿರ್ಲಕ್ಷ್ಯತಾಳಿದರೆ ನಮ್ಮ ವಿನಾಶ ಖಂಡಿತ ಎಂದು ಬದಾಮಿಯ ಪರಿಸರ ಬಳಗದ ಅಧ್ಯಕ್ಷ ಎಸ್.ಎಚ್.ವಾಸನ ಹೇಳಿದರು.

ತಾಲೂಕಿನ ಬೇವೂರಿನ ಆದರ್ಶ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯಲ್ಲಿ ಪರಿಸರ ಬಳಗ ಬಾಗಲಕೋಟ ಇವರ ಸಹಯೋಗದಲ್ಲಿ ಶನಿವಾರ ನಡೆದ ವನಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಕೃತಿ ಮುನಿದರೆ ಆಪತ್ತು ಖಂಡಿತ. ಹೀಗಾಗಿ ಪ್ರತಿಯೊಬ್ಬರೂ ಗಿಡ ನೆಟ್ಟು ಬೆಳೆಸುವ ಪ್ರಾಮಾಣಿಕ ಸಂಕಲ್ಪ ಹೊಂದಬೇಕು ಎಂದರು.

ಅತಿಥಿ ಬಾಗಲಕೋಟೆ ತೆ–ೂಟಗಾರಿಕೆ ಇಲಾಖೆಯ ಸಹ ನಿರ್ದೇಶಕ ಬಸವರಾಜ ಬೇನಾಳ ಮಾತನಾಡಿ,'ನಾವು ಪ್ರಕೃತಿಯ ಒಂದು ಭಾಗವಾಗಿದ್ದೇವೆ. ಪರಿಸರ ಸ್ನೇಹಿ ಜೀವನ ನಮ್ಮ ಧ್ಯೇಯವಾಗಬೇಕು. ಪ್ರತಿಯೊಬ್ಬರೂ ಪರಿಸರದ ಬಗ್ಗೆ ಅರಿವನ್ನು ಮೂಡಿಸಿಕೊಂಡು ಗಿಡಗಳನ್ನು ನೆಟ್ಟು ಬೆಳೆಸುವ ಕಾಯಕ ಮಾಡಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಆದರ್ಶ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷ ಜಿ.ಜಿ.ಮಾಗನೂರ, ವಿದ್ಯಾರ್ಥಿಗಳು ಪರಿಸರದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು. ಸುಂದರ ಸಮಾಜ ಕಟ್ಟುವ ಜವಾಬ್ದಾರಿ ಹೊತ್ತು ಸಮಾಜದಲ್ಲಿ ಪರಿಸರ ಸಂರಕ್ಷಣೆಯ ಬಗ್ಗೆ ತಿಳುವಳಿಕೆ ಮೂಡಿಸಬೇಕು ಎಂದರು.

ಸಾಮಾಜಿಕ ಕಾರ್ಯಕರ್ತ ರಂಗನಗೌಡ ದಂಡಣ್ಣವರ, ನಿವೃತ್ತ ಮುಖ್ಯಗುರು ಜಿ.ಎಸ್. ಹಚ್ಚೊಳ್ಳಿ, ಪ್ರಾಚಾರ್ಯ ವ್ಹಿ.ಬಿ. ಅರಹುಣಸಿ, ಮುಖ್ಯಗುರು ಯೋಗೇಶ ಲಮಾಣಿ, ಸಂಸ್ಥೆಯ ಉಪಾಧ್ಯಕ್ಷ ರತನಕುಮಾರ ವೈಜಾಪೂರ, ಸದಸ್ಯರಾದ ಎಮ್.ಜಿ.ಕೇಶಣ್ಣವರ, ವಿ.ಪಿ.ತುರುಡಗಿ, ಎನ್.ಎಸ್. ಹುನಗುಂದ ವೇದಿಕೆಯಲ್ಲಿದ್ದರು.

ಉಪನ್ಯಾಸಕರಾದ ಜೆ.ಕೆ. ಮಲ್ಲಾಪೂರ, ಆರ್.ಆರ್. ಯರಡೋಣಿ, ಎಸ್.ಎನ್.ಬಾರ್ಕಿ, ಕೆ.ಡಬ್ಲ್ಯೂ.ಮಕಾನದಾರ, ದೇವರಾಜ ಮಾದರ, ಶ್ರೀಧರ ಬಡಿಗೇರ, ರೇಶ್ಮಾ ಧನ್ನೂರ, ಅಂಜುಮ ಭಂಡಾರಿ, ವಿಷ್ಣು ಸನ್ನಿ ಹಾಗೂ ಬೋಧ–ಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಇದೇ ಸಮಯದಲ್ಲಿ ವಿದ್ಯಾಲಯದ ಆವರಣದಲ್ಲಿ ಗಿಡಗಳನ್ನು ನೆಡಲಾಯಿತು. ಮುಖ್ಯಗುರು ಯೋಗೇಶ ಲಮಾಣಿ ಸ್ವಾಗತಿಸಿದರು. ಉಪನ್ಯಾಸಕಿ ಎಸ್. ಕೆ.ಮಾಡೊಳ್ಳಿ ನಿರೂಪಿಸಿದರು. ಅಮರಜ್ಯೋತಿ ಮಾಗನೂರ ವಂದಿಸಿದರು.



ಬೆನಕಟ್ಟಿಯ ರಂಗನಾಥ ಯುವಕ ಸಂಘದ ಗಣೇಶ.



ಕಮತಗಿಯ ಸ್ವಾಮಿ ವಿವೇಕಾನಂದ ಯುವಕ ಮಂಡಳಿಯ ಗಣೇಶ



ಹಳ್ಳೂರಿನ ಸಿದ್ದೇಶ್ವರ ಯುವಕ ಮಂಡಳಿಯ ಗಣೇಶ



ಕಮತಗಿಯ ಮಡ್ಡಿ ಮಾರುತೇಶ್ವರ ಮಿತ್ರ ಮಂಡಳಿಯ ಗಣೇಶ

## ರೈತರ ಕಲ್ಯಾಣಕ್ಕಾಗಿ ವಿಶಿಷ್ಟ ಕೊಡುಗೆ ನೀಡಬೇಕೆನ್ನುವ ಸಂಕಲ್ಪ:ಲಕ್ಷ್ಮೀ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30:ಬಡಕುಟುಂಬಳಿಗೆ ಅಗತ್ಯ ಆಹಾರ ಸಾಮಗ್ರಿಗಳನ್ನು ವಿತರಿಸುವ ಮೂಲಕ ಸಾಮಾಜಿಕ ಕಳಕಳಿಯ ಯುವತಿ ಲಕ್ಷ್ಮೀ ಗಂಗಾಲ್ ತಮ್ಮ ಜನ್ಮದಿನವನ್ನು ವಿಶಿಷ್ಟರೀತಿಯಲ್ಲಿ ಆಚರಿಸಿಕೊಂಡರು.

ಹಾರ್ಟಿಕಲ್ಚರ್ ವಿಭಾಗದಲ್ಲಿ ಪೋಸ್ಟ್ ಹಾರ್ವೆಸ್ಟ್ ಮ್ಯಾನೇಜ್‌ಮೆಂಟ್'ನಲ್ಲಿ ಪಿ.ಎಚ್.ಡಿ ಮಾಡುತ್ತಿರುವ ಲಕ್ಷ್ಮೀ ಅವರು, ರೈತರ ಕಲ್ಯಾಣಕ್ಕಾಗಿ ವಿಶಿಷ್ಟ ಕೊಡುಗೆ ನೀಡಬೇಕೆನ್ನುವ ಸಂಕಲ್ಪ ಹೊಂದಿದ್ದಾರೆ. ದಯಾಮಯಿ ಆಗಿರುವ ಅವರಲ್ಲಿ ಸೇವಾ ಮನೋಭಾವದ ಅದಮ್ಯ ಉತ್ಸಾಹವಿದೆ.

ಲಕ್ಷ್ಮೀ ನಿವೃತ್ತ ಡಿವೈಎಸ್‌ಪಿ ಮಂಜುನಾಥ ಹಾಗೂ ಸುನಿತಾ ಗಂಗಾಲ್ ದಂಪತಿಗಳ ಪುತ್ರಿಯಾಗಿದ್ದು, ಪುತ್ರಿಯ ಸಾಮಾಜಿಕ ಕಳಕಳಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದು, ಸಂಪೂರ್ಣ ಬೆಂಬಲ ನೀಡಿದ್ದಾರೆ.

ಬಡ ಕುಟುಂಬಗಳಿಗೆ ಆಹಾರ ಕಿಟ್ ವಿತರಿಸಿದ ಲಕ್ಷ್ಮೀ ಗಂಗಾಲ್, ಪುಟ್ಟ ಮಕ್ಕಳಿಗೆ ಸಿಹಿ ಹಂಚಿ ಹುಟ್ಟು ಹಬ್ಬ ಆಚರಿಸಿಕೊಂಡರು. ಕಾರ್ಯಕ್ರಮದಲ್ಲಿ ಸಮಾಜ ಸೇವಕ ವಿಶಾಲರೆಡ್ಡಿ ಜಂಪಾ (ಸೇವ್‌ದ ಚೈಲ್ಡ್ ಫೌಂಡೇಶನ್ –ದಕ್ಷಿಣ ಸಂಯೋಜಕ) ಭಾಗಿಯಾಗಿದ್ದರು.

ಲಕ್ಷ್ಮೀ ಗಂಗಾಲ್ ಅವರ ಸಾಮಾಜಿಕ ಕಾರ್ಯ ಇತರರಿಗೂ ಮಾದರಿಯಾಗಲಿ ಎಂಬುದು ತಂದೆ–ತಾಯಿ, ಸ್ನೇಹ ಬಳಗದವರ ಆಶಯ.

## ಕ್ರೀಡಾಕೂಟ: ವಾಲಿಬಾಲ್ ಮತ್ತು ಥ್ರೋಬಾಲ್ ನಲ್ಲಿ
## ಅಂಜಲಿ ಕಾನ್ವೆಂಟ್ ಮತ್ತು ನೈಟಿಂಗೇಲ್ ಪ್ರೌಢಶಾಲೆ ಚಾಂಪಿಯನ್




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಆ.30–ಶ್ರೀಗಂಧಕಾವಲು ಕ್ಲಸ್ಟರ್ ಮಟ್ಟದಲ್ಲಿ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ನಗರದ ಸುಂಕದಕ–ಟ್ಟೆ, ಶ್ರೀನಿವಾಸನಗರದ ಅಂಜಲಿ ಕಾನ್ವೆಂಟ್ ಮತ್ತು ನೈಟಿಂಗೇಲ್ ಪ್ರೌಢಶಾಲೆ ವಾಲಿಬಾಲ್ ಮತ್ತು ಥ್ರೋಬಾಲ್ ನಲ್ಲಿ ಕ್ಲಸ್ಟರ್ ಮಟ್ಟದ ಚಾಂಪಿಯನ್ ಆಗಿ ಹೊರಹೊಮ್ಮಿದೆ. ಪ್ರೌಢಶಾಲೆಯ ಬಾಲಕರು ವಾಲಿಬಾಲ್ ಮತ್ತು ಥ್ರೋಬಾಲ್ ನಲ್ಲಿ ಪ್ರಥಮ, ಬಾಲಕಿಯರು ಥ್ರೋಬಾಲ್ ನಲ್ಲಿ ಪ್ರಥಮ ಬಹುಮಾನಗಳಿಸಿಕೊಂಡಿರುತ್ತಾರೆ. ಅಲ್ಲದೆ, ಪ್ರಾಥಮಿಕ ವಿಭಾಗದ ಬಾಲಕಿಯರು ವಾಲಿಬಾಲ್ ನಲ್ಲಿ ಪ್ರಥಮ ಸ್ಥಾನ ಪಡೆದು ಈ ಎಲ್ಲಾ ನಾಲ್ಕು ತಂಡಗಳು ತಾಲೂಕು ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಈ ಸಂದರ್ಭದಲ್ಲಿ ವಿಜೇತ ತಂಡಗಳ ಜೊತೆಗೆ ತರಬೇತುದಾರರಾದ ಅಭಿಷೇಕ್, ಹರ್ಷ ಎಲ್, ಮೋಹಿತ್ ನಾಯಕ್, ಲಿಖಿತ್, ಕ್ರೀಡಾ ಶಿಕ್ಷಕರಾದ ರವೀಂದ್ರ ಹಾಗೂ ತನುಜ, ತಂಡದ ವ್ಯವಸ್ಥಾಪಕರಾದ ಲಕ್ಷ್ಮಿ ಹಾಗೂ ಕೆ ಜಿ ವಿಶ್ವೇಶ್ವರಯ್ಯ ಹಾಗೂ ಎಲ್ಲಾ ಶಿಕ್ಷಕ–ಶಿಕ್ಷಕೇತರ ವರ್ಗದವರನ್ನು ಶಾಲಾ ಆಡಳಿತ ಮಂಡಳಿ ಅಧ್ಯಕ್ಷರಾದ ಎಸ್. ಜಿ. ಗೌಡ, ಕಾರ್ಯದರ್ಶಿ ಎಂ. ಎಸ್. ಸರಳ ಹಾಗೂ ಪ್ರಾಂಶುಪಾಲರಾದ ಡಾ.ಬಿ. ಕೃಷ್ಣೇ ಗೌಡ ರವರು ಅಭಿನಂದಿಸಿದ್ದಾರೆ.

ಇದೇ ರೀತಿ ತಾಲೂಕು ಮಟ್ಟದಲ್ಲಿಯೂ ವಿಜೇತರಾದರೆ ನಗದು ಬಹುಮಾನದ ಮೂಲಕ ಸನ್ಮಾನಿಸಲಾಗುವುದೆಂದು ಪ್ರಾಂಶುಪಾಲ ಡಾ. ಬಿ. ಕೃಷ್ಣೇಗೌಡರು ತಿಳಿಸಿದರು.

## ಧ್ಯಾನಚಂದ ಕೊಡುಗೆ ಸ್ಮರಿಸಿ–ಪ್ರಾ.ನರಗುಂದ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ಕ್ರೀಡಾಸಾಧನೆಯ ಮೂಲಕ ದೇಶಕ್ಕೆ ಗೌರವ ತಂದ ಹಾಕಿ ಮಾಂತ್ರಿಕ ಮೇಜರ ಧ್ಯಾನಚಂದರ ಕೊಡುಗೆಯನ್ನು ವಿದ್ಯಾರ್ಥಿಗಳು ಸ್ಮರಿಸಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಧ್ಯಾನಚಂದರ ಜನ್ಮದಿನದ ಅಂಗವಾಗಿ ಆಯ್‌ಕ್ಯೂಎಸಿ ಮತ್ತು ಎನ್‌ಎಸ್‌ಎಸ್ ಘಟಕಗಳು ಶುಕ್ರವಾರ ಆಯೋಜಿಸಿದ್ದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಇಂತಹ ಹಲವಾರು ಪ್ರತಿಭೆಗಳ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಅವರ ಬದುಕು–ಬರಹದಿಂದ ಪ್ರೇರಣೆ ಪಡೆಯಬೇಕು. ತಾವೂ ಅಂತಹ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಸಂಕಲ್ಪ ತೊಡಬೇಕು ಎಂದರಲ್ಲದೇ, ಜೀವನದಲ್ಲಿ ಸಾಧನೆ ಮಾಡಲು ಉತ್ತಮ ಆರೋಗ್ಯ ಬೇಕು. ಕ್ರೀಡೆಗಳಲ್ಲಿ ಭಾಗವಹಿಸುವುದರ ಮೂಲಕ ಆರೋಗ್ಯ ಸಂಪತ್ತನ್ನು ಪಡೆಯಬಹುದು ಎಂದು ನರಗುಂದ ಹೇಳಿದರು. ಉಪನ್ಯಾಸಕಿ ಕೀರ್ತಿ ದಾಸರ ಪ್ರಾರ್ಥಿಸಿದರು. ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್. ವಾಯ್.ಬೊಮ್ಮಣ್ಣವರ ಪ್ರತಿಜ್ಞಾವಿಧಿ ಬೋಧಿಸಿದರು. ಉಪನ್ಯಾಸಕಿ ಗೀತಾ ಕಿಲಬನೂರ ನಿರೂಪಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್. ಎಂ.ಹಡಪದ ವಂದಿಸಿದರು.

## ಜೀವನದಲ್ಲಿ ಸಾಧನೆ ಮುಖ್ಯ: ಚರಲಿಂಗ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.30–ಇವತ್ತಿನ ಕಲಿಯುಗ ಮೊಬೈಲ್ ಕಂಪ್ಯೂಟರ್ ಬಂದು ನಮ್ಮ ಪದ್ಧತಿಯನ್ನು ಅವನತಿ ಸ್ಥಿತಿ ಎತ್ತ ಸಾಗುತ್ತಿದೆ. ಅದಕ್ಕೆಲ್ಲ ಹೇಳುವುದು ನಾವು ನಮ್ಮ ಪದ್ಧತಿಯಾದ ಪೂಜಾ ಪುನಸ್ಕಾರ ನೇಮ ನಿಷ್ಠೆಯನ್ನು ಪಾಲಿಸಿಕೊಂಡುಹೋಗಬೇಕು ಆದರೆ ಅವೆಲ್ಲ ಗಾಳಿಗೆ ತೂರಿದಂತೆ ನಮ್ಮ ಪದ್ಧತಿ ನಾವೇ ಹಾಳು ಮಾಡುವ ಸ್ಥಿತಿಯಲ್ಲಿ ನಾವಿದ್ದೇವೆ ಅದನ್ನು ಹೋಗಲಾಡಿಸಬೇಕಾದರೆ ಇಂಥ ಪುಣ್ಯ ಕಾರ್ಯಗಳು ಮಾಡುವುದರಿಂದ ಮನುಷ್ಯನ ಜೀವನದಲ್ಲಿ ನೆಮ್ಮದಿ ಸಿಗಲು ಸಾಧ್ಯವೆಂದು ಗದ್ದಿಗೆ ಮಠದ ಚರಲಿಂಗ ಮಹಾಸ್ವಾಮಿಗಳು ಹೇಳಿದರು.

ಇಲ್ಲಿಗೆ ಸಮೀಪದ ಜಂಬಗಾ (ಬಿ) ಗ್ರಾಮ ದೇವತೆಯಾದ ಶ್ರೀ ಲಕ್ಷ್ಮಿ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಂಡ ಶ್ರಾವಣ ಮಾಸದ ಮುಕ್ತಾಯ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಒಳ್ಳೆ ಮಾರ್ಗದತ್ತ ನಡೆಯುವುದನ್ನು ನಾವು ನಮ್ಮ ಮನೆಯಿಂದಲೇ ಪ್ರಾರಂಭಿಸಬೇಕು ಒಂದು ತಿಂಗಳ ಪಯರ್‌ಂತ ಪೂಜಾ, ಪುನಸ್ಕಾರ, ಕೀರ್ತನೆ, ಭಜನೆ ಹೀಗೆ ಧಾರ್ಮಿಕ ಕಾರ್ಯಕ್ರಮ ಮಾಡುವುದರಿಂದ ಜೀವನದಲ್ಲಿ ನೆಮ್ಮದಿ ಕಾಣಲು ಸಾಧ್ಯವೆಂದು ಹೇಳಿದರು. ವೇದಿಕೆಯಲ್ಲಿ ಹತಗುಂದಿಯ ಭಾಗ್ಯವಂತಿ ದೇವಾಸ್ಥಾನದ ಮಾತೋಶ್ರೀ ಶಿವಲೀಲಾ ತಾಯಿಯವರು ಮುತ್ತೈದರ ಉಡಿ ತುಂಬುವ ಕಾರ್ಯಕ್ರಮ ನೆರವೇರಿಸಿದರು.

ಸಿದ್ದು ದೇವರು, ಶಿವಪುತ್ರಪ್ಪ ಮಹಾರಾಜರು ಚಿಣಮಗೇರಿ ಉಭಯ ಶ್ರೀಗಳು ತಮ್ಮ ಆಶೀರ್ವಚನ ನೀಡಿದರು/

ನ್ಯಾಯವಾದಿ ಹನುಮಂತರಾಯ ಅಟ್ಟೂರ ಮಾತನಾಡಿ, ಜಂಬಗಾ ಗ್ರಾಮದ ಮಹಾಲಕ್ಷ್ಮಿ ದೇವಸ್ಥಾನದಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮ ನೋಡಿ ಮನಸ್ಸಿಗೆ ಬಹಳ ಆನಂದವಾಯಿತು.

ಪುಣ್ಯರ ನಾಡು ಈ ನಾಡಿನಲ್ಲಿ ಅನೇಕ ಮಠ ಮಂದಿರಗಳು ಇರುವದರಿಂದ ಇವತ್ತಿನ ಕಲಿಯುಗದಲ್ಲಿ ಸತ್ಸಂಗ ಸಮ್ಮೇಳನ ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮ ಮಾಡುವದರಿಂದ ನಾವು ನೀವೆಲ್ಲರೂ ಜೀವನದಲ್ಲಿ ಸ್ವಾರ್ಥಕತೆ ಕಾಣಲು ಸಾಧ್ಯವೆಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಶಿವಲಿಂಗಯ್ಯ ಮಠಪತಿ ಧೂಳಯ್ಯ ಮಠಪತಿ. ಮಲ್ಕಣ್ಣ ಮುಲಗೆ. ವೀರಸಂಗಪ್ಪ ಬಿರಾದಾರ. ಪತ್ರಕರ್ತ ಅಂಬಾರಾಯ ಕೋಣೆ ಹಾಗೂ ಜಂಬಗಾ ಗ್ರಾಮದ ಗಣ್ಯಮಾನ್ಯ ವ್ಯಕ್ತಿಗಳು ಗ್ರಾಮದ ಪ್ರಮುಖರು ಇದ್ದರು. ಆಂಜನೇಯ ಗುತ್ತೇದಾರ, ಶ್ರೀಶೈಲ ಗುತ್ತೇದಾರ ಅವರಿಂದ ಸಂಗೀತ ಸೇವೆ, ಶರಣಬಸಪ್ಪ ಎಚ್ ಪಾಟೀಲ್ ಕಾರ್ಯಕ್ರಮ ನಿರೋಪಿಸಿದರು. ಉದಯಕುಮಾರ ಜಂಬಗಾ ಸರ್ವರನ್ನು ಸ್ವಾಗತಿಸಿದರು.

## ಹಳೆತರಕಾರಿ ಮಾರುಕಟ್ಟೆಗೆ ಮೇಯರ್,ಉಪಮೇಯರ್ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.30: ಮೇಯರ್ ವರ್ಷಾ ರಾಜೀವ ಜಾನೆ, ಉಪಮೇಯರ್ ತೃಪ್ತಿ ಎಸ್ ಅಲ್ಲದ (ಲಾಖೆ) ಅವರು ನಗರದ ಶಿಥಿಲಾವಸ್ಥೆ ಯಲ್ಲಿರುವ ಹಳೆತರಕಾರಿ ಮಾರುಕಟ್ಟೆಯ ಮಳಿಗೆಗಳನ್ನು ಹಾಗೂ ಸ್ಥಳಾಂತರಗೊಳ್ಳಬೇಕಾದ ತಾತ್ಕಾಲಿಕ ಟೀನ್ ಶೆಡ್‌ಗಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಒಂದು ವಾರದೊಳಗಾಗಿ ಸ್ಥಳಾಂತರಗೊಳ್ಳಬೇಕಾದ ಸ್ಥಳವನ್ನು ಸ್ವಚ್ಛಗೊಳಿಸಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ, ಪಾಲಿಕೆ ಅಧಿಕಾರಿಗಳಾದ ಮುಜಾಮಿಲ್ ಆಲಂ, ಧನರಾಜ್ ಚವ್ಹಾಣ, ಪ್ರಕಾಶ ರೆಡ್ಡಿ ಹಾಗೂ ಸುನಿಲ್ ವಂಟಿ ಅವರಿಗೆ ಸೂಚಿಸಿದರು.




ಕಲ್ಬುರ್ಗಿಯ ಪೂಜ್ಯ ದೊಡ್ಡಪ್ಪ ಅಪ್ಪ ಎಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರ ನಡೆದ ಘಟಿಕೋತ್ಸವ ಸಮಾರಂಭದಲ್ಲಿ ಶ್ರೀ ರವೀಂದ್ರನಾಥ ಬಾಳ್ಳಿಯವರ ಪುತ್ರ ಆದಿತ್ಯಾ ಬಾಳ್ಳಿಯವರು ಪರಿಸರ ಎಂಜಿನಿಯರಿಂಗ್ ಸ್ನಾತಕೋತ್ತರ ಪದವಿಯಲ್ಲಿ ಎಸ್‌ಸಿ ವರ್ಗದಲ್ಲಿ ಸ್ವರ್ಣ ಪದಕವನ್ನು ಪಡೆದಿರುವ ಚಿತ್ರ ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ)

# ಬಸ್ ನಿಲುಗಡೆಗೆ ಆಗ್ರಹಿಸಿ ವಿದ್ಯಾರ್ಥಿಗಳಿಂದ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ತಮ್ಮ ಗ್ರಾಮದಲ್ಲಿ ನಿಲುಗಡೆಗೊಳಿಸುವಂತೆ ಆಗ್ರಹಿಸಿ ಸಮೀಪದ ಬೇವಿನಮಟ್ಟಿ ಗ್ರಾಮದಲ್ಲಿ ಶನಿವಾರ ಶಾಲಾ–ಕಾಲೇಜು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಬೆಳಿಗ್ಗೆ 9 ಗಂಟೆಯ ವೇಳೆಗೆ ರಸ್ತೆಗೆ ಮುಳ್ಳುಕಂಟಿ, ಕಟ್ಟಿಗೆ ಹಾಕಿ ರಸ್ತೆಯಲ್ಲೇ ಕುಳಿತು ಪ್ರತಿಭಟನೆಗೆ ಮುಂದಾದ ವಿದ್ಯಾರ್ಥಿಗಳು, ಬೆಳಗಿನ ವೇಳೆ ಶಾಲಾ–ಕಾಲೇಜಿಗೆ ತೆರಳಲು ಬಸ್ಸುಗಳಿಗಾಗಿ ಕಾಯುತ್ತಾ ನಿಂತರೂ ಯಾವುದೇ ಬಸ್ಸು ನಿಲುಗಡೆಯಾಗುತ್ತಿಲ್ಲ. ಇದರಿಂದ ನಮಗೆ ಬಹಳಷ್ಟು ಸಮಸ್ಯೆಯಾಗುತ್ತಿದೆ ಎಂದು ವಿದ್ಯಾರ್ಥಿಗಳು ದೂರಿದರು.

ಗ್ರಾಮದ ಧ್ವಾರಬಾಗಿಲು ಬಳಿ ನಡೆಸಿದ ಪ್ರತಿಭಟನೆಯಿಂದಾಗಿ ಇಳಕಲ್ಲ ಭಾಗದಿಂದ ಹಾಗೂ ಬಾಗಲಕೋಟೆ ಕಡೆಯಿಂದ ಬರುವ ಯಾವುದೇ ವಾಹನ ಸಂಚಾರಕ್ಕೆ ವಿದ್ಯಾರ್ಥಿಗಳು ಅವಕಾಶ ನೀಡದೇ ಹೋಗಿದ್ದರಿಂದ ಕೆಲ ಸಮಯ ರಸ್ತೆ ಸಂಚಾರ ಸ್ಥಗಿತಗೊಂಡು ಪ್ರಯಾಣಿಕರು ಪರದಾಡುವಂತಾಯಿತು.

ನಂತರ ಸ್ಥಳಕ್ಕೆ ಆಗಮಿಸಿದ ಬಾಗಲಕೋಟೆ ಗ್ರಾಮೀಣ ಪಿಎಸ್ಐ ಗಿರೀಶ, ವಿದ್ಯಾರ್ಥಿಗಳ ಬೇಡಿಕೆಯನ್ನು ಆಲಿಸಿದರು. ಸಾಕಷ್ಟು ಬಸ್ಸುಗಳು ಈ ಮಾರ್ಗದಲ್ಲಿ ಸಂಚರಿಸುತ್ತಿದ್ದರೂ ಯಾವುದೇ ಬಸ್ಸು ನಮ್ಮೂರಿಗೆ ನಿಲುಗಡೆ ಮಾಡುತ್ತಿಲ್ಲ. ಈ ಬಗ್ಗೆ ಅನೇಕ ಬಾರಿ ಗ್ರಾಮ ಪಂಚಾಯತಿ ಮೂಲಕ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಅದಕ್ಕಾಗಿ ರಸ್ತೆಗೆ ಇಳಿದು ಪ್ರತಿಭಟನೆ ಮಾಡುತ್ತಿರುವುದಾಗಿ ವಿದ್ಯಾರ್ಥಿಗಳು ತಿಳಿಸಿದರು.

ತಮ್ಮ ಬೇಡಿಕೆ ಕುರಿತು ಸಾರಿಗೆ ಸಂಸ್ಥೆಯ ಅಧಿಕಾರಿಗಳ ಜೊತೆ ಮಾತನಾಡಿ ಪರಿಹರಿಸುವುದಾಗಿ ಹೇಳಿದ ಪಿಎಸ್ಐ ಗಿರೀಶ, ರಸ್ತೆ ತಡೆ, ಪ್ರತಿಭಟನೆ ನಡೆಸುವ ಮುನ್ನ ಸಂಬಂಧಿಸಿದ ಇಲಾಖೆ ಹಾಗೂ ಪೋಲೀಸರಿಗೆ ಮಾಹಿತಿ ನೀಡಬೇಕು ಎಂದು ಸಲಹೆ ನೀಡಿದರು.

ಸಾರಿಗೆ ಸಂಸ್ಥೆಯ ಪ್ರತಿನಿಧಿ ನೆರಕಿ ಸ್ಥಳಕ್ಕೆ ಆಗಮಿಸಿ ಇಲಾಖೆಯ ಹಿರಿಯ ಅಧಿಕಾರಿಗಳ ಜೊತೆ ಮಾತನಾಡಿ ಸಮಸ್ಯೆ ಪರಿಹರಿಸುವ ಭರವಸೆ ನೀಡಿದರು. ಗ್ರಾಮದ ಪ್ರಮುಖ ದ್ಯಾಮಣ್ಣ ಗಾಳಿ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ನಿವಾರಿಸುವಂತೆ ತಿಳಿಸಿದರು. ಭರವಸೆಯ ನಂತರ ವಿದ್ಯಾರ್ಥಿಗಳು ಪ್ರತಿಭಟನೆ ಹಿಂಪಡೆದರು.

ರಾಹುಲ್ ಸೂಳಿಕೇರಿ, ಸಿದ್ದು ಶೆಟ್ಟಿ, ಮಹಾದೇವಿ ಗೌಡರ, ಶಿಲ್ಪಾ ಶೆಟ್ಟಿ, ರೇಣುಕಾ ಪಾದನಕಟ್ಟಿ ಮತ್ತಿತರ ವಿದ್ಯಾರ್ಥಿಗಳು, ಕೂಲಿ ಕಾರ್ಮಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅತಿವೃಷ್ಟಿಯಿಂದ ಹಾನಿಗೊಳಗಾದ ಗ್ರಾಮಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ



ಕಲಬುರಗಿ, ಆ: 30 : ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯ ಹಿನ್ನಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾಗಿ ಸಂಕಷ್ಟದಲ್ಲಿರುವ ರೈತರಿಗೆ ಬೆಂಬಲವಾಗಿ ನಿಂತಿರುವ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ಇಂದು ಕಲಬುರಗಿ ಮತ್ತು ಅಫಜಲಪೂರ ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ರೈತರೊಂದಿಗೆ ಮಾತನಾಡಿ ಖುದ್ದಾಗಿ ಬೆಳೆಹಾನಿಯನ್ನು ಪರಿಶೀಲಿಸಿದರು.

ಶನಿವಾರ ಬೆಳಿಗ್ಗೆ ಮೊದಲು ಕಲಬುರಗಿ ತಾಲ್ಲೂಕಿನ ಸಾವಳಗಿ (ಬಿ) ಗ್ರಾಮದಿಂದ ಪರಿಶೀಲನೆ ಆರಂಭಿಸಿದ ಅವರು ಹಡಗಿಲ ಹಾರುತಿ, ಮೇಳಕುಂದ (ಕೆ), ಮೇಳಕುಂದ (ಬಿ), ಮಾಚನಾಳ ತಾಂಡ ಸೇರಿದಂತೆ ಅಫಜಲಪೂರ ತಾಲ್ಲೂಕಿನ ಚೌಡಾಪುರ ಗ್ರಾಮಗಳಿಗೆ ಬೇಟಿ ನೀಡಿದರು. ಕಳೆದ ಎರೆಡು–ಮೂರು ವಾರಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆ ಹಾಗೂ ತುಂಬಿ ಹರಿಯುತ್ತಿರುವ ಭೀಮಾ ನದಿ ಸೇರಿದಂತೆ ಜಿಲ್ಲೆಯಲ್ಲಿರುವ ವಿವಿಧ ಜಲಾಶಯಗಳಿಂದ ಸಹ ಹೆಚ್ಚಿನ ನೀರನ್ನು ಹೊರಬಿಡುತ್ತಿರುವ ಹಿನ್ನಲೆಯಲ್ಲಿ ವಿವಿಧ ತಾಲ್ಲೂಕಿನ ಅನೇಕ ಹಳ್ಳಿಗಳಲ್ಲಿ ಪ್ರವಾಹ ಭೀತಿ ಮತ್ತು ಅತಿವೃಷ್ಟಿಯಿಂದ ಹಾನಿಗೊಳಗಾದ ರೈತರ ಬೆಳೆಗಳಿಗೆ ಸರ್ಕಾರದಿಂದ ಅಗತ್ಯ ನೆರವು ಒದಗಿಸಲು ಸಂಬಂಧಿತ ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರವಾಗಿ ಜಿಲ್ಲಾಧಿಕಾರಿಗಳು ಖುದ್ದಾಗಿ ಗ್ರಾಮಗಳಿಗೆ ಬೇಟಿ ನೀಡುವ ಮೂಲಕ ರೈತರೊಂದಿಗೆ ಮಾತನಾಡುತ್ತಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ ಖರ್ಗೆ ಅವರು ವಿದೇಶ ಪ್ರವಾಸದಲ್ಲಿದ್ದರೂ ಸಹ ಕಳೆದ ಸೋಮವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲಾಧಿಕಾರಿಗಳು ಸೇರಿದಂತೆ ಸಂಬಂಧಿತ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅತಿವೃಷ್ಟಿಯಿಂದ ಹಾನಿಗೊಳಗಾದ ರೈತರೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿರಲು ಹಾಗೂ ವೈಜ್ಞಾನಿಕವಾಗಿ ಬೆಳೆಹಾನಿ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಸೂಚಿಸಿದ್ದರು. ತೊಗರಿ, ಹೆಸರು, ಹತ್ತಿ ಸೇರಿದಂತೆ ವಿವಿಧ ಬೆಳೆಗಳ ಹೊಲಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಬೆಳೆಹಾನಿ ಕುರಿತಂತೆ ವಿಸ್ತೃತ ವರದಿಯನ್ನು ತುರ್ತಾಗಿ ಜಿಲ್ಲಾಡಳಿತಕ್ಕೆ ಸಲ್ಲಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಸಹಾಯಕ ಆಯುಕ್ತರಾದ ಸಾಹಿತ್ಯ, ಕೃಷಿ ಇಲಾಖೆ ಉಪ ನಿರ್ದೇಶಕ ಸೋಮಶೇಖರ್, ಸಹಾಯಕ ನಿರ್ದೇಶಕ ಅರುಣ್ ಕುಮಾರ್ ಸೇರಿದಂತೆ ಕಂದಾಯ ಇಲಾಖೆಯ ಕಲಬುರಗಿ ಮತ್ತು ಅಫಜಲಪೂರ ತಾಲ್ಲೂಕಿನ ತಹಸೀಲ್ದಾರರು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನೋಂದಣಿ ಮತ್ತು ಮುದ್ರಾಂಕ ಶುಲ್ಕ

## ಪರಿಷ್ಕರಣೆ ನೆರೆ ರಾಜ್ಯಗಳ ದರಗಳೊಂದಿಗೆ ಸಮೀಕರಿಸಿ ಪರಿಷ್ಕರಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಅ 30: ಕರ್ನಾಟಕ ರಾಜ್ಯ ಸರ್ಕಾರವು ಆಗಸ್ಟ್ ,31 ರಿಂದ ಜಾರಿಗೊಳಿಸುತ್ತಿರುವ ಸ್ಥಿರಾಸ್ತಿ ಮೇಲಿನ ವ್ಯವಹಾರಗಳ ದಸ್ತಾವೇಜುಗಳಿಗೆ ವಿಧಿಸುತ್ತಿರುವ ನೋಂದಣಿ ಮತ್ತು ಮುದ್ರಾಂಕ ಶುಲ್ಕವು ನೆರೆಹೊರೆಯ ರಾಜ್ಯಗಳಲ್ಲಿರುವ ದರಗಳಿಗಿಂತ ಪ್ರಸ್ತುತ ಕಡಿಮೆ ಶುಲ್ಕ ಇದ್ದು, ಅದನ್ನು ಇತರೆ ರಾಜ್ಯಗಳ ಶುಲ್ಕಗಳೊಂದಿಗೆ ಸಮೀಕರಣ ಮಾಡಿ ಪರಿಷ್ಕರಿಸಲಾಗುತ್ತಿದೆ ಎಂದು ನೋಂದಣಿ ಮತ್ತು ಮುದ್ರಾಂಕ ಶುಲ್ಕ ಆಯುಕ್ತ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮುದ್ರಾಂಕ ,ನೋಂದಣಿ ಹಾಗೂ ಇತರೆ ಸೆಸ್ ಸೇರಿ ಕರ್ನಾಟಕ ರಾಜ್ಯವು ಶೇ.6.6 ರಷ್ಟು ವಿಧಿಸುತ್ತಿತ್ತು. ಇದೇ ಅವಧಿಯಲ್ಲಿ ಈ ಶುಲ್ಕವು ತಮಿಳುನಾಡು ರಾಜ್ಯದಲ್ಲಿ ಶೇ.9, ಕೇರಳ ಶೇ.10, ಆಂಧ್ರಪ್ರದೇಶ ಶೇ. 7.5, ತೆಲಂಗಾಣ ರಾಜ್ಯಗಳು ಶೇ.7.5 ರಷ್ಟು ಶುಲ್ಕ ಆಕರಿಸುತ್ತಿವೆ.

ದಸ್ತಾವೇಜುಗಳ ಮೇಲಿನ ಮುದ್ರಾಂಕ ಶುಲ್ಕ ಮತ್ತು ನೋಂದಣಿ ಶುಲ್ಕಗಳನ್ನು ಇತರೆ ರಾಜ್ಯಗಳೊಂದಿಗೆ ಸಮೀಕರಿಸಿಗೊಳ್ಳಲು (ಖಚಿಣುಚಿ–ಟಚಿಟ್ಟುಚಿಣುಚಿಟ) ಆಡಳಿತಾತ್ಮಕ ಪ್ರಕ್ರಿಯೆಗಳನ್ನು ಬಲಪಡಿಸಲು ಮತ್ತು ನಾಗರಿಕರಿಗೆ ಉತ್ತಮ ಹಾಗೂ ಪರಿಣಾಮಕಾರಿ ಸೇವೆಯನ್ನು ನೀಡಲು.

ರಾಜ್ಯ ಸರ್ಕಾರವು ದಿನಾಂಕ: 31–08–2025 ರಿಂದ ಜಾರಿಗೆ ಬರುವಂತೆ ನೋಂದಣಿ ಶುಲ್ಕವನ್ನು ಶೇಕಡ 1 ರಿಂದ ಶೇ.2 ರಷ್ಟು ಪರಿಷ್ಕರಿಸಿದೆ.

ಪರಿಷ್ಕೃತ ನೋಂದಣಿ ಶುಲ್ಕವನ್ನು ಸುಗಮವಾಗಿ ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಪಾವತಿಸಲು ಹಿಂದಿನ ನೋಂದಣಿ ಶುಲ್ಕವನ್ನು ಪಾವತಿಸಿ ಈಗಾಗಲೇ ದಸ್ತಾವೇಜುಗಳ ನೋಂದಣಿಗೆ ಅಪಾಯಿಂಟ್‌ಮೆಂಟ್ ಪಡೆದಿರುವವರು ಅಥವಾ ಶುಲ್ಕವನ್ನು ಪಾವತಿಸಿ ಅಪಾಯಿಂಟ್‌ಮೆಂಟ್ ಪಡೆಯದಿರುವವರು, ವ್ಯತ್ಯಾಸದ ಮೊತ್ತವನ್ನು ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಪಾವತಿಸಬೇಕು. ಮೊದಲು ಬಳಸಿದ ಲಾಗಿನ್ ಮೂಲಕವೇ ಈ ಪಾವತಿಯನ್ನು ಮಾಡಬೇಕು. ಅರ್ಜಿದಾರರಿಗೆ ನೆರವಾಗುವ ದೃಷ್ಟಿಯಿಂದ ಅಗತ್ಯ ಸೂಚನೆಗಳನ್ನು ಒಳಗೊಂಡ ಎಸ್‌ಎಂಎಸ್ ನೇರವಾಗಿ ಅವರ ನೋಂದಾಯಿತ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುವುದು.

ಈಗಾಗಲೇ ದಸ್ತಾವೇಜುಗಳ ನೋಂದಣಿಗೆ ಸಲ್ಲಿಸಲಾಗಿರುವ ಹಾಗೂ ಪರಿಶೀಲನೆಯಲ್ಲಿರುವ ದಸ್ತಾವೇಜುಗಳಿಗೆ ನೋಂದಣಿ ಶುಲ್ಕವನ್ನು ಮರು ಲೆಕ್ಕಹಾಕಲಾಗುವುದು ಮತ್ತು ಪರಿಷ್ಕೃತ ಶೇಕಡ 2 ರಂತೆ ನೋಂದಣಿ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ಈ ವರ್ಗದ ಅರ್ಜಿದಾರರಿಗೆ ಪಾವತಿಯ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲು ಪರಿಷ್ಕೃತ ನೋಂದಣಿ ಶುಲ್ಕದ ವಿವರವನ್ನು ತಿಳಿಸಲಾಗುವುದು. ಇಲಾಖೆಯು ದಸ್ತಾವೇಜುಗಳ ನೋಂದಣಿ ಪ್ರಕ್ರಿಯೆಯಲ್ಲಿ ವಿಳಂಬವಾಗುವುದನ್ನು ತಪ್ಪಿಸಲು ಎಲ್ಲಾ ಅರ್ಜಿದಾರರಿಗೆ ಮೇಲ್ಕಾಣಿಸಿದ ನವೀಕರಿಸಿದ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಂತ ಹಂತವಾಗಿ ಅನುಸರಿಸಬಹುದಾದ ವಿವರವಾದ ಸೂಚನೆಗಳನ್ನು ಇಲಾಖೆಯ ಅಧಿಕೃತ ಪೋರ್ಟಲ್‌ನಲ್ಲಿ ಲಭ್ಯವಾಗುವಂತೆ ಕಲ್ಪಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿ ಎಂ.ಎ ಸಲೀಂ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.30: ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿ ಐಪಿಎಸ್ ಅಧಿಕಾರಿ ಎಂ.ಎ ಸಲೀಂ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಇಂದು (ಶನಿವಾರ) ಅಧಿಸೂಚನೆ ಹೊರಡಿಸಿದೆ.

ಸಿಐಡಿಯ ಆರ್ಥಿಕ ಅಪರಾಧಗಳು ಹಾಗೂ ವಿಶೇಷ ಘಟಕ ವಿಭಾಗದ ಪೊಲೀಸ್ ನಿರ್ದೇಶಕರಾಗಿದ್ದ ಸಲೀಂ ಅವರನ್ನು ಸರ್ಕಾರ ಮೇ 21ರಂದು ಪ್ರಭಾರ ಡಿಜಿ–ಐಜಿಪಿ ಆಗಿ ನೇಮಕ ಮಾಡಲಾಗಿತ್ತು.

ನಿವೃತ್ತ ಡಿಜಿ–ಐಜಿಪಿ ಅಲೋಕ್ ಮೋಹನ್ ಅವರಿಂದ 43ನೇ ಡಿಜಿಪಿಯಾಗಿ ಸಲೀಂ ಅಧಿಕಾರ ಸ್ವೀಕರಿಸಿದ್ದರು.

# ಧರ್ಮಸ್ಥಳ ಕೇಸ್‌ಲ್ಲಿ ಎಸ್‌ಐಟಿ ತನಿಖೆಗೆ ಸಮಯ ನಿಗದಿ ಮಾಡಿಲ್ಲ: ಪರಮೇಶ್ವರ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.30:ಧರ್ಮಸ್ಥಳ ಕೇಸ್‌ಲ್ಲಿ ಎಸ್‌ಐಟಿ ತನಿಖೆ ಪೂರ್ಣ ಮಾಡಲು ಸಮಯ ನಿಗದಿ ಮಾಡಿಲ್ಲ. ಎಸ್‌ಐಟಿ ತನಿಖೆ ನಡೆಸುವಾಗಲೇ ಎನ್‌ಐಎ ತನಿಖೆಯೂ ಸಾಧ್ಯವಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ತನಿಖೆ ತ್ವರಿತವಾಗಿ ಆಗಬೇಕು ಎಂದು ಹೇಳಿದ್ರೆ ಎಸ್‌ಐಟಿ ಅವರಿಗೆ ಅವರದ್ದೇ ಆದ ತೀರ್ಮಾನ ಇರುತ್ತದೆ. ಎಸ್‌ಐಟಿ ಅವರು ತನಿಖೆ ಮಾಡುತ್ತಿದ್ದಾರೆ. ತನಿಖೆ ಮುಗಿಯೋವರೆಗೂ ಅವರು ಯಾವ ವಿಚಾರಗಳನ್ನು ಹೇಳುವ ಹಾಗೇ ಇಲ್ಲ. ನಾವು ಹೇಳೋ ಹಾಗೇ ಇಲ್ಲ. ತನಿಖೆ ತ್ವರಿತವಾಗಿ ಆಗಲಿ ಅಂತ ಹೇಳಬಹುದು. ಎಸ್‌ಐಟಿಗೆ ಟರ್ಮ್ಸ್ ಆಫ್ ರೆಫರೆನ್ಸ್ ಕೊಟ್ಟಿದ್ದೇವೆ ಅದನ್ನ ಮಾಡ್ತಾರೆ. ಅದರಲ್ಲಿ ಅವರಿಗೆ ಬೇರೆ ಬೇರೆ ಮಾಹಿತಿ ಸಿಗುವ ಹಾಗಿದ್ದರೆ ಅವರೇ ತನಿಖೆ ಮಾಡಿಕೊಳ್ತಾರೆ. ಅದಕ್ಕೆ ನಾವು ಯಾವುದೇ ಡೈರೆಕ್ಷನ್ಸ್ ಕೊಡೋದಿಲ್ಲ ಎಂದು ತಿಳಿಸಿದ್ದಾರೆ. ಸೌಜನ್ಯ ತಾಯಿ ಕೊಟ್ಟಿರುವ ದೂರು ತನಿಖೆ ಆಗುತ್ತಾ ಎಂಬ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅದನ್ನ ಎಸ್‌ಐಟಿ ಅವರು ಡಿಸೈಡ್ ಮಾಡ್ತಾರೆ. ಇದಕ್ಕೂ ಅದಕ್ಕೂ ಲಿಂಕ್ ಇದೆಯಾ? ಇಲ್ಲವಾ? ಹಾಗೂ ತನಿಖೆ ಮಾಡಬೇಕಾ? ಬೇಡವಾ? ಅಂತ ಎಸ್‌ಐಟಿ ನಿರ್ಧರಿಸಿ ತನಿಖೆ ಮಾಡುತ್ತದೆ.

# ನ್ಯಾಯಾಂಗ, ಪತ್ರಿಕಾರಂಗ ಬಲಿಷ್ಟಗೊಳಿಸೋಣ: ಉಪ ಲೋಕಾಯುಕ್ತರಾದ ನ್ಯಾ. ಬಿ.ವೀರಪ್ಪ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 30 : ಮಾಧ್ಯಮ ರಂಗವು ಈಗ ಮೊದಲಿನಂತಿಲ್ಲ, ಹಿಂದಿನವರಂತೆ ವಕೀಲರಲ್ಲೂ ಕೆಚ್ಚು ರೊಚ್ಚು ಕಾಣುತ್ತಿಲ್ಲ. ನಾಡಿನ ಸುರಕ್ಷತೆ ದೃಷ್ಟಿಯಿಂದ ಪತ್ರಿಕಾರಂಗ ಮತ್ತು ನ್ಯಾಯಾಂಗವನ್ನು ಬಲಿಷ್ಠಗೊಳಿಸೋಣ ಎಂದು ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಹೇಳಿದರು. ಆಗಸ್ಟ್ 30ರ ಶನಿವಾರ ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ರಾಯಚೂರು ಹಾಗೂ ವಕೀಲರ ಸಂಘದಿಂದ ಹಮ್ಮಿಕೊಂಡಿದ್ದ ಸಾರ್ವಜನಿಕ ಆಡಳಿತ ಮತ್ತು ಲೋಕಾಯುಕ್ತ ಕಾಯ್ದೆ 1988 ರಡಿಯಲ್ಲಿ ವಕೀಲರ ಪಾತ್ರದ ಕುರಿತು ಉಪನ್ಯಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸದ್ಯದ ಶಾಸಕಾಂಗ ಮತ್ತು ಕಾರ್ಯಾಂಗದ ವ್ಯವಸ್ಥೆಯ ಬಗ್ಗೆ ಜನರಿಗೆ ವಿಶ್ವಾಸ ಇಲ್ಲದಂತಾಗಿದೆ. ಈ ಬಗ್ಗೆ ವಕೀಲರು ಯೋಚಿಸಬೇಕು. ಜನರಿಗೆ ನ್ಯಾಯಾಂಗದ ಬಗ್ಗೆ ನಂಬಿಕೆ ಬರುವ ಹಾಗೆ ವಕೀಲರು ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳಬೇಕು. ಈ ಆಡಳಿತ ಸುಧಾರಣೆಯಲ್ಲಿ ನಮ್ಮ ಪಾತ್ರ ಇದೆ ಎಂದು ವಕೀಲರು ಮತ್ತು ಪತ್ರಕರ್ತರು ಸಹ ಯೋಚಿಸಬೇಕು. ಅನ್ಯಾಯದ ವಿರುದ್ಧ ಸಿಡಿದೇಳಬೇಕು. ಕಾರ್ಯಾಂಗವನ್ನು ಸರಿ ಮಾಡಲು ಶಕ್ತಿ ಮೀರಿ ಪ್ರಯತ್ನಿಸಬೇಕು. ಇರುವುದನ್ನು ಪತ್ರಕರ್ತರು ಬರೆಯಬೇಕು. ನ್ಯಾಯಾಧೀಶರ ಲೇಖನಿ ಬಲಿಷ್ಟವಾಗಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು. ವಕೀಲರು ಕಾನೂನು ಅಧ್ಯಯನ ಮಾಡಬೇಕು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಜೊತೆಗೆ ಕೈಜೋಡಿಸಿ ಹಾಸ್ಟೇಲ್, ಅಂಗನವಾಡಿ, ಶಾಲೆಗಳಿಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಬಗ್ಗೆ ಪರಿಶೀಲಿಸಬೇಕು. ಕಾಯಾ ವಾಚಾ ಮನಸಾ ಕೆಲಸ ಮಾಡಬೇಕು ಎಂದು ಸಲಹೆ ಮಾಡಿದರು. ವಕೀಲರಿಗೆ ಹಣದ ವ್ಯಾಮೋಹ ಇರಬಾರದು. ಕಕ್ಷಿದಾರರು 1 ರೂಪಾಯಿ ನೀಡಿದರು ತಮ್ಮ ಕಾರ್ಯವನ್ನು ನಿಷ್ಠೆಯಿಂದ ಮಾಡಬೇಕು. ಹಣ ಪಡೆದು ಕೋರ್ಟಗೆ ಹೋದರೆ ಅದು ಮೋಸ ಎಂದು ತಿಳಿಯಬೇಕು.

ನಮ್ಮ ದೇಶದ ಸ್ವಾತಂತ್ರ್ಯದ ಹೋರಾಟದಲ್ಲಿ ಪತ್ರಿಕೆಗಳು ಮತ್ತು ಪತ್ರಕರ್ತರ ಪಾತ್ರವು ಸಹ ಪ್ರಮುಖವಾಗಿತ್ತು. ಇತ್ತೀಚಿನ ದಿನಗಳಲ್ಲಿ ಪತ್ರಿಕಾ ರಂಗವು ದುರ್ಬಲವಾಗುತ್ತಿದೆ. ಗಾಂಧೀಜಿಯವರು ಕಂಡ ರಾಮರಾಜ್ಯದ ಕನಸು ನನಸಾಗಲು ಪತ್ರಿಕಾರಂಗ ಹಾಗೂ ನ್ಯಾಯಾಂಗವು ಬಲಿಷ್ಠವಾಗಬೇಕು ಎಂದು ಅವರು ಸಲಹೆ ಮಾಡಿದರು.

ನಾವು ತಿನ್ನುವ ಅನ್ನವು ನಮ್ಮದಾಗಿರಬೇಕು. ಬೇರೆಯವರ ಅನ್ನ ತಿಂದರೆ ಅದು ವಿಷಕ್ಕೆ ಸಮ ಎನ್ನುವ ತತ್ವ ಅರಿತು ನಡೆಯಬೇಕು.

ಜನರಲ್ಲಿ ಪ್ರೀತಿ, ಪ್ರೇಮ ವಿಶ್ವಾಸ ಬೆಳೆಸಬೇಕು. ನಿಷ್ಠೆಯಿಂದ ಜೀವನ ನಡೆಸಬೇಕು ಎಂದು ಉಪ ಲೋಕಾಯುಕ್ತರು ವಕೀಲರಿಗೆ ಮತ್ತು ಪತ್ರಕರ್ತರಿಗೆ ಸಲಹೆ ಮಾಡಿದರು.

ಜಾತಿಗೊಂದು, ಧರ್ಮಕ್ಕೊಂದು ನ್ಯಾಯಾಲಯ ನಮ್ಮಲ್ಲಿ ಇಲ್ಲ. ಎಲ್ಲರಿಗೂ ಒಂದೇ ನ್ಯಾಯಾಲಯ ಅನ್ನುವುದೇ ವಿಶೇಷ. ದೇವರಿಂದ ಸಿಗದಿದ್ದರು ನ್ಯಾಯ ನೀಡುವ ನ್ಯಾಯಾಲಯವೇ ನಮಗೆ ದೇವಸ್ಥಾನವಿದ್ದಂತೆ. ಹಾಗಾಗಿ ನಾವು ಯಾವುದೇ ಜಾತಿ, ಧರ್ಮದ ಬೇಧ–ಭಾವ ಮಾಡದೇ ಕಾರ್ಯನಿರ್ವಹಿಸಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು. ಮಹಾತ್ಮಗಾಂಧೀಜಿಯವರು ಸಹ ವಕೀಲರಾಗಿದ್ದರು. ಅಂತಹ ಮಹನಿಯರ ಜೀವನ ಮೌಲ್ಯ ಪಾಲನೆ ಮಾಡಬೇಕು. ಯುವ ವಕೀಲರು ಶಿಸ್ತು ರೂಢಿಸಿಕೊಳ್ಳಬೇಕು. ನ್ಯಾಯಾಧೀಶರು ಸಹ ಗೌರವಿಸುವ ಹಾಗೆ ಡ್ರೆಸ್ ಹಾಕಬೇಕು ಎಂದು ಸಲಹೆ ಮಾಡಿದರು.

ಸಮಾರಂಭದಲ್ಲಿ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಾರುತಿ ಎಸ್. ಬಾಗಡೆ, ಕರ್ನಾಟಕ ಲೋಕಾಯುಕ್ತರ ಅಪರ ನಿಬಂಧಕರು ಆಗಿರುವ ನ್ಯಾಯಾಧೀಶರಾದ ರಮಾಕಾಂತ್ ಚವ್ಹಾಣ, ಶಿವಾಜಿ ನಾಲವಾಡೆ, ಕರ್ನಾಟಕ ಲೋಕಾಯುಕ್ತರ ಉಪ ನಿಬಂಧಕರು ಮತ್ತು ನ್ಯಾಯಾಧೀಶರಾದ ಅರವಿಂದ, ಗೌರವಾನ್ವಿತ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ಪ್ರಧಾನ ಕಾರ್ಯದರ್ಶಿ ಲಕ್ಷ್ಮಪ್ಪ ಭಂಡಾರಿ ಸೇರಿದಂತೆ ವಿವಿಧ ವಿಭಾಗದ ನ್ಯಾಯಾಧೀಶರು, ವಕೀಲರು ಹಾಗೂ ಸಿಬ್ಬಂದಿ ಇದ್ದರು.

# ಸುತ್ತೂರು ಶ್ರೀಗಳು ಅನ್ನ, ಅಕ್ಷರ ದಾಸೋಹದ ಕ್ರಾಂತಿಕಾರರು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.30–ಸುತ್ತೂರು ರಾಜೇಂದ್ರ ಶ್ರೀಗಳು ಅನ್ನ, ಅಕ್ಷರ ದಾಸೋಹದ ಮೂಲಕ ಬಡಮಕ್ಕಳ ಭವಿಷ್ಯ ಕಟ್ಟಿದವರು ಎಂದು ಇಳಕಲ್ಲಿನ ಗುರುಮಹಾಂತ ಶ್ರೀಗಳು ಹೇಳಿದರು.

ಜಿಲ್ಲೆಯ ಹುನಗುಂದ ನಗರದಲ್ಲಿ ಶನಿವಾರ ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಹಾಗೂ ಶರಣ ದಂಪತಿಗಳಾದ ಗೀತಾ ಹಾಗೂ ಬಸವರಾಜ ಅಂಗಡಿ ಅವರ ಮನೆಯಲ್ಲಿ ಹಮ್ಮಿಕೊಂಡಿದ್ದ ಸುತ್ತೂರು ರಾಜೇಂದ್ರ ಶ್ರೀಗಳ 110 ನೇ ಜಯಂತ್ಯುತ್ಸವ,

35 ನೇ ಮನೆ ಮನಗಳಿಗೆ ವಚನ ಸೌರಭ ಕಾರ್ಯಕ್ರಮ ಉದ್ಘಾಟಿಸಿ ಪೂಜ್ಯರು ಮಾತನಾಡಿದರು.


ರಾಜೇಂದ್ರ ಶ್ರೀಗಳು ನೂರಾರು ಶಿಕ್ಷಣ ಸಂಸ್ಥೆಗಳನ್ನು ಹುಟ್ಟು ಹಾಕಿ ಬಡ ಮಕ್ಕಳಿಗೆ ಶಿಕ್ಷಣ, ಅನ್ನ ನೀಡಿ ಅವರ ಎದೆಯಲ್ಲಿ ಅಕ್ಷರದ ಬೀಜ ಬಿತ್ತಿದ ಮಹಾನ್ ಗುರುಗಳಾಗಿದ್ದಾರೆ. ಮೈಸೂರ ಪ್ರಾಂತ್ಯದಲ್ಲಿ ಮಾತ್ರ ಶಿಕ್ಷಣ ಸಂಸ್ಥೆಗಳನ್ನು ಹಾಗೂ ವಿದ್ಯಾರ್ಥಿ ವಸತಿ ನಿಲಯಗಳನ್ನು ತೆರೆಯದೇ ನಾನಾ ಭಾಗಗಳಲ್ಲಿ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿದರು. ಅಷ್ಟೇ ಅಲ್ಲದೇ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಸ್ಥಾಪಿಸಿದರು ಎಂದು ಗುರುಮಹಾಂತ ಶ್ರೀಗಳು ಹೇಳಿದರು. ಎಂದರು. ಅನುಭಾವ ನುಡಿಗಳನ್ನಾಡಿದ ಡಾ.ಶಿವಗಂಗಾ ರಂಜಣಗಿ, ಸುತ್ತೂರು ರಾಜೇಂದ್ರ ಶ್ರೀಗಳು, ದೇಶದಲ್ಲಿ ಬ್ರಿಟಿಷ ಸರ್ಕಾರ ಇದ್ದಾಗ ಬಡ ಮಕ್ಕಳಿಗಾಗಿ ಮಠದ ಶಿಷ್ಯರ ಮೂಲಕ ಶಿಕ್ಷಣ ಸಂಸ್ಥೆಗಳನ್ನು, ವಸತಿ ನಿಲಯ, ಅನ್ನ ದಾಸೋಹ, ಸಂಸ್ಕೃತ ಪಾಠಶಾಲೆ, ಶರಣ ಸಾಹಿತ್ಯ ಪರಿಷತ್ತು, ಮೆಡಿಕಲ್, ಎಂಜಿನಿಯರಿಂಗ್, ಆಯುರ್ವೇದ

ಮೊದಲಾದ 400 ಕ್ಕೂ ಹೆಚ್ಚು ಸಂಸ್ಥೆಗಳನ್ನು ಸ್ಥಾಪಿಸಿದರು ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರೊ.ಎಸ್.ಎನ್.ಹಾದಿಮನಿ,

ಸುತ್ತೂರು ರಾಜೇಂದ್ರ ಗುರುಗಳು ಮಾಡಿದ ಕಾರ್ಯಗಳಿಂದ ಬಸವಾದಿ ಶರಣರ ವಚನಗಳನ್ನು ಶರಣ ಸಾಹಿತ್ಯ ಪರಿಷತ್ತಿನ ಮೂಲಕ ಮನೆ ಮನಗಳಿಗೆ ವಚನ ಸೌರಭ ಕಾರ್ಯಕ್ರಮದ ಮೂಲಕ ತಲುಪಿಸಲು ಸಹಾಯಕವಾಗಿದೆ ಎಂದರು.

ಸಭೆಯಲ್ಲಿ ಭಕ್ತಿ ಸೇವೆ ಮಾಡಿದ ಅಂಗಡಿ ದಂಪತಿಗಳನ್ನು ಪೂಜ್ಯರು ಗೌರವಿಸಿದರು. ಕುಮಾರಿ ಕೃತಿ–ಕಾ ಇದ್ದಲಗಿ ವಚನ ಪ್ರಾರ್ಥನೆ ಮಾಡಿದರು ತಾಲೂಕಾ ವಚನ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಭು ಮಾಲಗಿತ್ತಿಮಠ ಸ್ವಾಗತಿಸಿದರು. ಪರಿಷತ್ತಿನ ಕಾರ್ಯದರ್ಶಿ ಸಂಗಮೇಶ ಹೊದ್ಲೂರ ನಿರೂಪಣೆ ಮಾಡಿದರು.

# ಎಲ್ಲ ಯುದ್ಧ ನೌಕೆಗಳನ್ನು ಭಾರತದಲ್ಲೇ ತಯಾರಿಸಲಾಗುತ್ತದೆ



ನವದೆಹಲಿ:ಅ.30: ಇನ್ನು ಮುಂದೆ ಎಲ್ಲ ಯುದ್ಧ ನೌಕೆಗಳನ್ನು ಭಾರತದಲ್ಲೇ ತಯಾರಿಸಲಾಗುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಶನಿವಾರ ದೆಹಲಿಯಲ್ಲಿ ನಡೆಯುತ್ತಿರುವ ರಕ್ಷಣಾ ಶೃಂಗಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ರಾಜನಾಥ್ ಸಿಂಗ್, 'ಭಾರತದ ಯುದ್ಧನೌಕೆಗಳನ್ನು ಭಾರತದಲ್ಲಿ ತಯಾರಿಸಲಾಗುವುದು. ಜಾಗತಿಕ ಆರ್ಥಿಕ ಮತ್ತು ಭೌಗೋಳಿಕ ರಾಜಕೀಯ ಸವಾಲುಗಳ ನಡುವೆ ದೇಶದ ಮಿಲಿಟರಿ ಸಾಮರ್ಥ್ಯ ಮತ್ತು ಶಕ್ತಿಯನ್ನು ಹೆಚ್ಚಿಸಲು 'ಆತ್ಮನಿರ್ಭರ ಭಾರತ'ದತ್ತ ನವೀಕೃತ ಒತ್ತಡವನ್ನು ಒತ್ತಿ ಹೇಳಿದರು.

'ಈ ಮಟ್ಟದ ಸ್ಥಳೀಯ ಅಭಿವೃದ್ಧಿ – ಹೊಸ ಯುದ್ಧನೌಕೆಗಳಲ್ಲಿ ಪ್ರತಿಯೊಂದರಲ್ಲೂ ಶೇಕಡಾ 75 ರಷ್ಟು ಸ್ಥಳೀಯವಾಗಿ ವಿನ್ಯಾಸಗೊಳಿಸಲಾಗಿದೆ – ಭಾರತದ ಕಾರ್ಯತಂತ್ರದ ಸ್ವಾಯತ್ತತೆಯನ್ನು ಮಾತ್ರ ಬಲಪಡಿಸಬಹುದು. ಭಾರತದ ರಕ್ಷಣಾ ಸಾಮರ್ಥ್ಯಗಳಿಗೆ ಜಗತ್ತು ಸಾಕ್ಷಿಯಾಗಿದೆ ಎಂದರು.

'ನಮ್ಮ ಪಡೆಗಳು, ಸ್ಥಳೀಯ ಉಪಕರಣಗಳೊಂದಿಗೆ, ತಮ್ಮ ಗುರಿಗಳ ಮೇಲೆ ನಿಖರವಾದ ದಾಳಿಗಳನ್ನು ನಡೆಸಿದ ರೀತಿ, ಯಾವುದೇ ಕಾರ್ಯಾಚರಣೆಯು ದೂರದೃಷ್ಟಿ, ದೀರ್ಘಾವಧಿಯ ಸಿದ್ಧತೆ ಮತ್ತು ಸಮನ್ವಯವಿಲ್ಲದೆ ಯಶಸ್ವಿಯಾಗಲು ಸಾಧ್ಯವಿಲ್ಲ ಎಂದು ತೋರಿಸುತ್ತದೆ" ಎಂದು ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಕುರಿತು ಹೇಳಿದರು.

"ಆಪರೇಷನ್ ಸಿಂದೂರ್ ಕೆಲವೇ ದಿನಗಳ ಯುದ್ಧದಂತೆ ಕಾಣಿಸಬಹುದು. ಭಾರತದ ಗೆಲುವು ಮತ್ತು ಪಾಕಿಸ್ತಾನದ ಸೋಲಿನ ಕಥೆಯಂತೆ ಕಾಣಿಸಬಹುದು. ಆದರೆ ಅದರ ಹಿಂದೆ ವರ್ಷಗಳ ಕಾರ್ಯತಂತ್ರದ ಸಿದ್ಧತೆ ಮತ್ತು ರಕ್ಷಣಾ ಸನ್ನದ್ಧತೆಯ ದೀರ್ಘ ಪಾತ್ರವಿದೆ ಎಂದರು.

ಇತ್ತೀಚೆಗಷ್ಟೇ ಭಾರತದಲ್ಲಿ ತಯಾರಿಸಲಾದ' ನೀಲಗಿರಿ–ವರ್ಗದ ಸ್ಟೆಲ್ತ್ ಫ್ರಿಗೇಟ್‌ಗಳು – ಐಎನ್‌ಎಸ್ ಹಿಮಗಿರಿ ಮತ್ತು ಐಎನ್‌ಎಸ್ ಉದಯಗಿರಿ ಯುದ್ಧ ನೌಕೆಗಳು ಕಾರ್ಯಾರಂಭ ಮಾಡಿದ ಬೆನ್ನಲ್ಲೇ ರಕ್ಷಣಾ ಸಚಿವರ ಈ ಹೇಳಿಕೆ ಮಹತ್ವ ಪಡೆದಿದೆ.

ಇದೇ ವೇಳೆ ಆಂತರಿಕ ಮಿಲಿಟರಿ ಅಭಿವೃದ್ಧಿಯ ಮತ್ತೊಂದು ಅಂಶವನ್ನು ಸಹ ಸಚಿವರು ಪ್ರಸ್ತಾಪಿಸಿದರು. ಶಸ್ತ್ರಾಸ್ತ್ರಗಳು ಮತ್ತು ಶಸ್ತ್ರಾಸ್ತ್ರ ವ್ಯವಸ್ಥೆಗಳ ರಫ್ತಿನಿಂದ ಬರುವ ಆದಾಯ. "2014 ರಲ್ಲಿ, ನಮ್ಮ ರಕ್ಷಣಾ ರಫ್ತು 700 ಕೋಟಿ ರೂ. ಗಳಿಗಿಂತ ಕಡಿಮೆಯಿತ್ತು.

ಇಂದು ಅದು ಸುಮಾರು 24,000 ಕೋಟಿ ರೂ.ಗಳಿಗೆ ಏರಿದೆ. ದಾಖಲೆಯ ಮಟ್ಟವನ್ನು ತಲುಪಿದೆ. ಇದು ಭಾರತ ಇನ್ನು ಮುಂದೆ ಕೇವಲ ಖರೀದಿದಾರನಲ್ಲ. ಅದು ರಫ್ತುದಾರನಾಗುತ್ತಿದೆ ಎಂಬುದನ್ನು ತೋರಿಸುತ್ತದೆ. ಈ ವಿಧಾನವು ಮುಂಬರುವ ದಿನಗಳಲ್ಲಿ ನಮ್ಮನ್ನು ಸುರಕ್ಷಿತವಾಗಿರಿಸುತ್ತದೆ ಮತ್ತು ವಿಶ್ವದ ಉದಯೋನ್ಮುಖ ಶಕ್ತಿಗಳಲ್ಲಿ ನಮಗೆ ಪ್ರಮುಖ ಸ್ಥಾನವನ್ನು ನೀಡುತ್ತದೆ" ಎಂದು ಹೇಳಿದರು.

ವಿದೇಶಿ ಹಸ್ತಕ್ಷೇಪ ಬೇಕಿಲ್ಲ

ಇದೇ ವೇಳೆ ಭಾರತದ ರಕ್ಷಣಾ ರಚನೆಯು ಯಾವುದೇ ಅನಿಶ್ಚಿತ "ವಿದೇಶಿ ಹಸ್ತಕ್ಷೇಪ" ವನ್ನು ಅವಲಂಬಿಸಿರಬಾರದು ಮತ್ತು ಅದು ತನ್ನದೇ ಆದ ಸಾಮರ್ಥ್ಯಗಳನ್ನು ಆಧರಿಸಿರಬೇಕು ಎಂದು ರಾಜನಾಥ್ ಸಿಂಗ್ ಹೇಳಿದರು.

'ಮುಂದಿನ 10 ವರ್ಷಗಳಲ್ಲಿ ಪ್ರಸ್ತಾವಿತ ಸುದರ್ಶನ ಚಕ್ರ ವಾಯು ರಕ್ಷಣಾ ವ್ಯವಸ್ಥೆಯಡಿಯಲ್ಲಿ ದೇಶಾದ್ಯಂತದ ಎಲ್ಲಾ ಪ್ರಮುಖ ಸ್ಥಾಪನೆಗಳಿಗೆ ಸಂಪೂರ್ಣ ವೈಮಾನಿಕ ಭದ್ರತೆಯನ್ನು ಒದಗಿಸಲು ಸರ್ಕಾರ ಯೋಜಿಸಿದೆ. ಯಾವುದೇ ಶತ್ರು ಬೆದರಿಕೆಗಳನ್ನು ಎದುರಿಸಲು ವಾಯು ರಕ್ಷಣಾ ಗುರಾಣಿ ರಕ್ಷಣಾತ್ಮಕ ಮತ್ತು ಆಕ್ರಮಣಕಾರಿ ಅಂಶಗಳನ್ನು ಒಳಗೊಂಡಿರುತ್ತದೆ' ಎಂದರು.

'ಆಪರೇಷನ್ ಸಿಂಧೂರ್ ಸಮಯದಲ್ಲಿ ನಾವು ನೋಡಿದಂತೆ, ಇಂದಿನ ಯುದ್ಧಗಳಲ್ಲಿ ವಾಯು ರಕ್ಷಣಾ ಸಾಮರ್ಥ್ಯದ ಪ್ರಾಮುಖ್ಯತೆಯು ಹೆಚ್ಚಿನ ಪ್ರಮಾಣದಲ್ಲಿ ಹೆಚ್ಚಾಗಿದೆ. ಅಂತಹ ಸನ್ನಿವೇಶದಲ್ಲಿ, ಸುದರ್ಶನ ಚಕ್ರ ಕಾರ್ಯಾಚರಣೆಯು ಖಂಡಿತವಾಗಿಯೂ ಗಣನೀಯ ಬದಲಾವಣೆಯನ್ನು ತರುತ್ತದೆ" ಎಂದು ಹೇಳಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.